ಸಂಪುಟ: 14 Volume | ಸಂಚಿಕೆ: 09 Issue | ಪುಟಗಳು 08 Pages | ಶುಕ್ರವಾರ 10 ಏಪ್ರಿಲ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | mallammanudi@gmail.com | www.mallammanudi.in | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ | ಪ್ರಧಾನ ಸಂಪಾದಕರು: ಮಾಣಿಕರೆಡ್ಡಿ, ಕೌಡಾಳೆ

**ಬೆಳಗು**

ಅನ್ಯರನ್ನು ಆಳು ಮಾಡದೆ, ತನ್ನ ತಾನಾಳಿದರೆ ಅದೇ ಬಿಡುಗಡೆ.

–ದ.ರಾ.ಬೇಂದ್ರೆ



ಮಾನ್ಯ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಶ್ರೀ ಹೆಚ್.ಡಿ. ಕುಮಾರಸ್ವಾಮಿ ಅವರು ಇಂದು ಬೆಳಗ್ಗೆ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಪರಮಪೂಜ್ಯ ಜಗದ್ಗುರುಗಳಾದ ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ ಅವರನ್ನು ಭೇಟಿಯಾಗಿ ಆಶೀರ್ವಾದ ಪಡೆದರು.

## ಪಿಯುಸಿ ನಂದಿತಾ ಉತ್ತಮ ಸಾಧನೆ



**ಆಲಮಟ್ಟಿ:** ಬಾಪೂಜಿ ಇಂಡಿಪೆಂಡೆಂಟ್ ಪಿಯು ಕಾಲೇಜ್ ಬಾಡಗಂಡಿ ಬೀಳಗಿ ವಿಜ್ಞಾನ ವಿಭಾಗದಲ್ಲಿ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆಯನ್ನು ಮಾಡಿದ್ದಾರೆ ನಂದಿತಾ ರಾಜಶೇಖರ್ ಹಿರೇಮಠ 600/566 ಅಂಕಗಳನ್ನು ಪಡೆದು 94.33% ಉತ್ತಮ ಸಾಧನೆಯನ್ನು ಮಾಡಿದ್ದಾರೆ ಶಾಲಾ ಆಡಳಿತ ಮಂಡಳಿ ಅಭಿನಂದಿಸಿದ್ದಾರೆ.

## ದಟ್ಟ ಕಾನನದ ನಡುವೆ ಹುಡುಗಿ ಕಾಣೆ

**ಚಿಕ್ಕಮಗಳೂರು:** ಜಿಲ್ಲೆಯ ದತ್ತಪೀಠದ ತಪ್ಪಲಿನ ಮಾಣಿಕ್ಯಾದಾರಕ್ಕೆ ಕುಟುಂಬದ ಜೊತೆ ಬಂದಿದ್ದ 15 ವರ್ಷದ ಬಾಲಕಿ ಶ್ರೀನಂದಾ ಇದ್ದಕ್ಕಿದ್ದಂತೆ ಆ ದಟ್ಟ ಕಾನನದಲ್ಲಿ ಕಾಣೆಯಾಗಿದ್ದಾಳೆ. ಎರಡು ದಿನ ಕಳೆದರೂ ಸುಳಿವು ಸಿಕ್ಕಿಲ್ಲ.ಈ ಸುದ್ದಿ ತಿಳಿಯುತ್ತಿದ್ದಂತೆಯೇ ಅರಣ್ಯ ಸಚಿವ ಈಶ್ವರ ಬಿ. ಖಂಡ್ರೆ ಅವರು ಇದನ್ನು ಗಂಭೀರವಾಗಿ ಪರಿಗಣಿಸಿದ್ದು, ಸಮರೋಪಾದಿಯಲ್ಲಿ ರಕ್ಷಣಾ ಕಾರ್ಯಕ್ಕೆ ಮುಂದಾಗಿದ್ದಾರೆ .ಎಸ್ಎಸ್ಎಲ್‌ಸಿ ಓದುತ್ತಿದ್ದ ಬಾಲಕಿ ಶ್ರೀನಂದಾ ಮಂಗಳವಾರ ಸಂಜೆ 5.30 ಕ್ಕೆ ನಾಪತ್ತೆಯಾಗಿದ್ದಾಳೆ.

## ಬಿಸಿಲ ಧಗೆ, ಜನ ಕಂಗೆಟ್ಟರು ಬಗೆ ಬಗೆ

**ಬೆಂಗಳೂರು:** ಬೆಂಗಳೂರಿನಲ್ಲಿ 35.2 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ. ವಾಡಿಕೆಗಿಂತ 1.5 ಡಿಗ್ರಿ ಹೆಚ್ಚು ಎಂದು ವರದಿಯಾಗಿದೆ. ಏಪ್ರಿಲ್‌ನಲ್ಲಿ ಬೆಂಗಳೂರಿನ ಗರಿಷ್ಠ ಉಷ್ಣಾಂಶ 32ರಿಂದ 33 ಡಿಗ್ರಿ ಇರಬಹುದು.



ಹೆಚ್ಎಎಲ್ ಏರ್ಪೋರ್ಟ್, ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶಗಳಲ್ಲಿ 35 ಡಿಗ್ರಿ ಸೆ. ದಾಖಲಾಗಿದ್ದು, ಈ ತೀವ್ರತೆ ಜನರನ್ನು ಕಂಗೆಡಿಸಿದೆ. ಕಲ್ಬುರ್ಗಿಯಲ್ಲಿ 39.2 ಡಿಗ್ರಿ, ರಾಯಚೂರಲ್ಲಿ 38.4 ಡಿಗ್ರಿ ಉಷ್ಣಾಂಶ ದಾಖಲಾಗಿದೆ. ಇನ್ನು ವಿಜಯಪುರ, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ 37 ಡಿಗ್ರಿಗೂ ಹೆಚ್ಚು ತಾಪಮಾನ ದಾಖಲಾಗಿರುವುದು ಆತಂಕ ಹೆಚ್ಚಿಸಿದೆ.

ರೈತರ ಅಭ್ಯುದಯಕ್ಕೆ ಸರ್ಕಾರ ಬದ್ಧ: ಪ್ರಿಯಾಂಕ್ 6

ಸಮರ್ಪಕ ನೀರು ಪೂರೈಕೆಯಾಗಲಿ 7


ಕುಡಿಯುವ ನೀರಿನ ಸಮಸ್ಯೆ ಇಲ್ಲ 8

## ರೈಲಲ್ಲಿ ಪ್ರಯಾಣಿಸಿದ ಕೇಂದ್ರ ಸಚಿವ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಐದು ಗಂಟೆಗಳ ಕಾಲ ಬೆಂಗಳೂರಿನಿಂದ ಮೈಸೂರಿಗೆ ವಿಶೇಷ ರೈಲಿನಲ್ಲಿ ಪ್ರಯಾಣ ಮಾಡಿ ಆ ಮಾರ್ಗದಲ್ಲಿ ನಡೆಯುತ್ತಿರುವ ರೈಲ್ವೆ ಇಲಾಖೆಗೆ ಸಂಬಂಧಿಸಿದ ಅಭಿವೃದ್ಧಿ ಕಾರ್ಯಗಳನ್ನು ಪರಿವೀಕ್ಷಣೆ ನಡೆಸಿದ್ದು ನನಗೆ ವಿಶೇಷ ಅನುಭವವಾಗಿದೆ ಎಂದು ಸಚಿವ ಎಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ.

ರೈಲು ರೈಲು ಪ್ರಯಾಣದ ನಡುವೆ ತಮ್ಮನ್ನು ಭೇಟಿಯಾದ ಮಾಧ್ಯಮಗಳ ಜೊತೆ ಮಾತನಾಡಿದ ಕೇಂದ್ರ ಸಚಿವರು, ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವರಾದ ವಿ. ಸೋಮಣ್ಣ ಅವರೊಂದಿಗೆ ಇಂದು ಬೆಳಗ್ಗೆ ಬೆಂಗಳೂರಿನ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣದಿಂದ ಬೆಳಗ್ಗೆ 10 ಗಂಟೆಗೆ ಹೊರಟು ಅಪರಾಹ್ನ



3 ಗಂಟೆಗೆ ಮೈಸೂರು ತಲುಪಿದ್ದೇವೆ. ವಿಂಡೋ ಟ್ರೈಲಿಂಗ್ ಮೂಲಕ ಪರಿವೀಕ್ಷಣೆ ನಡೆಸಲಾಯಿತು ಎಂದು ವಿವರಿಸಿದ್ದಾರೆ.

ಮೈಸೂರು ಜಿಲ್ಲೆಗಳಲ್ಲಿ ಹಾದುಹೋಗುವ ರೈಲು ಮಾರ್ಗದ ವ್ಯಾಪ್ತಿಯಲ್ಲಿ ಬರುವ ನಿಲ್ದಾಣಗಳ ಅಭಿವೃದ್ಧಿ, ಹೆಚ್ಚುವರಿ ರೈಲುಗಳ ಸಂಚಾರ, ಪ್ರಮುಖ ರೈಲುಗಳ ನಿಲುಗಡೆ, ಬಗ್ಗೆ ಸಚಿವ ಸೋಮಣ್ಣ ಅವರೊಂದಿಗೆ ಮಾತುಕತೆ ನಡೆಸಿದ್ದೇನೆ ಎಂದಿದ್ದಾರೆ.

## ಪತ್ರಕರ್ತರ ಸಮ್ಮೇಳನಕ್ಕೆ ಸಕಲ ಸಜ್ಜು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ನಾಡಿನ ಮುಕುಟಪ್ರಾಯವಾಗಿರುವ ಬೀದರನಲ್ಲಿ ಇದೇ 11 ಮತ್ತು 12ರಂದು ನಡೆಯಲಿರುವ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನಕ್ಕೆ ಸಿದ್ಧತೆಗಳು ಪೂರ್ಣಗೊಂಡಿದ್ದು, ಸುದ್ದಿಮನೆಯ ಪತ್ರಕರ್ತರನ್ನು ಸ್ವಾಗತಿಸಿಕೊಳ್ಳಲು ಬಸವನ ನಾಡು ಬೀದರ ಸಜ್ಜಾಗಿದೆ.

ಬೆಂಗಳೂರು ಪ್ರೆಸ್ ಕ್ಲಬ್‌ನಲ್ಲಿ ಸಮ್ಮೇಳನದ ಆಹ್ವಾನ ಪತ್ರಿಕೆ ಬಿಡುಗಡೆ ಮಾಡಿ ಮಾತನಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯುಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಎರಡು ದಶಕಗಳ ಬಳಿಕ ಬೀದರ್‌ನಲ್ಲಿ ನಡೆಯುತ್ತಿರುವ ಸಮ್ಮೇಳನಕ್ಕೆ ಎರಡು ದಿನಗಳಲ್ಲಿ 5 ಸಾವಿರ ಪತ್ರಕರ್ತರು ಭಾಗಿಯಾಗುವ ನಿರೀಕ್ಷೆ ಇದೆ ಎಂದು ಹೇಳಿದ್ದಾರೆ.



ಈ ಸಮ್ಮೇಳನದಲ್ಲಿ ಗಾಂಧಿ ಮತ್ತು ಅಂಬೇಡ್ಕರ್ ಕುರಿತು ಗೋಷ್ಠಿ, ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮತ್ತು ಮಾಧ್ಯಮ ಗೋಷ್ಠಿ, ಮಾಹಿತಿ ಹಕ್ಕು ಮತ್ತು ಪತ್ರಕರ್ತರು ಗೋಷ್ಠಿ, ಆರ್ಟಿಫಿಷಿಯಲ್ ಇಂಟಲಿಜೆನ್ಸಿ ಮತ್ತು ಡಿಜಿಟಲೀಕರಣ ಪ್ರಭಾವ ಕುರಿತಾದ ಗೋಷ್ಠಿಗಳು ನಡೆಯಲಿವೆ. ಗಡಿ ಭಾಗದ ಸಮಸ್ಯೆ ಬಗ್ಗೆ ಸಂವಾದ ಕೂಡ ಇರಲಿದೆ. ಮಾಧ್ಯಮ ಮತ್ತು ಉದ್ಯಮದ ಬಗ್ಗೆ ಉಪನ್ಯಾಸವನ್ನು ಏರ್ಪಡಿಸಲಾಗಿದೆ ಎಂದು ವಿವರಿಸಿದ್ದಾರೆ.

# ಬೈ ಎಲೆಕ್ಷನ್ ಭರ್ಜರಿ ಮತ

### ಹಲವೆಡೆ ಕಲಹ | ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳಲ್ಲಿ ಉತ್ತಮ ಪ್ರತಿಕ್ರಿಯೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ/ದಾವಣಗೆರೆ

ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಪ್ರತಿಷ್ಠೆಯ ಕಣವಾಗಿದ್ದ ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ಭರ್ಜರಿ ಮತದಾನವಾಗಿದೆ. ಕೆಲವು ಸಣ್ಣಪುಟ್ಟ ಗೊಂದಲ, ಮಾತಿನ ಚಕಮಕಿ, ಹಣ ಹಂಚಿಕೆ ಆರೋಪ, ಇವಿಎಂ ಸಮಸ್ಯೆ ಹೊರತುಪಡಿಸಿದರೆ ಸರಾಸರಿ ಶೇ.70ಕ್ಕೂ ಹೆಚ್ಚು ಮತದಾನ ಆಗಿರುವುದಾಗಿ ಚುನಾವಣಾ ಆಯೋಗ ಸ್ಪಷ್ಟಪಡಿಸಿದೆ.

**ಎರಡೂ ಕ್ಷೇತ್ರಗಳಲ್ಲಿ ಉತ್ತಮ:** ಬೆಳಗ್ಗೆ 7 ಗಂಟೆಯಿಂದ ಆರಂಭವಾದ ಮತದಾನಕ್ಕೆ ಎರಡೂ ಕ್ಷೇತ್ರಗಳಲ್ಲೂ ಮತದಾರರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಮಧ್ಯಾಹ್ನದ ವೇಳೆಗೆ ಮತದಾನದ ಪ್ರಮಾಣ ಶೇ.50 ದಾಟಿತ್ತು. ಬಿಜೆಪಿ, ಕಾಂಗ್ರೆಸ್, ಪಕ್ಷೇತರ ಅಭ್ಯರ್ಥಿಗಳ ರಾಜಕೀಯ ಭವಿಷ್ಯವು ಇವಿಎಂನಲ್ಲಿ ಭದ್ರವಾಗಿದ್ದು, ಮೇ 4ರಂದು ಮತ ಎಣಿಕೆ ಆಘಲಿದ್ದು ವಿಜಯಲಕ್ಷ್ಮಿ ಯಾರಿಗೆ ಒಲಿಯುತ್ತಾಳೆ? ಅಂದೇ ನಿರ್ಧಾರವಾಗಲಿದೆ.

**ಬಿಸಿಲನ್ನೂ ಲೆಕ್ಕಿಸದ ಮತದಾರ:** ಬಿಜೆಪಿ–ಕಾಂಗ್ರೆಸ್ ಎರಡೂ ಕಡೆ ಮತದಾರರು ಬೆಳಗ್ಗಿಯಿಂದಲೇ ಮತಗಟ್ಟೆಗಳಿಗೆ ಆಗಮಿಸಿ ತಮ ಹಕ್ಕನ್ನು ಚಲಾಯಿಸಿದ್ದಾರೆ. 85 ವರ್ಷ ಮೇಲ್ಪಟ್ಟ ಹಿರಿಯರಿಗೆ ಮನೆಯಿಂದಲೇ ಮತದಾನ ಚಲಾಯಿಸಲು ಅವಕಾಶ ಕಲ್ಪಿಸಲಾಗಿತ್ತು. ಮತದಾನ ಆರಂಭವಾಗುತ್ತಿದ್ದಂತೆ ಸುಡುವ ಬಿಸಲನ್ನು ಲೆಕ್ಕಿಸದೆ ಮತದಾರರು ಮತಗಟ್ಟೆಗೆ ಬಂದು ಸರತಿಯಲ್ಲಿ ನಿಂತು ಮತ ಚಲಾಯಿಸಿದ್ದಾರೆ.



### ಇಬ್ಬರ ನಡುವೆ ಗೆಲುವು..?

ಬಾಗಲಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ಉತ್ತಮ ಮತದಾನವಾಗಿದೆ. ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ಕುಟುಂಬ ಸಮೇತರಾಗಿ ಮತದಾನ ಮಾಡಿದರೆ, ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಕೂಡ ಕುಟುಂಬದ ಜೊತೆಗೆ ಆಗಮಿಸಿ ಮತ ಚಲಾಯಿಸಿದ್ದಾರೆ. ಇಬ್ಬರೂ ಅಭ್ಯರ್ಥಿಗಳು ಗೆಲುವಿನ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ಬೂತ್ ನಂ.166ರಲ್ಲಿ ಕುಟುಂಬ ಸದಸ್ಯರೊಂದಿಗೆ ಬಂದು ಮತದಾನ ಮಾಡಿದ್ದಾರೆ.

### ಬಿರು ಬಿಸಿಲು ಲೆಕ್ಕಕ್ಕೇ ಇಲ್ಲ..!

ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ, ಅಸ್ಸಾಂ, ಕೇರಳ, ಪುದುಚೇರಿಯ ಭಾರಿ ಬಿಸಿಲಿನ ಪ್ರಖರತೆ ಇರುವುದರಿಂದ ಜನ ಈ ಮಧ್ಯೆಯೂ ಮತದಾನಕ್ಕೆ ಆಗಮಿಸಿ ಗಮನ ಸೆಳೆದಿದ್ದಾರೆ. ದಾವಣಗೆರೆ ಮತದಾನ ಜೋರಾಗಿದ್ದು ನಡೆಯುತ್ತಿದ್ದು ಮಧ್ಯಾಹ್ನ 3ಗಂಟೆ ವೇಳೆಗೆ ಶೇ.49.66 ಮತದಾನ ನಡೆದಿದೆ. ಬಾಗಲಕೋಟೆಯಲ್ಲಿ ಮತದಾನದಲ್ಲಿ ಮಧ್ಯಾಹ್ನದ ಸುಮಾರಿಗೆ ಚೇತರಿಕೆ ಕಂಡಿದ್ದು, ಮಧ್ಯಾಹ್ನ 3ಗಂಟೆ ತನಕ ಶೇ.54 ಮತದಾನ ನಡೆದಿದೆ.

### ಪರವಿರೋಧದ ಪರಿವಾರ..!

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್, ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್, ಕಾಂಗ್ರೆಸ್ ಅಭ್ಯರ್ಥಿ ಸಮರ್ಥ ಸೇರಿ ಕುಟುಂಬದ ಸದಸ್ಯರು ಮತಗಟ್ಟೆಗೆ ಬಂದು ಸರತಿಯಲ್ಲಿ ನಿಂತು ಮತಚಲಾಯಿಸಿದ್ದಾರೆ. ಇತ್ತ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸ ಕರಿಯಪ್ಪ ಕುಟುಂಬ ಕೂಡ ಮತಕೇಂದ್ರಕ್ಕೆ ಆಗಮಿಸಿ ಮತ ಚಲಾಯಿಸಿದೆ. ಮತದಾರರು ಹೆಚ್ಚು ಚಲಾಯಿಸಬೇಕೆಂದು ಮನವಿ ಮಾಡಿದ್ದಾರೆ.

### ಹಣದ ಆಮಿಷ ಆರೋಪ

ಕಾಂಗ್ರೆಸ್, ಬಿಜೆಪಿ ನಡುವೆ ತೀವ್ರ ಹಣಾಹಣಿ ಇರುವ ಈ ಎರಡೂ ಕ್ಷೇತ್ರದಲ್ಲಿ ಕೆಲವು ಮತಗಟ್ಟೆಗಳಲ್ಲಿ ಮತದಾರರಿಗೆ ಹಣ ಹಂಚಿಕೆ ಮಾಡಲಾಗಿದೆ ಎಂಬ ಆರೋಪೂ ಕೇಳಿಬಂದಿದೆ. ಮಹಿಳಾ ಮತದಾರರೊಬ್ಬರು ನಿರ್ದಿಷ್ಟ ವ್ಯಕ್ತಿಗೆ ಮತ ಹಾಕುವಂತೆ 500 ರೂ. ಕೊಟ್ಟಿದ್ದಾರೆಂದು ಬಾಗಲಕೋಟೆಯಲ್ಲಿ ಆರೋಪಿಸಿದ್ದು ವಿಶೇಷ. ಯಾವುದೇ ಅಹಿತಕರ ಘಟನೆ ನಡೆಯದಂತೆ ಬಿಗಿಭದ್ರತೆಯನ್ನು ಕೈಗೊಳ್ಳಲಾಗಿತ್ತು.

## ಆರೆಸ್ಸೆಸ್ ಯಾಕೆ ದೂರು ದಾಖಲಿಸಿಲ್ಲ..?

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ರಾಜ್ಯಸಭೆ ಪ್ರತಿಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ವಿಷಸರ್ಪ ಕೊಲ್ಲಿ ಹೇಳಿಕೆಯ ವಿರುದ್ಧ ದೂರು ದಾಖಲಾಗಿದೆ. ವರದಿಗಾರರಿಗೆ ಈ ಕುರಿತು ಪ್ರತಿಕ್ರಿಯೆ ನೀಡಿದ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ದೂರು ದಾಖಲಿಸಲಿಬಿಡಿ. ಆರ್‌ಎಸ್‌ಎಸ್ ಯಾಕೆ ದೂರು ದಾಖಲಿಸಿಲ್ಲ? ಅವರು ನೋಂದಣಿ ಮಾಡಿಸಿಕೊಂಡಿದ್ದರೆ ಅವರ ಲೆಟರ್ ಹೆಡ್‌ನಲ್ಲಿ ದೂರು



ದಾಖಲಿಸಲಿ. ತಮಗೆ ಯಾರ ಸಹಾಯ ಬೇಡ ಎಂದು ಸ್ವತಃ ಮೋಹನ್ ಭಾಗವತ್ ಹೇಳಿದ್ದಾರೆ, ಅವರೇ ದಾಖಲಿಸಲಿ. ನಮ್ಮದು ಸರ್ವರಿಗೂ ಸಮಪಾಲು, ಸಮಬಾಳು ಎನ್ನುವ ತತ್ವ, ಬುದ್ಧ ಬಸವ ಅವರ ತತ್ವಗಳನ್ನು ನಾವು ಹೊಂದಿದ್ದೇವೆ. ಕೆಲವೊಬ್ಬರು ಈ ತತ್ವಗಳ ಹಾಗೂ ಸಂವಿಧಾನ ವಿರೋಧಿ ಸಿದ್ಧಾಂತ ಹೊಂದಿರುತ್ತಾರೆ ಇದು ಸರಿಯಲ್ಲ ಎನ್ನುವುದು ನಮ್ಮ ವೈಯಕ್ತಿಕ ಅಭಿಪ್ರಾಯ. ಅಷ್ಟಕ್ಕೂ ಹೇಳಿದ್ದೇನು? ವಿಷಸರ್ಪಗಳನ್ನು ಹೊಡೆಯಿರಿ ಎಂದಿದ್ದಾರೆ.

## ವಿಜಯನಗರ ಡಿಎಚ್‌ಒ ದಿಢೀರ್ ಎತ್ತಂಗಡಿ..!

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ

ಡಾ.ಶಂಕರ ನಾಯ್ಕ ಜಿಲ್ಲಾ ಆರೋಗ್ಯ ಅಧಿಕಾರಿಯ ದಿಢೀರ್ ಎತ್ತಂಗಡಿಗೆ ನಕಲಿ ಯುಡಿಐಡಿ ಕಾರ್ಡ್‌ಗಳ ಪ್ರಕರಣ, ಆರೋಗ್ಯ ಇಲಾಖೆಯ ನಿರ್ಲಕ್ಷ್ಯ ಚರ್ಚೆಗೆ ಗ್ರಾಸವಾಗಿದೆ. ಲೋಕಾಯುಕ್ತ ದಾಳಿ ಈ ಹಿನ್ನೆಲೆಯಲ್ಲಿ ಕರ್ತವ್ಯಲೋಪ ಮತ್ತು ನಕಲಿ ವೈದ್ಯರ ತಡೆಗಟ್ಟುವ ನಿರ್ಲಕ್ಷ್ಯದ ಆರೋಪದ ಮೇಲೆ ಹೀಗಾಗಿ ಡಿಎಚ್‌ಒ ಡಾ.ಶಂಕರ ನಾಯ್ಕರನ್ನು ದಿಢೀರ್ ವರ್ಗಾವಣೆ ಮಾಡಿ ಸರ್ಕಾರ ಆದೇಶಿಸಿದೆ. ಡಾ. ಎಂ.ವಿನಯ ಅವರನ್ನು ನೇಮಕ ಮಾಡಿ ಸರ್ಕಾರವು ಆದೇಶ ಹೊರಡಿಸಿದೆ. ಡಾ. ಶಂಕರ್ ನಾಯ್ಕ ಎಲ್.ಆರ್. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ವಿಜಯನಗರ ಜಿಲ್ಲೆ ಇವರನ್ನು ಹಾಲಿ ಸ್ಥಳದಿಂದ ವರ್ಗಾವಣೆ ಆದೇಶಿಸಲಾಗಿದೆ. ಈ ಹುದ್ದೆಯ ಪ್ರಭಾರವನ್ನು ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೆ ಹೆಚ್ಚುವರಿ ಪ್ರಭಾರವಸಿರುವ ಡಾ. ಎಂ.ವಿನಯ ವಹಿಸಿಕೊಟ್ಟು ಬಿಡುಗಡೆಗೊಂಡು ಮುಂದಿನ ಸ್ಥಳ ನಿಯುಕ್ತಿಗಾಗಿ ಆಯುಕ್ತರ ಕಚೇರಿ ಆರೋಗ್ಯ ವರದಿ ಮಾಡಿಕೊಳ್ಳಲು ಸೂಚಿಸಿ ಆದೇಶ ಹೊರಡಿಸಿದೆ.

## ರಾಷ್ಟ್ರಮಟ್ಟದ ವಾಲಿಬಾಲ್ ಪಂದ್ಯ ಇಂದು

• ಮಲ್ಲಮ್ಮ ನುಡಿ ವಾರ್ತೆ ಪರಶುರಾಮ ಕರಣಂ ಭಾಲ್ಕಿ

ಇಲ್ಲಿನ ಚನ್ನಬಸವಾಶ್ರಮ ಪರಿಸರದಲ್ಲಿ ವಿಶ್ವಗುರು ಬಸವಣ್ಣನವರ ಜಯಂತಿ, ವಚನ ಜಾತ್ರೆ–2026, ಡಾ.ಚನ್ನಬಸವ ಪಟ್ಟದ್ದೇವರ 27ನೆಯ ಸ್ಮರಣೋತ್ಸವ ಮತ್ತು ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ನಿಮಿತ್ತ ಹಿರೇಮಠ ಸಂಸ್ಥಾನ ಮತ್ತು ಅಮೃತ ಮಹೋತ್ಸವ ಸಮಿತಿ ವತಿಯಿಂದ ಶುಕ್ರವಾರ ಸಾಯಂಕಾಲ 5.10 ಗಂಟೆಗೆ ರಾಷ್ಟ್ರಮಟ್ಟದ ಆಮಂತ್ರಿತ ವಾಲಬಾಲ್ ಪಂದ್ಯಾವಳಿ ಆಯೋಜಿಸಲಾಗಿದೆ ಎಂದು ವಾಲಿಬಾಲ್ ಪಂದ್ಯಾವಳಿ ಸಮಿತಿ ಅಧ್ಯಕ್ಷ ವಿಲಾಸ ಬಕ್ಕಾ ತಿಳಿಸಿದ್ದಾರೆ.

ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಅವರು ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ಮತ್ತು ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ದಿವ್ಯ ಸಮ್ಮುಖ ವಹಿಸಿಕೊಳ್ಳಲಿದ್ದಾರೆ. ವಾಲಿಬಾಲ್ ಪಂದ್ಯಾವಳಿ ಅಮೃತ ಮಹೋತ್ಸವ ಸ್ವಾಗತ ಸಮಿತಿ ಅಧ್ಯಕ್ಷರು, ಜಿಲ್ಲಾ ಉಸ್ತುವಾರಿ ಸಚಿವ



ಈಶ್ವರ ಖಂಡ್ರೆ ಉದ್ಘಾಟಿಸಲಿದ್ದಾರೆ.

**ಸಂಸದ ಸೇರಿ, ಗಣ್ಯಾತಿ ಗಣ್ಯರು ಭಾಗಿ**

ಸಂಸದ ಸಾಗರ ಖಂಡ್ರೆ ಬಸವ ಗುರುವಿನ ಪೂಜೆ ನೆರವೇರಿಸಲಿದ್ದಾರೆ. ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ, ಡಾ.ಚನ್ನಬಸವ ಪಟ್ಟದ್ದೇವರು ಬ್ಯಾಂಕ್‌ನ ಅಧ್ಯಕ್ಷ ಡಿ.ಕೆ.ಸಿದ್ರಾಮ, ಸಿಂಡಿಕೇಟ್ ಸದಸ್ಯ ಬಸವರಾಜ ಕನ್ನಾಳೆ, ಡಿವೈಎಸ್ಪಿ ಶಿವಾನಂದ ಪವಾಡಶೆಟ್ಟಿ, ರಜನಿಕಾಂತ ಚವ್ಹಾಣ, ಚನ್ನಬಸವ ಬಳತೆ, ಪ್ರಸನ್ನ ಖಂಡ್ರೆ, ಡಾ.ವಸಂತ ಪವಾರ, ರೋಹಿತ ವೈರಾಗೆ, ಅಶೋಕ ಅಲ್ಮಾಜೆ, ಸುಭಾಷ ಶೆಡೋಳೆ, ರಂಗರಾವ ಜಾಧವ, ಗಣಪತಿ ಬಾವುಗೆ, ಚನ್ನವೀರ ಚಕ್ರಸಾಲಿ, ಸತ್ಯವಾನ ವೈರಾಗೆ, ಅಶ್ವಿನ ಭೋಸ್ಲೆ, ದೀಪಕ ಠಮಕೆ ಸೇರಿದಂತೆ ಮುಂತಾದವರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದ್ದಾರೆ.

> ಮುಂಬೈ, ಸೌತ ವೆಸ್ಟನ್ ರೈಲ್ವೆ, ತೆಲಂಗಾಣ ಟೀಮ್, ಚೈನ, ಮಂಗಳೂರು, ವಿಜಯವಾಡಾ, ರೆಟ್ಆರ್ಮಿ, ಗ್ರೀನ್ ಆರ್ಮಿ ಮುಂತಾದ ವಾಲಿಬಾಲ್ ತಂಡಗಲಿಂದ ವಾಲಿಬಾಲ್ ಸ್ಪರ್ಧೆ ನಡೆಯಲಿದೆ.
>
> –ವಿಲಾಸ ಬಕ್ಕಾ, ವಾಲಿಬಾಲ್ ಪಂದ್ಯಾವಳಿ ಸಮಿತಿ ಅಧ್ಯಕ್ಷ

## ದ್ವಿತೀಯ ಪಿಯುಸಿ ಉತ್ತಮ ಫಲಿತಾಂಶ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕರ್ನಾಟಕ ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟ ಆಗಿದೆ. ಈ ಬಾರಿ ದಾಖಲೆಯ ಫಲಿತಾಂಶ ಹೊರಬಿದ್ದಿದೆ. ರಾಜ್ಯಾದ್ಯಂತ ಈ ಬಾರಿ ಪರೀಕ್ಷೆ ಬರೆದ ಒಟ್ಟು ವಿದ್ಯಾರ್ಥಿಗಳ ಪೈಕಿ ಶೇ. 86ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಪರೀಕ್ಷೆ ಬರೆದ 7,10,363 ವಿದ್ಯಾರ್ಥಿಗಳ ಪೈಕಿ 6.10 ಲಕ್ಷ ವಿದ್ಯಾರ್ಥಿಗಳು ಪಾಸ್ ಆಗಿದ್ದಾರೆ ಎಂದು ಕರ್ನಾಟಕ ಶಾಲಾ ಪರೀಕ್ಷೆ, ಮೌಲ್ಯ ನಿರ್ಣಯ ಮಂಡಳಿ ಮಾಹಿತಿ ನೀಡಿದೆ. ಕಳೆದ ಬಾರಿಯ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 73ರಷ್ಟು ಫಲಿತಾಂಶ ಬಂದಿತ್ತು. ಈ ಬಾರಿ ಶೇ. 86ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

### ವಾಣಿಜ್ಯ ವಿಭಾಗದ ಟಾಪರ್ ಯಾರು..?

- ದಿಶಾ – 600 ಅಂಕ (ದಕ್ಷಿಣ ಕನ್ನಡದ ಆಳ್ವಾಸ್ ಕಾಲೇಜು)
- ಅದಿತಿ ಬಾಪು – 600 ಅಂಕ (ಜೈನ್ ಕಾಲೇಜು, ಬೆಂಗಳೂರು)

### ಕಲಾ ವಿಭಾಗದ ಟಾಪರ್ ಯಾರು?

- ಅರ್ಚನಾ, ಸಂಗೀತಾ – 598 ಅಂಕ (ಕೊಟ್ಟೂರಿನ ಇಂದೂ ಪಿಯು ಕಾಲೇಜು)

### ವಿಜ್ಞಾನ ವಿಭಾಗದಲ್ಲಿ ಟಾಪರ್ ಯಾರು?

- ಶಮನ್ಯುಎಸ್ ಶೆಟ್ಟಿ, ನಂದನ್ ನಾಯಕ್– 598 ಅಂಕ (ಮಂಗಳೂರು ಪಿಯು ಕಾಲೇಜು)
- –ವೈಷ್ಣವಿ, ಅನರ್ವಿ –597 (ಕಾರ್ಕಳದ ಜ್ಞಾನಸುಧಾ ಪಿಯು ಕಾಲೇಜ್)



### ಕಲ್ಬುರ್ಗಿ ಹುಡುಗಿ ಅಪೂರ್ವ ಸಾಧನೆ

ಪಿಯುಸಿಯಲ್ಲಿ ಕಲಬುರಗಿ ಹುಡುಗಿ ಫಸ್ಟ್ ಕಲಬುರಗಿ: ಹೆಮ್ಮೆಯ ಪುತ್ರಿ ಸೃಷ್ಟಿ ಮಲ್ಲಿನಾಥ 2025–26ನೇ ಸಾಲಿನ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಅಭೂತಪೂರ್ವ ಸಾಧನೆ ಮಾಡಿದ್ದಾರೆ. ನಗರದ ವಿಜಿ ಮಹಿಳಾ ಪಿಯು ಕಾಲೇಜಿನ ವಿದ್ಯಾರ್ಥಿನಿಯಾದ ಇವರು, ಕಲಾ ವಿಭಾಗದಲ್ಲಿ 600 ಅಂಕಗಳಿಗೆ 598 ಅಂಕಗಳನ್ನು ಪಡೆಯುವ ಮೂಲಕ ಇಡೀ ರಾಜ್ಯಕ್ಕೆ ಪ್ರಥಮ ಸ್ಥಾನ ಅಲಂಕರಿಸಿದ್ದಾರೆ.

**ಬೀದರ್‌ನಲ್ಲಿ ನಡೆಯುವ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನವನ್ನು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆಶಿ ಉದ್ಘಾಟಿಸಲಿದ್ದಾರೆ.**

# ಗ್ರಾಮ ಒನ್ ಕೇಂದ್ರಕ್ಕೆ ಅರ್ಜಿ ಆಹ್ವಾನ


• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲೂಕಿನ ಅಲಗೇರಿ, ಭಟ್ಕಳ ತಾಲೂಕಿನ ಕೊಪ್ಪ, ದಾಂಡೇಲಿ ತಾಲೂಕಿನ ಆಲೂರು, ಅಂಬೇವಾಡಿ, ಅಂಬಿಕಾನಗರ, ಹೊನ್ನಾವರ ತಾಲೂಕಿನ ಕೊಡಣಿ, ಕಾರವಾರ ತಾಲೂಕಿನ ಕೆರವಡಿ, ಕುಮಟಾ ತಾಲೂಕಿನ ಬರ್ಗಿ, ಸಿದ್ಧಾಪುರ ತಾಲೂಕಿನ ನಿಲ್ಕುಂದ, ಅನಲೆಬೈಲ್, ಶಿರಸಿ ತಾಲೂಕಿನ ಮಂಜಗುಣಿ, ಹುಲೆಕಲ್,

ಸುಗಾವಿ, ಸಲ್ಕಾಣಿ, ನೆಗ್ಗು, ಸೂಪಾ ತಾಲೂಕಿನ ಅಣಶಿ, ಬಜಾರ್‌ಕುಣಂಗ, ಶಿಂಗಾರಗಾವ್, ನಗೋಡಾ, ಉಳವಿ, ಯಲ್ಲಾಪುರ ತಾಲೂಕಿನ ನಂದೊಳ್ಳಿ ಸೇರಿದಂತೆ ಒಟ್ಟು 21 ಗ್ರಾಮ ಪಂಚಾಯತಿಗಳಲ್ಲಿ ಹೊಸದಾಗಿ 21 ಗ್ರಾಮ ಒನ್ ಕೇಂದ್ರ ಅನುಷ್ಠಾನಗೊಳಿಸಲು ಅವಶ್ಯಕತೆ ಇದ್ದು. ಗ್ರಾಮ ಪಂಚಾಯತಗಳಲ್ಲಿ ಸಮಗ್ರ ನಾಗರಿಕ ಸೇವೆ ಒದಗಿಸಲು ಗ್ರಾಮ ಒನ್ ಕೇಂದ್ರ ಆರಂಭಿಸಲು ಪ್ರಾಂಚೈಸಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಏ.15 ರೊಳಗೆ https://sevasindhuservices.karnataka.gov.in ಲಿಂಕ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ತಹಶೀಲ್ದಾರರ ಕಚೇರಿಗೆ ಸಂಪರ್ಕಿಸುವಂತೆ ಅಪರ ಜಿಲ್ಲಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೇಂದ್ರದ ಯೋಜನೆ ಪರಿಣಾಮಕಾರಿ ಅನುಷ್ಠಾನ: ಖಂಡ್ರೆ




• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಜಿಲ್ಲೆಯಲ್ಲಿ ಕೇಂದ್ರದ ವಿವಿಧ ಯೋಜನೆಗಳನ್ನುಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ ಜನರ ಜೀವನ ಮಟ್ಟ ಸುಧಾರಿಸುವ ಪ್ರಯತ್ನ ಮಾಡಲಾಗುತ್ತಿದೆ ಎಂದು ಸಂಸದ ಸಾಗರ ಖಂಡ್ರೆ ಹೇಳಿದರು.

ತಾಲೂಕಿನ ಮರೂರ ಗ್ರಾಮದಲ್ಲಿ ಬುಧವಾರ ಜಲ್ ಜೀವನ್ ಮಿಷನ್ ಮತ್ತು ಕರ್ನಾಟಕ ಸುಸ್ಥಿರ ಗ್ರಾಮೀಣ ಕುಡಿಯುವ ನೀರು ಸರಬಾರಜು ಯೋಜನೆಯಡಿ 73 ಲಕ್ಷ ರೂ ಅನುದಾನದಲ್ಲಿ ಕುಡಿಯುವ ನೀರು ಸರಬರಾಜು ಯೋಜನೆ ಕಾಮಗಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ನಾನು ಸಂಸದನಾದ ಮೇಲೆ ವಿವಿಧ ಕೇಂದ್ರದ ಹಲವು ಯೋಜನೆಗಳಿಗೆ ಚುರುಕು ಮುಟ್ಟಿಸುವ ಪ್ರಯತ್ನ ಮಾಡುತ್ತಿದ್ದೇನೆ. ಜಿಲ್ಲೆಯ ಎಲ್ಲ ಹಳ್ಳಿಗಳಲ್ಲಿ ಜೆಜೆಎಂ ಯೋಜನೆ ಅನುಷ್ಠಾನಗೊಳಿಸಿ ಗ್ರಾಮೀಣ ಭಾಗದಲ್ಲಿನ ಕುಡಿಯುವ ನೀರಿನ ಸಮಸ್ಯೆ ಶಾಶ್ವತವಾಗಿ ಬಗೆಹರಿಸುವ ಪ್ರಯತ್ನ ಮಾಡಲಾಗುತ್ತಿದೆ ಎಂದರು.

ಮರೂರ ಗ್ರಾಮದಲ್ಲಿ 73 ಲಕ್ಷ ರೂ ವೆಚ್ಚದಲ್ಲಿ ಕುಡಿಯುವ ನೀರಿನ ಕಾಮಗಾರಿಗೆ ಚಾಲನೆ ನೀಡಲಾಗಿದ್ದು, ನಿಗದಿತ ಸಮಯದಲ್ಲಿ ಗುಣಮಟ್ಟದ ಕಾಮಗಾರಿ ಪೂರ್ಣಗೊಳಿಸಿ ಜನರಿಗೆ ಅನುಕೂಲ ಮಾಡಿಕೊಡಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಸ್ಥಳೀಯ ಜನಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಸಂಪಾದಕೀಯ



ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349

## ನಿಲ್ಲದ ಗಣಿಗಾರಿಕೆ ಆತಂಕದಲ್ಲಿ ಜನತೆ, ಕಣ್ಣಿದ್ದು ಕುರುಡಾದ ಅಧಿಕಾರಿಗಳು

ಪ್ರಕೃತಿ ಸಂಪತ್ತನ್ನು ಕಾಪಾಡುವುದು ಸರ್ಕಾರದ ಹಾಗೂ ಅಧಿಕಾರಿಗಳ ಮುಖ್ಯ ಜವಾಬ್ದಾರಿಯಾಗಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಹಲವೆಡೆ ನಡೆಯುತ್ತಿರುವ ನಿರಂತರ ಗಣಿಗಾರಿಕೆ ಕಾರ್ಯಗಳು ಜನರಲ್ಲಿ ಭಾರೀ ಆತಂಕವನ್ನುಂಟು ಮಾಡಿವೆ. ನಿಯಮಗಳು ಇದ್ದರೂ ಅವನ್ನು ಲೆಕ್ಕಿಸದೇ ಕೆಲವರು ಗಣಿಗಾರಿಕೆಯನ್ನು ಮುಂದುವರಿಸುತ್ತಿರುವುದು ಪರಿಸರಕ್ಕೂ ಜನಜೀವನಕ್ಕೂ ದೊಡ್ಡ ಅಪಾಯವಾಗುತ್ತಿದೆ.

ಗಣಿಗಾರಿಕೆಯಿಂದಾಗಿ ಪರಿಸರದ ಸಮತೋಲನ ಹಾಳಾಗುತ್ತಿದೆ. ಧೂಳು, ಶಬ್ದ ಹಾಗೂ ಭೂಮಿಯ ಕುಸಿತದ ಭೀತಿ ಹೆಚ್ಚಾಗಿದೆ. ಕೃಷಿ ಭೂಮಿಗಳು ಹಾನಿಗೊಳಗಾಗುತ್ತಿವೆ, ಭೂಗರ್ಭದ ನೀರಿನ ಮಟ್ಟ ಕುಸಿಯುತ್ತಿದೆ. ಇದರ ಪರಿಣಾಮವಾಗಿ ಗ್ರಾಮೀಣ ಪ್ರದೇಶದ ಜನರು ದಿನನಿತ್ಯದ ಜೀವನದಲ್ಲಿ ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ.

ಜನರು ಹಲವಾರು ಬಾರಿ ಅಧಿಕಾರಿಗಳ ಗಮನಕ್ಕೆ ಈ ಸಮಸ್ಯೆಯನ್ನು ತಂದರೂ ಕೂಡ ಕೆಲ ಅಧಿಕಾರಿಗಳು ಕಣ್ಣಿದ್ದು ಕುರುಡಾದಂತೆ ವರ್ತಿಸುತ್ತಿದ್ದಾರೆ ಎಂಬ ಆರೋಪ ಕೇಳಿಬರುತ್ತಿದೆ. ನಿಯಮ ಉಲ್ಲಂಘಿಸಿ ನಡೆಯುತ್ತಿರುವ ಗಣಿಗಾರಿಕೆಗೆ ತಕ್ಷಣ ಕಡಿವಾಣ ಹಾಕಬೇಕಾದವರು ಮೌನವಾಗಿರುವುದು ಜನರಲ್ಲಿ ಅಸಮಾಧಾನವನ್ನು ಹೆಚ್ಚಿಸಿದೆ.

ಸರ್ಕಾರವು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಅಕ್ರಮ ಗಣಿಗಾರಿಕೆಗೆ ತಕ್ಷಣ ತಡೆ ಹಾಕಬೇಕು. ಸಂಬಂಧಪಟ್ಟ ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಅರಿತು ಕಾನೂನು ಕ್ರಮ ಕೈಗೊಳ್ಳಬೇಕು. ಪರಿಸರವನ್ನು ರಕ್ಷಿಸುವುದು ಮತ್ತು ಜನರ ಸುರಕ್ಷತೆಯನ್ನು ಕಾಪಾಡುವುದು ಸರ್ಕಾರದ ಮೊದಲ ಕರ್ತವ್ಯ ಎಂಬುದನ್ನು ಮರೆಯಬಾರದು. ಅಧಿಕಾರಿಗಳು ಎಚ್ಚೆತ್ತುಕೊಂಡು ಅಕ್ರಮ ಗಣಿಗಾರಿಕೆಯನ್ನು ತಕ್ಷಣ ನಿಲ್ಲಿಸಿ ಜನರ ಆತಂಕವನ್ನು ದೂರ ಮಾಡುವಂತೆ ಕ್ರಮ ಕೈಗೊಳ್ಳಬೇಕಾಗಿದೆ. ಇಲ್ಲವಾದರೆ ಮುಂದಿನ ದಿನಗಳಲ್ಲಿ ಪರಿಸರ ಹಾನಿಯ ಜೊತೆಗೆ ಜನರ ಆಕ್ರೋಶವೂ ಹೆಚ್ಚಾಗುವ ಸಾಧ್ಯತೆ ಇದೆ.

# ಮಡಿವಾಳೇಶ್ವರ ದೇವಾಲಯದಲ್ಲಿ ವೈಭವದ ಮಹಾದೇವ ಲಗ್ನ



• ಮಲ್ಲಮ್ಮ ನುಡಿ ವಾರ್ತೆ, ಕಮಲನಗರ

ತಾಲೂಕಿನ ಡಿಗ್ಗಿ ಗ್ರಾಮದಲ್ಲಿ ನೆಲೆಸಿರುವ ಐತಿಹಾಸಿಕ ಪ್ರಸಿದ್ಧ ಶ್ರೀ ಮಡಿವಾಳೇಶ್ವರ ದೇವಾಲಯದಲ್ಲಿ 'ಬಾರ್ಶಿ' ಹಬ್ಬದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಮಹಾದೇವ ಲಗ್ನ ಕಾರ್ಯಕ್ರಮವು ಅತ್ಯಂತ ಸಡಗರ–ಸಂಭ್ರಮದಿಂದ ಸಂಪನ್ನಗೊಂಡಿತು.

ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾದ 'ಮಹಾದೇವ ಲಗ್ನ' (ಶಿವ–ಪಾರ್ವತಿ ಕಲ್ಯಾಣೋತ್ಸವದ ಸಂಕೇತ) ವಿಧಿವಿಧಾನಗಳು ಮಂಗಲ ವಾದ್ಯಗಳೊಂದಿಗೆ ಭಕ್ತಿಪೂರ್ವಕವಾಗಿ ಜರುಗಿದವು. ಈ ಸುಸಂದರ್ಭದಲ್ಲಿ ಡಿಗ್ಗಿ ಗ್ರಾಮದ ನೂರಾರು ಭಕ್ತರು ಆಗಮಿಸಿ ದೈವದರ್ಶನ ಪಡೆದರು. ಲಗ್ನ ಕಾರ್ಯಕ್ರಮದ ನಂತರ ಭಕ್ತರು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರಲ್ಲದೆ, ಈ ಪವಿತ್ರ ಕ್ಷಣಗಳನ್ನು ತಮ್ಮ ಮೊಬೈಲ್ ಕ್ಯಾಮೆರಾಗಳಲ್ಲಿ ಸೆರೆಹಿಡಿದು ಸಂಭ್ರಮಿಸಿದರು.

"ಪ್ರತಿ ವರ್ಷದಂತೆ ಈ ವರ್ಷವೂ ಮಡಿವಾಳೇಶ್ವರ ದೇವಾಲಯದಲ್ಲಿ ಬಾರ್ಶಿ ಹಬ್ಬವನ್ನು ಸಡಗರದಿಂದ ಆಚರಿಸಲಾಗುತ್ತಿದೆ. ಮಹಾದೇವನ ಲಗ್ನ ಕಾರ್ಯಕ್ರಮವನ್ನು ಕಣ್ತುಂಬಿಕೊಳ್ಳುವುದು ನಮ್ಮ ಸೌಭಾಗ್ಯ," ಎಂದು ಹಿರಿಯರಾದ ಮಲ್ಲಿಕಾರ್ಜುನ ಬಿರಾದಾರ ಸಂತಸ ವ್ಯಕ್ತಪಡಿಸಿದರು.

# ಸ್ವಯಂ ಉದ್ಯೋಗಕ್ಕೆ ಪ್ರೋತ್ಸಾಹ



• ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ

ಮಹಿಳೆಯರ ಆರ್ಥಿಕ ಸುಧಾರಣೆಯು ಗ್ರಾಮದ ಅಭಿವೃದ್ಧಿಗೆ ಸಹಕಾರಿಯಾಗಲಿದೆ. ಈ ನಿಟ್ಟಿನಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಪಂಚಾಯಿತಿಯ ವಿವಿಧ ಯೋಜನೆಗಳ ಮೂಲಕ ಪ್ರೋತ್ಸಾಹಿಸಲಿದೆ ಎಂದು ಅಭಿವೃದ್ಧಿ ಅಧಿಕಾರಿ ಗೀತಾ ಪಾಟೀಲ್ ಹೇಳಿದರು.

ತಾಲೂಕಿನ ಅಂಬೆಸಾಂಗವಿ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಮಂಗಳವಾರ ಆಯೋಜಿಸಿದ್ದ ಮಹಿಳಾ ಗ್ರಾಮಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಮಹಿಳೆಯರ ಸಬಲೀಕರಣಕ್ಕೆ ಸಾಕಷ್ಟು ಯೋಜನೆಗಳಿವೆ. ತರಬೇತಿ, ಆರ್ಥಿಕ ನೆರವು ಹಾಗೂ ಇನ್ನಿತರ ಸೌಲಭ್ಯಗಳು ದೊರೆಯಲಿವೆ. ಸದ್ಬಳಕೆ ಮಾಡಿಕೊಂಡು ಅಭಿವೃದ್ಧಿ ಕಂಡುಕೊಳ್ಳಬಹುದಾಗಿದೆ ಎಂದರು.

ಮಹಿಳಾ ಗ್ರಾಮ ಸಭೆಯ ಮೂಲಕ ಸಮಸ್ಯೆಗಳ ಬಗ್ಗೆ ಚರ್ಚಿಸಿ ಬಗೆಹರಿಸಲು ಸೂಕ್ತ ಕ್ರಮ ಕೈಗೊಳ್ಳಲು ಸಾಧ್ಯವಾಗುತ್ತದೆ. ಹಾಗೆಯೇ ಅವರಿಗೆ ಕಲ್ಪಿಸಿಕೊಡಬಹುದಾದ ಸೌಲಭ್ಯಗಳ ಬಗ್ಗೆ ತಿಳಿಸಿ ಜಾಗೃತಿ ಮೂಡಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಿವಿಧ ಸಂಘ ಸಂಸ್ಥೆಯ ಪ್ರಮುಖರು, ಮಹಿಳೆಯರು ಭಾಗವಹಿಸಿದ್ದರು.

# ದ್ವಿತೀಯ ಪಿಯುಸಿ ಪರೀಕ್ಷೆ ಸಮತಾ ಸಾಳಂಕೆ ಅತ್ಯುತ್ತಮ ಅಂಕಗಳೊಂದಿಗೆ ಸಾಧನೆ

• ಮಲ್ಲಮ್ಮ ನುಡಿ ವಾರ್ತೆ, ಬೀದರ್



ಇತ್ತೀಚೆಗೆ ನಡೆದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಭಾಲ್ಕಿ ನಗರದ ಡೈಮಂಡ್ ಇಂಡಿಪೆಂಡೆಂಟ್ ಕಾಲೇಜಿನ ವಿದ್ಯಾರ್ಥಿನಿ ಕುಮಾರಿ ಸಮತಾ ದಯಾನಂದ್ ಸಾಳಂಕೆ ಅತ್ಯುತ್ತಮ ಅಂಕಗಳನ್ನು ಪಡೆಯುವ ಮೂಲಕ ಕಾಲೇಜಿಗೆ ಮತ್ತು ಪೋಷಕರಿಗೆ ಕೀರ್ತಿ ತಂದಿದ್ದಾರೆ.

ಸಮತಾ ಒಟ್ಟು 600 ಅಂಕಗಳಿಗೆ 554 ಅಂಕಗಳನ್ನು ಪಡೆಯುವ ಮೂಲಕ ಶೇಕಡಾ 92.33 ಫಲಿತಾಂಶದೊಂದಿಗೆ ವಿಶಿಷ್ಟ ಶ್ರೇಣಿಯಲ್ಲಿ (Distinction) ಉತ್ತೀರ್ಣರಾಗಿದ್ದಾರೆ. ದಯಾನಂದ್ ಸಾಳಂಕೆ ಅವರ ಪುತ್ರಿಯಾಗಿದ್ದಾರೆ.

ವಿದ್ಯಾರ್ಥಿನಿಯ ಈ ಸಾಧನೆಗೆ ಕಾಲೇಜಿನ ಆಡಳಿತ ಮಂಡಳಿ, ಪ್ರಾಚಾರ್ಯರು ಹಾಗೂ ಶಿಕ್ಷಕ ವೃಂದದವರು ಹರ್ಷ ವ್ಯಕ್ತಪಡಿಸಿ, ಮುಂದಿನ ಉನ್ನತ ಶಿಕ್ಷಣಕ್ಕೆ ಶುಭ ಹಾರೈಸಿದ್ದಾರೆ.

# ಕಾಣೆಯಾಗಿರುವ ಮಹಿಳೆ ಪತ್ತೆಗಾಗಿ ಮನವಿ



ಮಲ್ಲಮ್ಮ ನುಡಿ ವಾರ್ತೆ, ಬೀದರ

ಬೀದರನ ದತ್ತಯ್ಯಾಗಲ್ಲಿ ಬ್ರಾಹ್ಮಣವಾಡಿ ನಿವಾಸಿಯಾದ ಪಂಕಜಾ ಶಿವರಾಜ (45) ಇವರು ದಿನಾಂಕ: 06–04–2026 ರಂದು ಮನೆಯಿಂದ ಹೊರಗಡೆ ಹೋಗಿ ಕಾಣೆಯಾಗಿರುತ್ತಾಳೆ.

ಕಾಣೆಯಾಗಿರುವ ಮಹಿಳೆಯು 5 ಅಡಿ 4 ಇಂಚ್ ಎತ್ತರ ಇದ್ದು, ಸಾಧಾರಣ ಮೈಕಟ್ಟು, ಬಿಳಿ ಮೈಬಣ್ಣ, ಕಪ್ಪು ಕೂದಲು, ದುಂಡು ಮುಖ, ನೇರ ಮೂಗು, ಅಗಲ ಹಣೆ ಹೊಂದಿದ್ದು, ಮನೆಯಿಂದ ಹೋಗುವಾಗ ಮೈಮೇಲೆ ನೇರಳೆ ಬಣ್ಣದ ನೂರಿ ಬಾಟಮ ಮತ್ತು ಮಿಶ್ರ ಬಣ್ಣದ ನೂರು ಟಾಪ ಬಟ್ಟೆ ಧರಿಸಿರುವ ಇವರು ಕನ್ನಡ ಮತ್ತು ಹಿಂದಿ ಭಾಷೆಯಲ್ಲಿ ಮಾತನಾಡುತ್ತಾರೆ. ಈ ಕಾಣೆಯಾಗಿರುವ ಮಹಿಳೆಯ ಬಗ್ಗೆ ಯಾರಿಗಾದರೂ ಮಾಹಿತಿ ಸಿಕ್ಕಲ್ಲಿ ಬೀದರ ಉಪನಗರ ಪೊಲೀಸ್ ಠಾಣೆಯ ಪಿಎಸ್‌ಐ ಮೊಬೈಲ್ ನಂ. 9480803445 ಕ್ಕೆ ಸಂಪರ್ಕಿಸುವಂತೆ ಬೀದರ ಉಪನಗರ ಪೊಲೀಸ್ ಠಾಣೆಯ ತನಿಖಾಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಜಿಲ್ಲಾಸ್ಪತ್ರೆಗೆ ಭೇಟಿ ನೀಡಿದ ರಾಜಕೀಯ ನಾಯಕರು



• ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ

ತಾಲೂಕಿನ ಜಾಂತಿ ಗ್ರಾಮದ ಸುಮಾರು 30 ಜನ ಫುಡ್ ಪಾಯಿಸನ್ ನಿಂದ ಅಸ್ವಸ್ಥರಾಗಿ ಬ್ರಿಮ್ಸ್ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವವರನ್ನು ಮಾಜಿ ಶಾಸಕರಾದ ಪ್ರಕಾಶ ಖಂಡ್ರೆ ಹಾಗೂ ಮಾಜಿ ಕೇಂದ್ರ ಸಚಿವರಾದ ಭಗವಂತ ಖೂಬಾ ಇಬ್ಬರು ನಾಯಕರು ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆಯುತ್ತಿರುವವರನ್ನು ಭೇಟಿ ಮಾಡಿ ಆರೋಗ್ಯ ವಿಚಾರಿಸಿದರು. ಚಿಕಿತ್ಸೆ ನೀಡುತ್ತಿರುವ ವೈದ್ಯಾಧಿಕಾರಿಗಳಿಂದ ಮಾಹಿತಿ ಪಡೆದರು. ಎಲ್ಲರೂ ಚೇತರಿಸಿಕೊಳ್ಳುತ್ತಿದ್ದಾರೆ ಎಂದು ವೈದ್ಯರು ಭರವಸೆ ನೀಡಿದರು. ಪೂರ್ತಿ ಗುಣಮುಖ ಆಗುವವರೆಗೆ ಕಾಳಜಿಯಿಂದ ಚಿಕಿತ್ಸೆ ನೀಡಲು ಇಬ್ಬರು ನಾಯಕರು ವೈದ್ಯರಿಗೆ ತಿಳಿಸಿದರು. ಈ ಸಂಧರ್ಭದಲ್ಲಿ ಭಾಲ್ಕಿ ಮಂಡಲ ಅಧ್ಯಕ್ಷರಾದ ವೀರಣ್ಣ ಕಾರಬಾರಿ ಜಿಲ್ಲಾ ಕಾರ್ಯದರ್ಶಿಯಾದ ಗೋವಿಂದರಾವ ಬಿರಾದರ್, ಲುಂಬಿಣಿ ಗೌತಮ, ಹಿರಿಯ ಮುಖಂಡರಾದ ಕಿಶನ್ ರಾವ್ ಪಾಟೀಲ್, ಎಸ್ ಸಿ ಮೋರ್ಚಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಜೈ ಭೀಮ್ ಬಂಧು, ಮಂಡಲ ಉಪಾಧ್ಯಕ್ಷರಾದ ಪಾಂಡುರಂಗ ಕನ್ಸೆ, ಮುಖಂಡರಾದ ಸಂಜೀವ ಪಾಟೀಲ್ ಜಾಂತಿ,

ಖಅ ಮೋರ್ಚಾದ ಅಧ್ಯಕ್ಷರಾದ ಲಕ್ಷ್ಮಣ ಮುದಾಳೆ, ಉಪಾಧ್ಯಕ್ಷರಾದ ರಮೇಶ್ ಧರ್ಮಪಾಲ್, ಮುಖಂಡರಾದ ಅಣ್ಣೆಪ್ಪ ಖಾನಾಪುರೆ, ರಾಕೇಶ್ ಪಾಟೀಲ್, ಶಿವಕುಮಾರ್ ಮಲ್ಲಾಸುರೆ ಸೇರಿದಂತೆ

ಇನ್ನು ಅನೇಕ ಮುಖಂಡರು ಉಪಸ್ಥಿತರಿದ್ದರು.

# ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

• ಮಲ್ಲಮ್ಮ ನುಡಿ ವಾರ್ತೆ, ಬೀದರ್

ಅರಣ್ಯ, ಜೀವಿಶಾಸ್ತ್ರ ಹಾಗೂ ಪರಿಸರ ಮತ್ತು ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು 2026ನೇ ಏಪ್ರಿಲ್.9 ರಿಂದ 12 ರವರೆಗೆ ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.

ಏಪ್ರಿಲ್.9 ರಂದು ಬೆಳಿಗ್ಗೆ 10.30 ಗಂಟೆಗೆ ಬೀದರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳ ಬೀದರ್ ಪ್ರವಾಸ ಕುರಿತು ಪೂರ್ವಭಾವಿ ಸಭೆ ನಡೆಸಲಿದ್ದಾರೆ. ಮಧ್ಯಾಹ್ನ 12.30 ರಿಂದ ಸಂಜೆ 6 ಗಂಟೆಯವರೆಗೆ ಬೀದರ್ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಬೀದರ ರಸ್ತೆ ಮೂಲಕ ಭಾಲ್ಕಿಗೆ ಪ್ರಯಾಣಿಸಿ ಅಲ್ಲಿಯೇ ವಾಸ್ತವ್ಯ ಮಾಡಲಿದ್ದಾರೆ.

ಏಪ್ರಿಲ್.10 ರಂದು ಬೆಳಿಗ್ಗೆ 8 ರಿಂದ ಸಂಜೆ 5 ಗಂಟೆಯವರೆ಼ ಭಾಲ್ಕಿ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಅಲ್ಲಿಯೇ ವಾಸ್ತವ್ಯ ಹೂಡಲಿದ್ದಾರೆ.

ಏಪ್ರಿಲ್.11 ರಂದು ಬೆಳಿಗ್ಗೆ 11 ರಿಂದ ಸಂಜೆ 6 ಗಂಟೆಯವರೆಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಬೀದರ ಜಿಲ್ಲಾ ಘಟಕದ ವತಿಯಿಂದ ಬೀದರನ ಜನವಾಡ ರಸ್ತೆಯ ನಾವದಗೇರಿಯ ಝೀರಾ ಕನ್ವೆನ್ಷನ್ ಹಾಲ್‌ದಲ್ಲಿ ಆಯೋಜಿಸಿರುವ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ನಂತರ ಬೀದರ್ ರಸ್ತೆ ಮೂಲಕ ಭಾಲ್ಕಿಗೆ ಪ್ರಯಾಣಿಸಿ ಅಲ್ಲಿಯೇ ವಾಸ್ತವ್ಯ ಮಾಡಲಿದ್ದಾರೆ.

ಏಪ್ರಿಲ್.12 ರಂದು ಬೆಳಿಗ್ಗೆ 9.45 ರಿಂದ ಸಂಜೆ 6 ಗಂಟೆಯವರೆಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಬೀದರ ಜಿಲ್ಲಾ ಘಟಕದ ವತಿಯಿಂದ ಬೀದರನ ಜನವಾಡ ರಸ್ತೆಯ ನಾವದಗೇರಿಯ ಝೀರಾ ಕನ್ವೆನ್ಷನ್ ಹಾಲ್‌ದಲ್ಲಿ ಆಯೋಜಿಸಿರುವ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನ

ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಸಂಜೆ 6 ಗಂಟೆಗೆ ಬೀದರ್ ರಸ್ತೆ ಮೂಲಕ ಭಾಲ್ಕಿಗೆ ಪ್ರಯಾಣಿಸಿ ಅಲ್ಲಿಯೇ

ವಾಸ್ತವ್ಯ ಮಾಡಲಿದ್ದಾರೆಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಡಿಯುವ ನೀರಿನ ಸಮಸ್ಯೆಗಳಾಗದಂತೆ ಮುಂಜಾಗ್ರತೆವಹಿಸಿ: ಈಶ್ವರ ಖಂಡ್ರೆ

• ಮಲ್ಲಮ್ಮ ನುಡಿ ವಾರ್ತೆ, ಬೀದರ್



ಬೀದರ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳಾಗದಂತೆ ಮುಂಜಾಗ್ರತೆವಹಿಸಬೇಕು. ಬೇಸಿಗೆ ಇರುವುದರಿಂದ ಜಿಲ್ಲೆಯ ಯಾವುದೇ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗಳಿವೆ ಎಂಬ ದೂರುಗಳು ಬರದಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕೆಂದು ಅರಣ್ಯ. ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ ಹೇಳಿದರು.

ಅವರು ಗುರುವಾರ ಬೀದರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಏಪ್ರಿಲ್. 11 ರಂದು ಬೀದರ ಜಿಲ್ಲೆಗೆ ಆಗಮಿಸುತ್ತಿರುವ ಹಿನ್ನೆಲೆ ಮತ್ತು ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳಿಗೆ ಕ–ರೆದ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಏಪ್ರಿಲ್. 11 ರಂದು ಬೀದರಗೆ ಬರುತ್ತಿದ್ದು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಬೀದರ ಜಿಲ್ಲಾ ಘಟಕದ ವತಿಯಿಂದ ಹಮ್ಮಿಕೊಂಡಿರುವ 40 ನೇ ರಾಜ್ಯ ಪತ್ರಕರ್ತರ ಸಮ್ಮೇಳನದ ಉದ್ಘಾಟನೆಗೆ ಆಗಮಿಸುತ್ತಿದ್ದು. ಜಿಲ್ಲೆಯ ತುರ್ತಾಗಿರುವ ಸಮಸ್ಯೆಗಳ ಬಗ್ಗೆ ಪ್ರಗತಿ ಪರಿಶೀಲನಾ ಸಭೆ ಮಾಡಲು ತಿಳಿಸಿದ್ದು. ಬೇಸಿಗೆ ಇರುವುದರಿಂದ ಜಿಲ್ಲೆಯ ಜಾನುವಾರುಗಳಿಗೆ, ತಾಂಡಾ, ಜನವಸತಿ ಪ್ರದೇಶ ಸೇರಿದಂತೆ ಇತರೆ ಯಾವುದೇ ಭಾಗದಲ್ಲಿ ನೀರಿನ ಸಮಸ್ಯೆಗಳಾಗದಂತೆ ನೋಡಿಕೊಳ್ಳಬೇಕು. ನೀರಿನ ಸಮಸ್ಯೆಗಳಿದ್ದರೆ ದಿನದ 24 ಗಂಟೆಗಳಲ್ಲಿ ಸಂಬಂಧಿಸಿದ ಇಲಾಖೆಯವರು ಪರಿಹಾರ ಒದಗಿಸಬೇಕು ಎಂದರು.

ಗ್ರಾಮ ಪಂಚಾಯತಿ ಹಂತದಲ್ಲಿ ಪಿ.ಡಿ.ಓ ಗಳು. ತಾಲ್ಲೂಕು ಹಂತದಲ್ಲಿ ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ನಗರಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ನೀರಿನ ಯಾವುದೇ ಸಮಸ್ಯೆಗಳಿದ್ದರೆ ತಕ್ಷಣ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಗಮನಕ್ಕೆ ತರಬೇಕು. ಮೇ ಮತ್ತು ಜೂನ್. ಇನ್ನೂ 2 ತಿಂಗಳು ಜಿಲ್ಲೆಯ ಯಾವುದೇ ಭಾಗದಲ್ಲಿ ನೀರಿನ ಸಮಸ್ಯೆಗಳಾಗಬಾರದು. ಕುಡಿಯುವ ನೀರಿನ ಯಾವುದೇ ಬಿಲ್ಲಗಳು ಪೆಂಡಿಂಗ್ ಇದ್ದರೆ ತಕ್ಷಣ ಅವುಗಳನ್ನು ಕ್ಲೀಯರ್ ಮಾಡಬೇಕೆಂದರು.

ಜಿಲ್ಲೆಯ ಆಯಾ ತಾಲ್ಲೂಕಿನ ತಹಶಿಲ್ದಾರರು. ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಟಾಸ್ಕಫೋರ್ಸ ಸಮಿತಿ ಸಭೆ ನಡೆಸಿ ಯಾವ ಗ್ರಾಮಗಳಲ್ಲಿ ನೀರಿನ ಸಮಸ್ಯೆಗಳಿವೆ, ಏನು ಕ್ರಮ ವಹಿಸಬೇಕೆಂಬುದರ ಕುರಿತು ಚರ್ಚಿಸಬೇಕು. ಔರಾದ, ಭಾಲ್ಕಿ, ಹುಮನಾಬಾದ, ಬಸವಕಲ್ಯಾಣ ಸೇರಿದಂತೆ ಎಲ್ಲಾ ತಾಲೂಕಿನ ತಹಶಿಲ್ದಾರರು. ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಪಿಡಿಓ ಗಳು ಈ ಕುರಿತು ಮುಂಜಾಗ್ರತೆವಹಿಸಬೇಕು. ಬಡಾವಣೆಗೆ ಬಿಡುವ ನೀರು ಪರೀಕ್ಷಿಸಿ. ಓವರ್ ಹೆಡ್ ಟ್ಯಾಂಕಗಳನ್ನು ಸ್ವಚ್ಚಗೊಳಿಸಬೇಕೆಂದು ಹೇಳಿದರು.

ಜಿಲ್ಲೆಯಲ್ಲಿ ಗ್ಯಾಸ್ ಸಮಸ್ಯೆಗಳಿವೆಯೆ ಎಲ್ಲಿಯೂ ಗ್ಯಾಸಗಳನ್ನು ಬ್ಲಾಕಲ್ಲಿ ಮಾರಾಟ ಆಗದಂತೆ ನೋಡಿಕೊಳ್ಳಬೇಕೆಂದು ಸಚಿವರು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬೀದರ ನಗರದಲ್ಲಿ ರಾಜ್ಯ ಮಟ್ಟದ ಪರ್ತಕರ್ತರ ದೊಡ್ಡ ಕಾರ್ಯಕ್ರಮ ನಡೆಯುತ್ತಿರುವುದರಿಂದ ನಗರ ಸ್ವಚ್ಚತೆ ಮಾಡುವುದರ ಜೊತೆಗೆ ಎಲ್ಲೂ ಪ್ಲಾಸ್ಟಿಕ್ ಕವರಗಳು ಕಾಣಬಾರದು ಕಾರ್ಯಕ್ರಮಕ್ಕೆ ಬರುವ ಜನರಿಗೆ ಸರಿಯಾಗಿ ಕುಡಿಯುವ ನೀರಿನ ವ್ಯವಸ್ಥೆಯಾಗಬೇಕೆಂದು ಹೇಳಿದರು.

ಈ ಸಭೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಮಹಾನಗರ ಪಾಲಿಕೆ ಆಯುಕ್ತರಾದ ಮುಕುಲ್ ಜೈನ್, ಬೀದರ ಜಿಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿ ಆಶಿಷ್ ರೆಡ್ಡಿ, ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಸಹಾಯಕ ಆಯುಕ್ತರು, ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಸೀಲ್ದಾರ, ತಾಲ್ಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# 40ನೇ ಪತ್ರಕರ್ತರ ಸಮ್ಮೇಳನ
## ಬೈಕ್ ರ್‍ಯಾಲಿಗೆ ಪ್ರದೀಪ ಗುಂಟಿ ಚಾಲನೆ

• **ಮಲ್ಲಮ್ಮ ನುಡಿ ವಾರ್ತೆ, ಬೀದರ**

ಪ್ರತಿಯೊಬ್ಬರೂ ಹೆಲ್ಮೆಟ್ ಧರಿಸಿ ಸಂಚಾರ ಮಾಡಬೇಕು ಕುಟುಂಬಕ್ಕೆ ನೀವೇ ಆಸರೆಯಾದ ಕಾರಣ ಯಾವುದೇ ಅನಾಹುತ

ನಡೆಯದಂತೆ ಹೆಲ್ಮೆಟ್ ಧರಿಸಬೇಕೆಂದು ಎಸ್.ಪಿ.ಪ್ರದೀಪ ಗುಂಟಿ ತಿಳಿಸಿದರು.40ನೇ ರಾಜ್ಯಮಟ್ಟದ ಕಾರ್ಯನಿರತ ಪತ್ರಕರ್ತರ ಸಮ್ಮೇಳನ ಪ್ರಯುಕ್ತ ನಗರದಲ್ಲಿ ಆಯೋಜಿಸಿದ ಬೈಕ್ ರ್‍ಯಾಲಿಗೆ ಬಲೂನ್ ಹಾರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಸಮ್ಮೇಳನ ಮೂಲಕ ಸಮಾಜಕ್ಕೆ ಹಲವು ರೀತಿಯ ಸಂದೇಶ ನೀಡುತ್ತಿರುವ ಸಂಘದ ಕಾರ್ಯ ಶ್ಲಾಘನೀಯ. ಏ.11 ರಂದು ಮುಖ್ಯಮಂತ್ರಿಗಳು ಬೀದರ ನಗರಕ್ಕೆ ಆಗಮಿಸುತ್ತಿರುವ ಪ್ರಯುಕ್ತ ಸಕಲ ಬಂದೋಬಸ್ತ್ ಮಾಡಲಾಗಿದೆ. ಸಮ್ಮೇಳನ ಯಶಸ್ವಿಯಾಗಿ ಜರುಗಲಿ ಎಂದು ಶುಭ ಹಾರೈಸಿದರು,


ಇದೇ ವೇಳೆ ಪೊಲೀಸ್ ಇಲಾಖೆ ವತಿಯಿಂದ ಪತ್ರಕರ್ತರಿಗೆ ಉಚಿತವಾಗಿ ಹೆಲ್ಮೆಟ್ ವಿತರಣೆ ಮಾಡಲಾಯಿತು.ದಿವ್ಯಸಾನಿಧ್ಯವನ್ನು ಬೆಂಗಳೂರಿನ ಬಸವಗಂಗೋತ್ರಿಯ ಚನ್ನಬಸವೇಶ್ವರ ಜ್ಞಾನಪೀಠದ ಪೀಠಾಧ್ಯಕ್ಷರಾದ ಪೂಜ್ಯಶ್ರೀ ಡಾ.ಚನ್ನಬಸವಾನಂದ ಸ್ವಾಮೀಜಿ,ಕ.ಕಾ.ಪ.ಸಂಘದ ರಾಜ್ಯ ಕಾರ್ಯದರ್ಶಿ ಜಿ.ಸಿ.ಲೋಕೇಶ, ಬಾಳೋಜಿ, ಹಿರಿಯ ಪತ್ರಕರ್ತ ಶಿವಶರಣಪ್ಪವಾಲಿ,ಎಸ್ಪಿಚಂದ್ರಕಾಂತ ಪೂಜಾರಿ,ಸಂಘದ ಅಧ್ಯಕ್ಷ ಆನಂದ ದೇವಪ್ಪ,

ಅಡಾಕ್ ಸಮಿತಿಯ ಸದಸ್ಯರಾದ ಅಪ್ಪಾರಾವ ಸೌದಿ, ಶಿವಕುಮಾರಸ್ವಾಮಿ,ಪ್ರಮುಖರಾದ ದೀಪಕ ವಾಲಿ, ಅಶೋಕ ಕರಂಜಿ, ಸಿದ್ರಾಮಯ್ಯ ಸ್ವಾಮಿ, ಮಾಳಪ್ಪ ಅಡಸಾರೆ, ಪ್ರಚಾರ ಸಮಿತಿಯ ಸಂಚಾಲಕರಾದ ನಾಗೇಶ ಪ್ರಭಾ, ಮಲ್ಲಿಕಾರ್ಜುನ ನಾಗರಾಳ, ಮಹಾರುದ್ರ ಡಾಕುಳಗೆ, ಶಶಿ ಶೆಂಬೆಳ್ಳಿ, ವಿಜಯಕುಮಾರ ಸೋನಾರೆ, ಸಂಜೀವಕುಮಾರ ಬುಕ್ಕಾ ಸೇರಿದಂತೆ ಹಲವರಿದ್ದರು.

ಸಮ್ಮೇಳನದ ಪ್ರಚಾರ ಸಮಿತಿ ವತಿಯಿಂದ ಆಯೋಜಿಸಿದ ಬೈಕ್ ರ್‍ಯಾಲಿ ನಗರದ ಬಸವೇಶ್ವರ ವೃತ್ತದಿಂದ ಭಗತಸಿಂಗ್ ವೃತ್ತ. ಅಂಬೇಡ್ಕರ್ ವೃತ್ತ, ರೋಟರಿ ವೃತ್ತ, ಮಡಿವಾಳ ವೃತ್ತ, ಹೊಸ ಬಸ್ ನಿಲ್ದಾಣದ ಮೂಲಕ ಪತ್ರಿಕಾ ಭವನವರೆಗೆ ಸಾಗಿತು.



# ಪಕ್ಷ ಬಲವರ್ಧನೆಗೆ ಕಾರ್ಯಕರ್ತರೇ ಶಕ್ತಿ: ರಾಜುಗೌಡ




• **ಮಲ್ಲಮ್ಮ ನುಡಿವಾರ್ತೆ ಹುಣಸಗಿ**

ಭಾರತೀಯ ಜನತಾ ಪಾರ್ಟಿ ಸುರಪುರ ವಿಧಾನಸಭಾ ಕ್ಷೇತ್ರದ ಹುಣಸಗಿ ಮಂಡಲದ ವತಿಯಿಂದ ಪಂಡಿತ ದೀನದಯಾಳ್ ಉಪಾಧ್ಯಾಯರ ಪ್ರಶಿಕ್ಷಣ ಮಹಾಭಿಯಾನ 2026ರ ಅಂಗವಾಗಿ ಮಂಡಲ ಪ್ರಶಿಕ್ಷಾವರ್ಗ ಶಿಬಿರ2 ಅನ್ನು ಆಯೋಜಿಸಲಾಯಿತು.

ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಮಾಜಿ ಶಾಸಕ ರಾಜು ಗೌಡ ಅವರು, ಪಕ್ಷವನ್ನು ಗಟ್ಟಿಯಾಗಿ ಕಟ್ಟಲು ಅನೇಕ ನಾಯಕರು ತಮ್ಮ ಜೀವನವನ್ನೇ ಅರ್ಪಿಸಿದ್ದು, ಇಂದು ಬಿಜೆಪಿ ವಿಶ್ವದ ಅತಿ ದೊಡ್ಡ ಪಕ್ಷವಾಗಿ ಬೆಳೆದಿದೆ ಎಂದರು. ಮುಂಬರುವ ಚುನಾವಣೆಯಲ್ಲಿ ಗೆಲುವು ಸಾಧಿಸಲು ಕಾರ್ಯಕರ್ತರು ತಾವು ಮಾಡುತ್ತಿರುವ ಕೆಲಸವನ್ನು ಪರಿಶೀಲಿಸಿಕೊಂಡು, ಸಣ್ಣ ತಪ್ಪುಗಳಿದ್ದರೆ ಸರಿಪಡಿಸಿಕೊಂಡು ಮುಂದೆ ಸಾಗಬೇಕು ಎಂದು ಸಲಹೆ ನೀಡಿದರು.

"ಗೆಲುವಿಗೆ ಯಾರನ್ನೂ ಹೊಣೆಗಾರರನ್ನಾಗಿಸುವುದಿಲ್ಲ, ಆದರೆ ಸೋಲಿಗೆ ನಾನೇ ಹೊಣೆ" ಎಂದು ಹೇಳಿದ ಅವರು, ಬೂತ್ ಮಟ್ಟದ ಕಾರ್ಯಕರ್ತರನ್ನು ಒಗ್ಗೂಡಿಸಿ ಪಕ್ಷ ನಿಷ್ಠೆಯಿಂದ ಕೆಲಸ ಮಾಡಬೇಕೆಂದು ಕರೆ ನೀಡಿದರು. ತಮ್ಮ ಆಡಳಿತ ಅವಧಿಯಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದೇವೆ. ನಾವು ತಂದ ಅನುದಾನದಲ್ಲಿ ಇಂದಿನ ಶಾಸಕರು ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು. ಸುರಪುರ ತಾಲೂಕಿನ ಇಂದಿನ ಪರಿಸ್ಥಿತಿ ಹದಗೆಟ್ಟಿದೆ ಎಂದು ಆಕ್ಷೇಪಿಸಿದರು.

ಪಕ್ಷದ ಒಳಗಿನ ಯಾವುದೇ ಸಮಸ್ಯೆಗಳಿದ್ದರೂ ಬಹಿರಂಗವಾಗಿ ಚರ್ಚಿಸುವ ಬದಲು ನೇರವಾಗಿ ತಮ್ಮನ್ನು ಸಂಪರ್ಕಿಸಬೇಕೆಂದು ಕಾರ್ಯಕರ್ತರಿಗೆ ತಿಳಿಸಿದರು. "ನಮ್ಮ ಭವಿಷ್ಯ ಕಾರ್ಯಕರ್ತರ ಕೈಯಲ್ಲಿದೆ" ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ನರಸಿಂಹ ನಾಯಕ ರಾಜುಗೌಡ, ಸಂಗಣ್ಣ ವೈಲಿ, ವೀರೇಶ್ ಚಿಂಚೋಳಿ, ಬಸವರಾಜಸ್ವಾಮಿ ಸ್ಥಾವರಮಠ, ಹೆಚ್.ಸಿ. ಪಾಟೀಲ್, ದೇವನಗೌಡ ಮಾಲಿಪಾಟೀಲ್, ವೆಂಕಟೇಶ್ ಸಾಹುಕಾರ, ಸಿದ್ದನಗೌಡ ಪಾಟೀಲ್ (ಕರೀಬಾವಿ), ಹಣಮರಡ್ಡಿ ಕುಪ್ಪಿ, ಅಂಬಲಪ್ಪ ಹಳ್ಳಿ, ಕಿಡಿಗೇನ್ನಯ್ಯ, ಮುತ್ಯಾ ದೇಸಾಯಿ ಗುರು, ವೇಣುಗೋಪಾಲ್ ಜೇವರ್ಗಿ, ರಮೇಶ್, ಮೇಲಪ್ಪ ಗುಳಗಿ, ಮುದನೂರ್ ಸಾಹುಕಾರ, ತಿಪ್ಪಣ್ಣ ಚಂದ, ಹೊನ್ನಪ್ಪ ದೇಸಾಯಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಮೇಲಪ್ಪ ಗುಳಗಿ ಪ್ರಸ್ತಾವಿಕವಾಗಿ ಮಾತನಾಡಿದರೆ, ಪರಮಣ್ಣ ತೆರಿನವರ ಹಾಗೂ ಶರಣಪ್ಪ ದೇಸಾಯಿ ಉಪಸ್ಥಿತರಿದ್ದರು. ಜಿಲ್ಲಾ ಅಧ್ಯಕ್ಷ ಬಸವರಾಜ್ ವಿಭೂತಿಹಳ್ಳಿ ಅವರೂ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಆನಂದ ಬಾರಿಗಿಡ ನಿರೂಪಿಸಿದರು.

# ಮುಖ್ಯಮಂತ್ರಿರವರ ಬೀದರ್ ಜಿಲ್ಲಾ ಪ್ರವಾಸ

• **ಮಲ್ಲಮ್ಮ ನುಡಿ ವಾರ್ತೆ, ಬೀದರ**

ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ಅವರು 2026ನೇ ಏಪ್ರಿಲ್.11 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕಾರ್ಯಕ್ರಮ ಕೈಗೊಂಡಿರುತ್ತಾರೆ.

ಅಂದು ಬೆಳಿಗ್ಗೆ 10 ಗಂಟೆಗೆ ಬೆಂಗಳೂರು ಹೆಚ್.ಎ.ಎಲ್.ವಿಮಾನ ನಿಲ್ದಾಣದಿಂದ (ವಿಶೇಷ ವಿಮಾನ ವಿಟಿ–ಎಸ್‌ಆರ್‌ಕೆ ಮೂಲಕ) ಹೊರಟು ಬೆಳಿಗ್ಗೆ 11.15 ನಿಮಿಷಕ್ಕೆ ಬೀದರ್ ಏರ್‌ಬೇಸ್‌ಗೆ ಆಗಮಿಸಲಿದ್ದಾರೆ. ನಂತರ ಬೆಳಿಗ್ಗೆ 11.25 ನಿಮಿಷಕ್ಕೆ ಕರ್ನಾಟಕ ಪತ್ರಕರ್ತರ ಸಂಘ (ರಿ) ಬೀದರ ಜಿಲ್ಲಾ ಘಟಕದಿಂದ ಬೀದರನ ಜನವಾಡ ರಸ್ತೆಯ ನಾವದಗೇರಿಯಲ್ಲಿರುವ ಝಿರಾ ಕನ್ವೆನ್ಷನ್ ಹಾಲ್‌ದಲ್ಲಿ ಆಯೋಜಿಸಿರುವ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನದ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನಂತರ ಮಧ್ಯಾಹ್ನ 2.45 ನಿಮಿಷಕ್ಕೆ ಬೀದರ್ ಏರ್‌ಬೇಸ್ (ಹೆಲಿಕಾಪ್ಟರ್ ವಿಟಿ–ಬಿಜಿಎಂ ಮೂಲಕ) ಹೊರಟು ಕಲಬುರಗಿ ಜಿಲ್ಲೆಯ ಚಿತ್ತಾಪೂರ ತಾಲ್ಲೂಕಿನ ಸೂಗೂರ (ಎನ್) ಗ್ರಾಮದಲ್ಲಿ ಆಯೋಜಿಸಿರುವ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆಂದು ಮುಖ್ಯಮಂತ್ರಿಯವರ ವಿಶೇಷ ಕರ್ತವ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಗ್ರ ಬೇಸಿಗೆ ವಿಜ್ಞಾನ ಶಿಬಿರ ಹೆಸರು ನೋಂದಣಿಗೆ ಸೂಚನೆ

**ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ**

ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದ ವತಿಯಿಂದ ಮಕ್ಕಳಲ್ಲಿ ವಿಜ್ಞಾನದ ಆಸಕ್ತಿ ಮೂಡಿಸಲು ಇದೇ ಏಪ್ರಿಲ್ 13 ರಿಂದ ಮೇ 2 ರವರೆಗೆ ಕಲಬುರಗಿಯ ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ ಸಮಗ್ರ ಬೇಸಿಗೆ ವಿಜ್ಞಾನ ಶಿಬಿರವನ್ನು ಹಮ್ಮಿಕೊಳ್ಳಲಾದ್ದು, ಪ್ರತಿ ಬ್ಯಾಚ್‌ಗೆ ಕೇವಲ 30 ವಿದ್ಯಾರ್ಥಿಗಳಿಗೆ ಮಾತ್ರ ನೋಂದಣಿ ಸೀಮಿತಗೊಳಿಸಲಾಗಿದೆ. ಪ್ರತಿ ಬ್ಯಾಚ್‌ಗೆ 1,000 ರೂ. ಶುಲ್ಕವಿದ್ದು, ಆಸಕ್ತಿಯುಳ್ಳ ವಿದ್ಯಾರ್ಥಿಗಳು ನೋಂದಣಿ ಶುಲ್ಕ ಪಾವತಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕೆಂದು ಕಲಬುರಗಿ ಜಿಲ್ಲಾ ವಿಜ್ಞಾನ ಅಧಿಕಾರಿಗಳು ತಿಳಿಸಿದ್ದಾರೆ.

ಇದೇ ಏಪ್ರಿಲ್ 13 ರಿಂದ ಮೇ 09 ರವರೆಗೆ ಪ್ರತಿದಿನ ಬೆಳಿಗ್ಗೆ 10.30 ರಿಂದ ಸಂಜೆ 4.30 ಗಂಟೆಯವರೆಗೆ ಪ್ರಾಥಮಿಕ, ಹಿರಿಯ ಹಾಗೂ ಪ್ರೌಢಶಾಲಾ ಮಕ್ಕಳಿಗೆ ಬೇಸಿಗೆ ಶಿಬಿರದ ವಿಜ್ಞಾನ ತರಬೇತಿಗಳನ್ನು ಹಮ್ಮಿಕೊಳ್ಳಲಾಗಿದೆ. ಏಪ್ರಿಲ್ 13 ರಿಂದ 18 ರವರೆಗೆ ಪ್ರತಿದಿನ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಭೌತಶಾಸ್ತ್ರ ಮತ್ತು ಮಧ್ಯಾಹ್ನ 2 ರಿಂದ ಸಂಜೆ 4.30 ಗಂಟೆಯವರೆಗೆ ವರ್ಣರಂಜಿತ ರಸಾಯನಶಾಸ್ತ್ರ ಕುರಿತು ತರಗತಿಗಳು ಜರುಗಲಿದೆ.

ಏಪ್ರಿಲ್ 20 ರಿಂದ 25 ರವರೆಗೆ ಪ್ರತಿದಿನ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಎಲೆಕ್ಟ್ರಾನಿಕ್ಸ್ ಮತ್ತು ಮಧ್ಯಾಹ್ನ 2 ರಿಂದ ಸಂಜೆ 04.30 ಗಂಟೆಯವರೆಗೆ ಜೀವಶಾಸ್ತ್ರ ಹಾಗೂ ಏಪ್ರಿಲ್ 27 ರಿಂದ ಮೇ 02 ವರೆಗೆ ಪ್ರತಿದಿನ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಸೃಜನಾತ್ಮಕ ಗಣಿತದ ಬಗ್ಗೆ ತರಗತಿಗಳು ನಡೆಯಲಿವೆ.

ಅದರಂತೆ ಏಪ್ರಿಲ್ 27 ರಿಂದ ನಾಲ್ಕರಿಂದ ಏಳನೇ ತರಗತಿ ಓದುತ್ತಿರುವ ಮಕ್ಕಳಿಗೆ "ಸೃಜನಶೀಲತೆಯೊಂದಿಗೆ ವಿಜ್ಞಾನವನ್ನು ಅನ್ವೇಷಿಸುವುದು" ತರಗತಿಗಳು ನಡೆಯಲಿದೆ. ಅದರಲ್ಲಿ ಏಪ್ರಿಲ್ 27 ರಿಂದ ಮೇ 02ವರೆಗೆ ಮೊದಲ ಬ್ಯಾಚ್ ಮತ್ತು ಮೇ 04 ರಿಂದ 09 ವರೆಗೆ ಎರಡನೇ ಬ್ಯಾಚ್ ನಡೆಯಲಿವೆ. ಹಾಗೂ ಪ್ರತಿ ಬ್ಯಾಚ್‌ಗೆ 1,000 ರೂ. ಶುಲ್ಕವಿರುತ್ತದೆ. ಶಿಬಿರವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದವರಿಗೆ ಪ್ರಮಾಣ ಪತ್ರ ನೀಡಲಾಗುವುದು. ಆಸಕ್ತಿಯುಳ್ಳ ಅಭ್ಯರ್ಥಿಗಳು ಇದರ ಸದುಪಯೋಗ ಪಡೆದುಕೊಳಬಹುದು. ಹೆಚ್ಚಿನ ಮಾಹಿತಿಗಾಗಿ ಮೊ.ನಂ 9788078048 ಹಾಗೂ ದೂರವಾಣಿ ಸಂಖ್ಯೆ 08472–270608 ಗೆ ಸಂಪರ್ಕಿಸಲು ಕೋರಲಾಗಿದೆ.

# ಬಾಬಾ ಸಾಹೇಬ್ ಅಂಬೇಡ್ಕರ್‌ರವರ ಜಯಂತಿ: ಪೂರ್ವಭಾವಿ

• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು**

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ರವರ ಜಯಂತಿ ಅಂಗವಾಗಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯ ಅಧ್ಯಕ್ಷರಾದ ತಾಲ್ಲೂಕು ದಂಡಾಧಿಕಾರಿಗಳಾದ ಜೆ. ಮಂಜುನಾಥ್ ರವರು ಹಾಗೂ ತಾಲ್ಲೂಕಿನ ವಿವಿಧ ಇಲಾಖೆಗಳ ಅಧಿಕಾರಿಗಳ ಸಮ್ಮುಖದಲ್ಲಿ ಪೂರ್ವಭಾವಿ ಸಭೆಯನ್ನು ಕರೆದಿದ್ದರು. ಜಯಂತಿ ಮಾಡುವ ವಿಚಾರದಲ್ಲಿ ದಲಿತ ಮುಖಂಡರುಗಳು ಅವರವರ ಅಭಿಪ್ರಾಯವನ್ನು ವಿವಿಧ ರೀತಿಯಲ್ಲಿ ಸಭೆಗೆ ಮಂಡಿಸಿದರು. ತಾಲ್ಲೂಕು ಆಡಳಿತ ಶಾಂತ ರೀತಿಯಲ್ಲಿ ಎಲ್ಲರ ಅಭಿಪ್ರಾಯವನ್ನು ಸಂಗ್ರಹಿಸಿತ



ನಂತರ ತಾಲ್ಲೂಕು ಬಿಳಿಕೆರೆ ಹೋಬಳಿ, ಹಳೇಬೀಡು ಗ್ರಾಮದ ನಾಗರಾಜು ಎಂಬ ವ್ಯಕ್ತಿಯು ಸಭೆಯಲ್ಲೇ ಇದ್ದು, ಏಕಾಏಕಿ ಎದ್ದು ನಿಂತು ಅಂಬೇಡ್ಕರ್ ಭವನದಲ್ಲಿ ಹಾಕಿರುವ ಬಾಬು ಜಗಜೀವನರಾಮ್ ರವರ ಫೋಟೋವನ್ನು ಕಿತ್ತು ಬಿಸಾಕಿ, ಅವನೊಬ್ಬ ರಾಷ್ಟನಾಯಕನೇ, ಅವನ ಫೋಟೋವನ್ನು ಅಲ್ಲಿ ಹಾಕಬೇಡಿ. ಕಿತ್ತು ಬಿಸಾಡಿ, ಯಾರ್ರಿ ಅವನು ಜಗಜೀವನರಾಂ ಎಂದು ಬೈದು ಅಪಮಾನ ಮಾಡಿ ಏರುಧ್ವನಿಯಲ್ಲಿ ಕೂಗಾಡ ಸಭೆಯಲ್ಲಿ ಹೇಳಿರುತ್ತಾನೆ. ಎಂದು ಖಂಡಿಸಿ ಆದಿಜಾಂಬವ ಮಾದಿಗ ಹೋರಾಟ ಸಮಿತಿ ಹುಣಸೂರು ತಾಲ್ಲೂಕು ಶಾಖಾ ವತಿಯಿಂದ ಬೃಹತ್ ಪ್ರತಿಭಟನೆ ಹಮ್ಮಿಕೊಂಡು ತಹಶೀಲ್ದಾರ್ ಮಂಜುನಾಥ್ ಹಾಗೂ ಉಪಯುಭಾಗಾಧಿಕಾರಿ ಕಚೇ–ರಿಯ ತಹಶೀಲ್ದಾರ್ ಯಾದಗಿರಿ ಗಿರೀಶ್ ರವರನ್ನು ಮನವಿ ಪತ್ರ ಸಲ್ಲಿಸಲಾಯಿತನಂತರ ಪ್ರತಿಭಟನೆಯಲ್ಲಿ ಸುದ್ದಿಗಾರರೊಂದಿಗೆ ಆದಿ ಜಾಂಬವ ಸಂಘದ ತಾಲೂಕ ಅಧ್ಯಕ್ಷ ಶಿವಣ್ಣ ಮಾತನಾಡಿ ಈ ವ್ಯಕ್ತಿಯ ಮಾತು ನಮ್ಮ ಸಮುದಾಯದ ಹಾಗೂ ರಾಷ್ಟನಾಯಕರಿಗೆ ಅಪಮಾನ ಮಾಡಿದಂತೆ ಹಾಗೂ ಶೋಷಿತ ಸಮುದಾಯಗಳ ಭಾವನೆಗೆ ಧಕ್ಕೆ ಉಂಟು ಮಾಡಿರುತ್ತಾನೆ. ಶೋಷಿತ ಸಮುದಾಯಗಳಿಗೆ ಈತನು ಅವಮಾನ ಮಾಡಿದ್ದು, ಈ ಕೂಡಲೇ ರಾಷ್ಟನಾಯಕನಿಗೆ ಅವಮಾನ ಮಾಡಿರುವ ಇಂತಹ ತಿಳಿಗೇಡಿ ವ್ಯಕ್ತಿಯಿಂದ ಸಮಾಜದ ಸಾಸ್ವಸ್ಥ್ಯಕ್ಕೆ ಧಕ್ಕೆ ಉಂಟಾಗುವುದರಿಂದ ಈತನ ಮೇಲೆ ಗೂಂಡಾ ಕಾಯ್ದೆ ದಾಖಲು ಮಾಡಿ ಈ ರಾಜ್ಯದಿಂದ ಗಡಿಪಾರು ಮಾಡಬೇಕೆಂದು ಆದಿಜಾಂಬವ ಸಂಘ ಹಾಗೂ ಸಮುದಾಯವು ಒತ್ತಾಯಿಸುತ್ತದೆ.

ಮಾದಿಗ ಹೋರಾಟ ಸಮಿತಿಯ ತಾಲೂಕಿನ ಅಧ್ಯಕ್ಷರಾದ ಪರಶುರಾಮ್, ಮಾತನಾಡಿ ಹಕ್ಕೊತ್ತಾಯಗಳು ಹಳೇಬೀಡು ನಾಗರಾಜು ರವರನ್ನು ಈ ಕೂಡಲೇ ಬಂಧಿಸಿ ಕ್ರಮ ಕೈಗೊಳ್ಳಬೇಕು.

ಸಮುದಾಯದಲ್ಲಿ ಒಡಕು ಉಂಟು ಮಾಡುತ್ತಿರುವ ಈ ವ್ಯಕ್ತಿಯನ್ನು ಕೂಡಲೇ ಜಿಲ್ಲೆಯಿಂದ ಗಡಿಪಾರು ಮಾಡಬೇಕು. ಆದಿಜಾಂಬವ ಸಮಾಜ ವಾಸ ಮಾಡುವ ಗ್ರಾಮಗಳಿಗೆ ಸೂಕ್ತ ರಕ್ಷಣೆ ನೀಡಬೇಕು.

ಕೂಡಲೇ ತಾಲ್ಲೂಕು ಆಡಳಿತ ಸಭೆ ನಡೆಸಿ ಈ ಸಮುದಾಯಕ್ಕೆ ಆಗಿರುವ ಅನ್ಯಾಯವನ್ನು ಸರಿಪಡಿಸಬೇಕು. ಇಂತಹ ಅಹಿತಕರ ಘಟನೆಗಳು ತಾಲ್ಲೂಕಿನಾದ್ಯಂತ ನಡೆಯದಂತೆ ತಾಲ್ಲೂಕು ಆಡಳಿತ ಮುನ್ನೆಚ್ಚರಿಕೆ ವಹಿಸಬೇಕು. ಎಂದು ಒತ್ತಾಯಿಸಿದ್ದಾರೆ. ಈ ಪ್ರತಿಭಟನಾ ಧರಣಿಯಲ್ಲಿ ಅಧ್ಯಕ್ಷರಾದ ಬಿ. ಶಿವಣ್ಣ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಡಿ.ಕುಮಾರ್, ಮಾಜಿ ನಗರಸಭಾ ಸದಸ್ಯರಾದ ಹೆಚ್.ಕೆ. ಸತೀಶ್ ಕುಮಾರ್, ಗೌರವಾಧ್ಯಕ್ಷರು ರಾಚಯ್ಯ, ಮುಖಂಡರಾದ ಸಣ್ಣಮಾದಯ್ಯ, ಕಾಂತರಾಜು, ಶಿವಮ್ಮ, ಬೆಳ್ತೂರು ವೆಂಕಟೇಶ್, ರಾಯನಹಳ್ಳಿ ಸ್ವಾಮಿ, ಶಿವರಾಮು, ಬಸವರಾಜು, ಬನ್ನಿಕುಪ್ಪೆ ಲೋಕೇಶ್, ಸಂತೋಷ್, ಜಾಬಗೆರೆ ಮಹೇಶ್, ಶಿವರಾಜು, ಗ್ರಾಮ ಪಂಚಾಯ್ತಿ ಮಾಜಿ ಅಧ್ಯಕ್ಷರಾದ ಮೋಹನ್, ಹರೀಶ್, ಆರ್. ಮಹದೇವ, ಶಿವಣ್ಣ ಅಗ್ರಹಾರ, ವಜ್ರೇಶ್ ಕೆ.ಆರ್ ನಗರ, ಮಾಜಿ ಸದಸ್ಯರುಗಳಾದ ಸೋಮು, ನಟ, ಬನ್ನಿಕುಪ್ಪೆ ನಾಗಯ್ಯ, ಪರಶುರಾಮ್, ಮಹದೇವ್, ಶಿವಣ್ಣ, ರಾಯನಹಳ್ಳಿ ಚನ್ನ, ಸರಸ್ವತಿಪುರಂ ಜಯಶಂಕರ, ಶೇಖರ್, ಬನ್ನಿಕುಪ್ಪೆ ಸಣ್ಣಸ್ವಾಮಿ, ಲೋಕೇಶ್ ಇನ್ನು ಮುಂತಾದ ನೂರಾರು ಜನರು ಭಾಗವಹಿಸಿದ್ದರು.

# ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಬೀದರ**

2026–27ನೇ ಸಾಲಿಗೆ ಬೀದರ ಜಿಲ್ಲೆಯಲ್ಲಿನ ಪ್ರತಿಷ್ಠಿತ ಶಾಲೆಯ (ಕನ್ನಡ ಮಾಧ್ಯಮ) ವಸತಿ ಶಾಲೆಯಲ್ಲಿ ಪರಿಶಿಷ್ಟ ಪಂಗಡದ ಪ್ರತಿಭಾವಂತ ವಿದ್ಯಾರ್ಥಿಗಳನ್ನು 6ನೇ ತರಗತಿಗೆ ಅರ್ಹತಾ ಪರೀ–ಕ್ಷೆಯ ಮೂಲಕ ಆಯ್ಕೆ ಮಾಡಲು ವಿದ್ಯಾರ್ಥಿಗಳಿಂದ ಆಫ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಬೀದರ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿದ್ಯಾರ್ಥಿಗಳು ಪರಿಶಿಷ್ಟ ಪಂಗಡ ಜಾತಿಗೆ ಸೇರಿದವರಾಗಿರಬೇಕು, ವಿದ್ಯಾರ್ಥಿ ಕುಟುಂಬದ ವಾರ್ಷಿಕ ಆದಾಯ ಮಿತಿ ರೂ. 2.50 ಲಕ್ಷಗಳೊಳಗಿರಬೇಕು. ಪರಿಶಿಷ್ಟ ಪಂಗಡದ 35 ವಿದ್ಯಾರ್ಥಿಗಳ ಗುರಿ ನಿಗದಿಪಡಿಸಲಾಗಿದೆ.

ವಿದ್ಯಾರ್ಥಿಗಳು ಅರ್ಜಿಗಳನ್ನು ದಿನಾಂಕ: 04–05–2026 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಅರ್ಜಿಗಳ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಬೀದರ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗೆ ಕಚೇರಿಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ನೂತನ ಅಧ್ಯಕ್ಷ ಆಶಾ ಭರತ್ ಕುಮಾರ್ ಉಪಾಧ್ಯಕ್ಷೆ ಜಯಮ್ಮ ಆಯ್ಕೆ



• **ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ**

ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘಕ್ಕೆ ನೂತನ ಅಧ್ಯಕ್ಷರಾಗಿ ಆಶಾ ಭರತ್ ಕುಮಾರ್ ಉಪಾಧ್ಯಕ್ಷೆಯಾಗಿ ಜಯಮ್ಮ ಆಯ್ಕೆಯಾಗಿದ್ದಾರೆ.

ತಾಲೂಕಿನ ಚೌಡೇನಹಳ್ಳಿ ಗ್ರಾಮದ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಇವರುಗಳನ್ನು ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ನಿರ್ದೇಶಕರಾದ ಮಮತಾ. ಅನುಸೂಯ. ರಾಜಮ್ಮ. ರಾಧಾ. ಕಾಂಗ್ರೆಸ್ ಪಕ್ಷದ ಮುಖಂಡರಾದ ಸುರೇಶ್. ರಂಗಸ್ವಾಮಿ. ಮಹಾದೇವ್. ಭರತ್ ಕುಮಾರ್. ಚಂದ್ರಶೇಖರ್. ಪರಮೇಶ್. ಸಿಆರ್ ಚಂದ್ರಶೇಖರ್. ಸೋಹನ್. ಚಂದ್ರ. ಸ್ವಾಮಿ ಸೇರಿದಂತೆ ಚೌಡನಹಳ್ಳಿ, ಚಿಟ್ಟೆನಹಳ್ಳಿ ಚೆನ್ನನಹಳ್ಳಿ ಗ್ರಾಮದ ಮುಖಂಡರುಗಳು ಹಾಜರಿದ್ದರು.

# ಹೊರಗುತ್ತಿಗೆ ಕಾನೂನು ಅಧಿಕಾರಿ ಸಹಾಯಕ ಕಾನೂನು ಅಧಿಕಾರಿ ಹುದ್ದೆಗೆ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ**

ಕರ್ನಾಟಕ ಮಹಾನಗರ ಪಾಲಿಕೆಗಳು (ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಸಾಮಾನ್ಯ ನೇಮಕಾತಿ) ನಿಯಮಗಳು 2011 ರನ್ವಯ ಕಾನೂನು ಅಧಿಕಾರಿ–01

ಹುದ್ದೆ ಹಾಗೂ ಸಹಾಯಕ ಕಾನೂನು ಅಧಿಕಾರಿ–01 ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

ಕಾನೂನು ಅಧಿಕಾರಿ–01 ಹುದ್ದೆಗೆ ಎಲ್.ಎಲ್.ಎಂ. ಪದವಿ ಹೊಂದಿರಬೇಕು. ಕನಿಷ್ಠ 10 ವರ್ಷದ ಅನುಭವ ಹೊಂದಿರಬೇಕು ಹಾಗೂ ಉಚ್ಚ ನ್ಯಾಯಾಲಯದ/ ಜಿಲ್ಲಾ ನ್ಯಾಯಾಲಯದ ನ್ಯಾಯಾಧೀಶರಾಗಿ ಸೇವೆ ಸಲ್ಲಿಸಿರಬೇಕು. ಸಹಾಯಕ ಕಾನೂನು ಅಧಿಕಾರಿ–01 ಹುದ್ದೆಗೆ ಎಲ್.ಎಲ್.ಎಂ. ಕನಿಷ್ಠ 05 ವರ್ಷ ನ್ಯಾಯವಾದಿಗಳಾಗಿ ಸೇವೆ ಸಲ್ಲಿಸಿರಬೇಕು.

ಅಭ್ಯರ್ಥಿಗಳ ಗರಿಷ್ಠ ವಯೋಮಿತಿ 68 ವರ್ಷದೊಳಗಿರಬೇಕು. ನೇಮಕಗೊಳ್ಳುವ ಅಭ್ಯರ್ಥಿಯು ನೇಮಕಾತಿಯ ಮೊದಲು ವೈದ್ಯಕೀಯ ದೃಢೀಕೃತ ಪ್ರಮಾಣ ಪತ್ರವನ್ನು ಸಲ್ಲಿಸಬೇಕು. ಹೆಚ್ಚಿನ ಸೇವಾ ಅನುಭವ ಇರುವವರಿಗೆ ಆದ್ಯತೆ ನೀಡಲಾಗುತ್ತದೆ.

ಕಾನೂನು ಅಧಿಕಾರಿ ಹುದ್ದೆಗೆ ಮಾಸಿಕ ವೇತನ ರೂ.65,000 ರೂ. ಹಾಗೂ ಸಹಾಯಕ ಕಾನೂನು ಅಧಿಕಾರಿ ಹುದ್ದೆಗೆ ಮಾಸಿಕ ವೇತನ 50,000 ರೂ.ನಿಗದಿಪಡಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಯೊಂದಿಗೆ ಅಗತ್ಯ ದಾಖಲೆಗಳನ್ನು ಲಗತ್ತಿಸಿ 2026ರ ಮೇ 8ರ ಮಧ್ಯಾಹ್ನ 1.30 ಗಂಟೆಯೊಳಗೆ ಕಲಬುರಗಿ ಮಹಾನಗರ ಪಾಲಿಕೆ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸದರಿ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

# 6ನೇ ತರಗತಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ**

2026–27ನೇ ಸಾಲಿನಲ್ಲಿ ಕಲಬುರಗಿ ಜಿಲ್ಲಾ ವ್ಯಾಪ್ತಿಯಲ್ಲಿನ ಪ್ರತಿಷ್ಠಿತ ಶಾಲೆಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳು 6ನೇ ತರಗತಿಗೆ ಪ್ರವೇಶ ಪಡೆಯಲು ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು. 2025–26ನೇ ಸಾಲಿನ 5ನೇ ತರಗತಿಯಲ್ಲಿ ಕಡ್ಡಾಯವಾಗಿ ಶೇ. 60 ರಷ್ಟು ಅಂಕಗಳು ಪಡೆದಿರಬೇಕು. ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ ಸೇರಿ 2.50 ಲಕ್ಷ ರೂ. ವಿಶೇಷ ವರ್ಗಗಳಿಗೆ ಸೇರಿರುವ ಮಕ್ಕಳು ಕಡ್ಡಾಯವಾಗಿ ಸಂಬಂಧಿಸಿದ ಪ್ರಾಧಿಕಾರದಿಂದ/ ಅಧಿಕಾರಿಗಳಿಂದ ಪ್ರಮಾಣಪತ್ರ ಪಡೆದು ಸಲ್ಲಿಸುವುದು. (ಕೋವಿಡ್–19 ನಿಂದ ತಂದೆ/ತಾಯಿಯನ್ನು ಕಳೆದುಕೊಂಡ ಮಕ್ಕಳು, ಜೀತ ವಿಮುಕ್ತ ಮಕ್ಕಳು, ಪೌರಕಾರ್ಮಿಕರ ಮಕ್ಕಳು, ಸಫಾಯಿ ಕರ್ಮಚಾರಿ ಮಕ್ಕಳು, ಸ್ಮಶಾನಭೂಮಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ಮಕ್ಕಳು, ದೇವದಾಸಿಯರ ಮಕ್ಕಳು, ಅಂಗವಿಕಲ ಮಕ್ಕಳು, ಯೋಜನಾ ನಿರಾಶ್ರಿತರ ಮಕ್ಕಳು, ಮಾಜಿ ಸೈನಿಕರ ಮಕ್ಕಳು, ಸಾಲದ ಬಾದೆಯಿಂದ ಆತ್ಮಹತ್ಯೆಯಿಂದ ಮೃತರಾದ ರೈತರ ಮಕ್ಕಳು ಇತ್ಯಾದಿ ವಿಶೇಷ ವರ್ಗಗಳಾಗಿರುತ್ತವೆ).

ಅರ್ಹ ವಿದ್ಯಾರ್ಥಿಗಳು 2026ರ ಏಪ್ರಿಲ್ 15 ರಿಂದ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಕೆಗೆ ಮೇ 4 ರಂದು ಕೊನೆಯ ದಿನವಾಗಿದೆ. ಮೇ 6ರಂದು ಅರ್ಜಿಗಳ ಪರಿಶೀಲನೆ ನಡೆಯಲಿದೆ. ಮೇ 12 ರಂದು ಪ್ರವೇಶ ಪರೀಕ್ಷೆ ಜರುಗಲಿದೆ. ಮೇ 15 ರಂದು ಪ್ರವೇಶ ಪರೀಕ್ಷೆ ಫಲಿತಾಂಶ ಘೋಷಣೆ ಮಾಡಲಾಗುತ್ತದೆ. ಮೇ 16 ರಂದು ಅರ್ಹ ವಿದ್ಯಾರ್ಥಿಗಳನ್ನು ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಲಾಗುತ್ತದೆ. ಆಯ್ಕೆಯಾದ ಶಾಲೆಗೆ ದಾಖಲಾಗಲು 2026ರ ಮೇ 30 ರಂದು ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಐವಾನ್ ಶಾಹಿ ರಸ್ತೆಯಲ್ಲಿರುವ ಮಿನಿ ವಿಧಾನಸೌಧ ಎದುರುಗಡೆಯಿರುವ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿಯನ್ನು ಹಾಗೂ ಸಂಬಂಧಿಸಿದ ತಾಲ್ಲೂಕುಗಳ ಸಮಾಜ ಕಲ್ಯಾಣ ಇಲಾಖೆ, ಸಹಾಯಕ ನಿರ್ದೇಶಕರು, ಗ್ರೇಡ್–1/2, ರವರ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

# ಜಿಲ್ಲಾದ್ಯಂತ ಸಮರ್ಪಕ ನೀರು ಪೂರೈಕೆಯಾಗಲಿ: ಡಿಸಿ

• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ




ಕೊಪ್ಪಳ ಜಿಲ್ಲೆಯ ಪಟ್ಟಣ, ನಗರ ಪ್ರದೇಶ ಮತ್ತು ಎಲ್ಲಾ ಗ್ರಾಮ ಪಂಚಾಯತ್‌ಗಳು ಸೇರಿದಂತೆ ಜಿಲ್ಲೆಯಾದ್ಯಂತ ಯಾವುದೇ ಕಡೆಗಳಲ್ಲಿ ಕಡಿಯುವ ನೀರಿನ ಸಮಸ್ಯೆಯಾಗಬಾರದು. ಬೇಸಿಗೆಯ ಈ ಅವಧಿಯಲ್ಲಿ ಕುಡಿಯುವ ನೀರು ಪೂರೈಕೆಗೆ ಮೊದಲಾದ್ಯತೆ ನೀಡಬೇಕು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಬಿ. ಇಟ್ನಾಳ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಜಿಲ್ಲಾ ಪಂಚಾಯತ್‌ನ ಜೆ.ಹೆಚ್. ಪಟೇಲ್ ಸಭಾಂಗಣದಲ್ಲಿ ಏಪ್ರೀಲ್ 8ರಂದು ಕೊಪ್ಪಳ ಸೇರಿದಂತೆ ವಿವಿಧ ತಾಲೂಕಿನ ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಮತ್ತು ವಿವಿಧ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಗ್ರಾಮ ಪಂಚಾಯತ್ ವ್ಯಾಪ್ತಿಯ ಯಾವುದೇ ಹಳ್ಳಿಗಳಲ್ಲಿ ಕುಡಿಯುವ ನೀರಿನ ಬವಣೆ ಎದುರಾಗಬಹುದು ಎಂಬುದು ಗೊತ್ತಾದ ಕೂಡಲೇ ಅಲ್ಲಿ ಕುಡಿಯುವ ನೀರು ಸರಬರಾಜಿಗೆ ರ‍್ಯಾಯ ವ್ಯವಸ್ಥೆ ಮಾಡಿಕೊಂಡಿರಬೇಕು. ಅಂತಹ ಕಡೆಗಳಲ್ಲಿ ಮುಂಚಿತವಾಗಿಯೇ ಖಾಸಗಿ ಬೋರವೆಲ್ ಗುರುತಿಸಬೇಕು. ಮಾಲೀಕರೊಂದಿಗೆ ಮುಂಚಿತವಾಗಿಯೇ ಒಪ್ಪಂದ ಪತ್ರ ಮಾಡಿಕೊಂಡಿರಬೇಕು. ಬೋರವೆಲ್ ಮಾಲೀಕರು ಒಪ್ಪದಿದ್ದಲ್ಲಿ ಜಿಲ್ಲಾಡಳಿತದ ಗಮನಕ್ಕೆ ತರಬೇಕು ಎಂದು ಜಿಲ್ಲಾಧಿಕಾರಿಗಳು ಆಯಾ ಪಿಡಿಓಗಳಿಗೆ ಸೂಚನೆ ನೀಡಿದರು.

ಬೇರೆ ಬೇರೆ ಪತ್ರಿಕೆಗಳಲ್ಲಿ ನೀರಿನ ಬವಣೆ ಬಗ್ಗೆ ವರದಿಯಾಗುತ್ತಿವೆ. ಇದನ್ನು ಗಮನಿಸಿದ್ದೀರಾ ಎಂದು ಅಧಿಕಾರಿಗಳಿಗೆ ಕೇಳಿದ ಜಿಲ್ಲಾಧಿಕಾರಿಗಳು, ಆಯಾ ತಾಲೂಕಿನ ತಹಸೀಲ್ದಾರರು ನಿರಂತರವಾಗಿ ಗ್ರಾಮ ಆಡಳಿತ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡು ಆಯಾ ಗ್ರಾಮಗಳ ಕುಡಿಯುವ ನೀರಿನ ಪರಿಸ್ಥಿತಿಯನ್ನು ಅವಲೋಕಿಸಬೇಕು ಎಂದು ಎಲ್ಲ ತಹಸೀಲ್ದಾರರಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಬೇಸಿಗೆಯ ಅವಧಿಯಲ್ಲಿ ಯಾವುದೇ ಹಳ್ಳಿಗಳಲ್ಲಿ ನೀರಿನ ಕೊರತೆ–ಯಾಗದಂತೆ ನಿರಂತರ ನಿಗಾ ವಹಿಸಬೇಕು ಎಂದು ಎಲ್ಲ ಪಿಡಿಓಗಳಿಗೆ ಸೂಚನೆ ನೀಡಿದರು. ಎಲ್ಲ ಪಿಡಿಓಗಳ ಮೇಲೆ ಸೂಕ್ತ ಮೇಲ್ವಿಚಾರಣೆ ನಡೆಸಲು ತಾಪಂ ಇಓಗಳಿಗೆ ನಿರ್ದೇಶನ ನೀಡಿದರು.

*ಅನುದಾನ ಬೇಕಾದರೆ ತಿಳಿಸಿ:*

ಪಂಚಾಯತವಾರು ಪರಿಶೀಲನೆ ವೇಳೆ, ಕುಡಿಯುವ ನೀರು ಪೂರೈಕೆಗೆ ಅನುದಾನ ಕೊರತೆ ಇದೆಯಾ? ಎಂದು ಕೇಳಿದ ಜಿಲ್ಲಾಧಿಕಾರಿಗಳು, ಪಂಚಾಯಿತಿಯ ಸ್ಥಳೀಯ ಅನುದಾನ, 15ನೇ ಹಣಕಾಸಿನ ಅನುದಾನ ಅಥವಾ ಕರ ವಸೂಲಾತಿಗೆ ಗಮನ ಹರಿಸಿ ಅನುದಾನ ಲಭ್ಯತೆಗೆ ಒತ್ತು ಕೊಡಬೇಕು. ಅನುದಾನ ಇಲ್ಲ ಎಂದು ನೆಪ ಹೇಳಿ ನಿರ್ಲಕ್ಷ್ಯ ಮಾಡಬಾರದು ಎಂದು ಎಚ್ಚರಿಕೆ ನೀಡಿದರು. ಅವಶ್ಯಕತೆ ಇದ್ದಲ್ಲಿ ಅನುದಾನ ಬೇಡಿಕೆಯ ಪತ್ರವನ್ನು ಕೂಡಲೇ ಸಲ್ಲಿಸಬೇಕು. ಪ್ರತಿಯೊಂದು ವಿಷಯವನ್ನು ಕಡ್ಡಾಯವಾಗಿ ಜಿಲ್ಲಾ ಪಂಚಾಯತ್ ಸಿಇಓ ಅವರ ಗಮನಕ್ಕೆ ತರಬೇಕು ಎಂದು ಜಿಲ್ಲಾಧಿಕಾರಿಗಳು ಪಿಡಿಓಗಳಿಗೆ ಸೂಚನೆ ನೀಡಿದರು. ಕುಡಿಯುವ ನೀರು ಪೂರೈಕೆಗೆ ಸಂಬಂಧಿಸಿದಂತೆ ಯಾವುದೇ ರೀತಿಯ ಹಣಕಾಸಿನ ಕೊರತೆಯಿಲ್ಲ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ನಿಯಮಿತವಾಗಿ ಸಭೆ ನಡೆಸಿ:* ಜಿಲ್ಲೆಯ ಎಲ್ಲ ಪಂಚಾಯತಗಳಲ್ಲಿ ಗ್ರಾಮ ನೀರು ನೈರ್ಮಲ್ಯ ಸಮಿತಿ ಸಭೆಗಳು ನಿಯಮಿತವಾಗಿ ನಡೆಯಬೇಕು. ಈ ಸಭೆಗಳಲ್ಲಿ ಕರ ವಸೂಲಾತಿ ಮತ್ತು ಕುಡಿಯುವ ನೀರಿನ ಪರಿಸ್ಥಿತಿಯ ಬಗ್ಗೆ ಗಂಭೀರವಾಗಿ ಚರ್ಚಿಸಿದಲ್ಲಿ ಯಾವುದೇ ಗ್ರಾಮಗಳಲ್ಲಿ ದಿಢೀರ್ ಎಂದು ನೀರಿನ ಸಮಸ್ಯೆ ಉದ್ಭವಿಸಲಾರದು ಎಂದು ಜಿಲ್ಲಾಧಿಕಾರಿಗಳು ಸಲಹೆ ಮಾಡಿದರು.

**ನೀರಿನ ಪರೀಕ್ಷೆ ಕಡ್ಡಾಯ**

ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್ ವ್ಯಾಪ್ತಿಯ ಮೇಲ್ಮಟ್ಟದ ಜಲಾಗಾರಗಳು ಸದಾಕಾಲ ಶುಚಿಯಾಗಿರುವಂತೆ ನೋಡಿಕೊಳ್ಳಬೇಕು. ಕಡ್ಡಾಯವಾಗಿ ಪರೀಕ್ಷಿಸಿಯೇ ಕುಡಿಯುವ ನೀರನ್ನು ಸರಬರಾಜು ಮಾಡಬೇಕು ಎಂದು ಜಿಲ್ಲಾಧಿಕಾರಿಗಳು, ಎಲ್ಲ ಪಿಡಿಓಗಳು ಮತ್ತು ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

*ನಗರ ಪ್ರದೇಶದಲ್ಲಿ ಸಮಸ್ಯೆ ಇಲ್ಲ:* ಕೊಪ್ಪಳ ಹಾಗೂ ಗಂಗಾವತಿ ನಗರಸಭೆ, ಕಾರಟಗಿ ಹಾಗೂ ಕುಷ್ಟಗಿ ಪುರಸಭೆ ಮತ್ತು ಯಲಬುರ್ಗಾ, ಕುಕನೂರ, ಕನಕಗಿರಿ, ಭಾಗ್ಯನಗರ, ತಾವರಗೇರಾ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡು ಬಂದಿಲ್ಲ ಎಂದು ಪೌರಾಯುಕ್ತರು, ಮುಖ್ಯಾಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

*ಕಾರಣ ಕೇಳಿ ನೋಟೀಸ್ ಜಾರಿ:* ತುಂಗಭದ್ರಾ ಡ್ಯಾಮನಿಂದ ಕಾಲುವೆಗೆ ನೀರು ಹರಿಸಿದ್ದು ಈ ಮೊದಲೇ ನೀಡಿದ ಸೂಚನೆಯಂತೆ ಕಾಲುವೆ ವ್ಯಾಪ್ತಿಯ ಕೆರೆಗಳ ಭರ್ತಿ ಕಾರ್ಯ ನಡೆದಿದೆಯೇ ಎಂದು ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಅಭಿಯಂತರರಿಗೆ ಪ್ರಶ್ನಿಸಿದ ಜಿಲ್ಲಾಧಿಕಾರಿಗಳು, ಕಾಲುವೆಗೆ ನೀರು ಹರಿಸಿದ್ದರು ಸಹ ಕೆರೆ ಭರ್ತಿಗೆ ನಿರ್ಲಕ್ಷ್ಯ ವಹಿಸಿದ ಆರ್‌ಡಬ್ಲ್ಯುಎಸ್‌ನ ಗಂಗಾವತಿಯ ಸಹಾಯಕ ಅಭಿಯಂತರರಿಗೆ ಕಾರಣ ಕೇಳಿ ನೋಟೀಸ್ ಜಾರಿಗೆ ನಿರ್ದೇಶನ ನೀಡಿದರು.

# ಸಮ್ಮೇಳನದಲ್ಲಿ ವಿಚಾರಗೋಷ್ಠಿಗಳು, ಪತ್ರಕರ್ತರಿಗೆ ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ




ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ 40ನೇ ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನ ಬೀದರ್‌ನಲ್ಲಿ ಏ.11 ಮತ್ತು 12ರಂದು ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಮಲ್ಲಪ್ಪ ಸಂಕೀನ್ ಹೇಳಿದರು. ಗುರುವಾರ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೀದರ್‌ನ ಝೀರಾ ಕನ್ವೆನ್ಷನ್ ಹಾಲ್‌ನಲ್ಲಿ ಅಂದು ಬೆಳಗ್ಗೆ 11ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಮ್ಮೇಳನ ಉದ್ಘಾಟಿಸುವರು. ವಸ್ತುಪ್ರದರ್ಶನಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಚಾಲನೆ ನೀಡುವರು ಎಂದರು. ಬಸವಕಲ್ಯಾಣದ ಹಾರಕೂಡ ಹಿರೇಮಠದ ಶ್ರೀ ಡಾ.ಚನ್ನವೀರ ಶಿವಾಚಾರ್ಯರು, ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ಡಾ.ಬಸವಲಿಂಗ ಪಟ್ಟದ್ದೇವರು ಸಾನ್ನಿಧ್ಯ ವಹಿಸುವರು. ಪತ್ರಕರ್ತ ವಿಶ್ವೇಶ್ವರ ಭಟ್ ಪ್ರಧಾನ ಭಾಷಣ ಮಾಡುವರು.

ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅಧ್ಯಕ್ಷತೆ ವಹಿಸುವರು ಎಂದು ತಿಳಿಸಿದರು. ಅದಕ್ಕೂ ಮುನ್ನ ಬಸವೇಶ್ವರ ವೃತ್ತದಿಂದ ವೇದಿಕೆವರೆಗೂ ಕಲಾ ತಂಡಗಳೊಂದಿಗೆ ಸಮ್ಮೇಳನದ ಮೆರವಣಿಗೆ ನಡೆಸಲಾಗುವುದು ಎಂದು ವಿವರಿಸಿದರು. ಸಮ್ಮೇಳನದಲ್ಲಿ ಪತ್ರಕರ್ತರ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲುವ ಕೆಲಸವಾಗುತ್ತಿದೆ. ಈ ಬಾರಿಯೂ ಸಮ್ಮೇಳನದಲ್ಲಿ ಅನೇಕ ಗೋಷ್ಠಿಗಳನ್ನು ಆಯೋಜಿಸಲಾಗಿದೆ ಎಂದರು.

ಸಮ್ಮೇಳನದ ಮೊದಲ ದಿನ ಮಧ್ಯಾಹ್ನ 2 ಗಂಟೆಗೆ ಗಾಂಧಿ–ಅಂಬೇಡ್ಕರ್ ಮತ್ತು ಪತ್ರಿಕೋದ್ಯಮ ವಿಷಯದ ಕುರಿತು ಗೋಷ್ಠಿ ನಡೆಯಲಿದೆ. ಕಾನೂನು ಮತ್ತು ಸಂಸದೀಯ ಸಚಿವ ಎಚ್.ಕೆ.ಪಾಟೀಲ್ ಉದ್ಘಾಟಿಸುವರು. ಸಂಜೆ 3.30ಕ್ಕೆ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮತ್ತು ಮಾಧ್ಯಮ ಕುರಿತು 2ನೇ ಗೋಷ್ಠಿ ನಡೆಯಲಿದ್ದು, ಪತ್ರಕರ್ತ ರವೀಂದ್ರ ಭಟ್ ಉದ್ಘಾಟಿಸುವರು.


ಸಂಜೆ 5ಕ್ಕೆ ಗಡಿ ಸಮಸ್ಯೆಗಳು ಕುರಿತು ಸಂವಾದ ಮತ್ತು ಸಂಜೆ 5.30ಕ್ಕೆ ಮಾಧ್ಯಮ ಮತ್ತು ಉದ್ಯಮ ಕುರಿತು ಉಪನ್ಯಾಸ ಆಯೋಜಿಸಲಾಗಿದೆ. ಸಂಜೆ 7ಕ್ಕೆ ಸಂಗೀತ ಸಂಜೆ ಕಾರ್ಯಕ್ರಮ ನಡೆಯಲಿದೆ ಎಂದರು. ಏ.12ರಂದು ಬೆಳಗ್ಗೆ 9.45ಕ್ಕೆ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅಧ್ಯಕ್ಷತೆಯಲ್ಲಿ ಪ್ರತಿನಿಧಿಗಳ ಸಮಾವೇಶ ಮತ್ತು ಸರ್ವ ಸದಸ್ಯರ ಸಭೆ ನಡೆಯಲಿದೆ. ಬೆಳಗ್ಗೆ 11.30ಕ್ಕೆ ಮಾಹಿತಿ ಹಕ್ಕು ಮತ್ತು ಪತ್ರಕರ್ತರು ಕುರಿತು 3ನೇ ವಿಚಾರಗೋಷ್ಠಿ ನಡೆಯಲಿದೆ. ಕರ್ನಾಟಕ ಮಾಹಿತಿ ಹಕ್ಕು ಆಯೋಗದ ಆಯುಕ್ತ ರುದ್ರಣ್ಣ ಹರ್ತಿಕೋಟೆ ಉದ್ಘಾಟಿಸುವರು. ಮತ್ತೋರ್ವ ಆಯುಕ್ತ ಬದ್ರುದ್ದೀನ್ ವಿಷಯ ಪ್ರಸ್ತಾವನೆ ಮಾಡುವರು. ಆಯೋಗದ ಕಲಬುರಗಿ ವಿಭಾಗದ ಆಯುಕ್ತ ಬಿ.ವೆಂಕಟಸಿಂಗ್ ಅವರು ಅಧ್ಯಕ್ಷತೆ ವಹಿಸುವರು. ಮಧ್ಯಾಹ್ನ 12ಕ್ಕೆ ಆರ್ಟಿಫಿಷಿಯಲ್ ಇಂಟಲಿಜೆನ್ಸ್, ಡಿಜಟಲೀಕರಣ ಪ್ರಭಾವ ಕುರಿತು ಗೋಷ್ಠಿ ನಡೆಯಲಿದೆ. ಪತ್ರಕರ್ತ ರವಿ ಹೆಗಡೆ ಉದ್ಘಾಟಿಸುವರು ಎಂದರು. ಮಧ್ಯಾಹ್ನ 3ಕ್ಕೆ ಸಮಾರೋಪ ಸಮಾರಂಭ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ. ಸ್ಪೀಕರ್ ಯು.ಟಿ. ಖಾದರ್ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದಪ್ಪ ಲಿಂಗೇರಿ ಇದ್ದರು.

**ನೂರಕ್ಕೂ ಅಧಿಕ ಪತ್ರಕರ್ತರು ಭಾಗಿ**

“ ಸಮ್ಮೇಳನಕ್ಕೆ ಜಿಲ್ಲೆಯಿಂದ ಸುಮಾರು 100ಕ್ಕೂ ಅಧಿಕ ಪತ್ರಕರ್ತರು ಆಗಮಿಸುವ ನಿರೀಕ್ಷೆ ಇದೆ. ಜಿಲ್ಲೆಯ ಪತ್ರಕರ್ತರಾದ ಅಮರೇಶ್ ಹಿರೇಮಠ, ಮಲ್ಲಯ್ಯ ಪೋಲಂಪಲ್ಲಿ, ಬಸವರಾಜ ಕಟ್ಟಿಮನಿ, ಸಂಜೀವ್ ರಾವ್ ಕುಲಕರ್ಣಿ ಅವರಿಗೆ ರಾಜ್ಯಮಟ್ಟದ ಪ್ರಶಸ್ತಿಗೆ ಪ್ರದಾನ ಮಾಡಲಾಗುತ್ತಿದೆ. ಇದು ನಿಜಕ್ಕೂ ಹೆಮ್ಮೆಯ ಸಂಗತಿಯಾಗಿದೆ.

# ನಮ್ಮ ಶಕ್ತಿಯನ್ನು ಸಂಘಟಿಸುವ ವೇದಿಕೆ: ಮುದ್ನಾಳ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಈ ಪ್ರಶಿಕ್ಷಣ ವರ್ಗವು ಪಕ್ಷದ ಮಹಾ ಅಭಿಯಾನವಾಗಿದೆ. ನಮ್ಮ ಚಿಂತನೆಗೆ ದಿಕ್ಕು ನೀಡುವ, ನಮ್ಮ ಶಕ್ತಿಯನ್ನು ಸಂಘಟಿಸುವ, ಮತ್ತು ನಮ್ಮ ಕಾರ್ಯಪಟುತೆಯನ್ನು ಮತ್ತಷ್ಟು ಬಲಪಡಿಸುವ ಮಹತ್ವದ ವೇದಿಕೆಯಾಗಿದೆ ಎಂದು ರಾಜ್ಯ ಕಾರ್ಯಕಾರಿಣಿ ಸದಸ್ಯರಾದ ಮಹೇಶರಡ್ಡಿ ವೆಂಕಟರಡ್ಡಿ ಮುದ್ನಾಳ ಅವರು ದೋರನಹಳ್ಳಿಯಲ್ಲಿ ನಡೆದ ಭಾರತೀಯ ಜನತಾ ಪಕ್ಷ ಯಾದಗಿರಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಮಂಡಲ ಪ್ರಶಿಕ್ಷಣ ವರ್ಗ – 3 ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಒಬ್ಬ ಕಾರ್ಯಕರ್ತನ ಶಕ್ತಿ ಕೇವಲ ಸಂಖ್ಯೆಯಲ್ಲಿ ಇಲ್ಲ, ಅವನಲ್ಲಿ ಇರುವ ಜ್ಞಾನ, ಶಿಸ್ತು, ಹಾಗೂ ನಿಷ್ಠೆಯಲ್ಲಿದೆ. ಈ ತರಬೇತಿ ವರ್ಗದ ಮುಖ್ಯ ಉದ್ದೇಶವೇನೆಂದರೆ, ನಮ್ಮ ಪಕ್ಷದ ತತ್ವ, ಸಿದ್ಧಾಂತಗಳನ್ನು ಗಾಢವಾಗಿ ಅರ್ಥಮಾಡಿಕೊಳ್ಳುವುದು. ಸಮಾಜ ಸೇವೆಯಲ್ಲಿ ಹೆಚ್ಚು ಪರಿಣಾಮಕಾರಿಯಾಗಿ ಭಾಗವಹಿಸುವುದು.

ನಮ್ಮ ಸಂಘಟನೆಯನ್ನು ಬಲಿಷ್ಠಗೊಳಿಸುವುದು ದೇಶ ಮೊದಲು, ಪಕ್ಷ ನಂತರ, ಸ್ವಾರ್ಥ ಕೊನೆಗೆ ಎನ್ನುವ ಸಿದ್ಧಾಂತದ ಮೇಲೆ ನಿಂತಿರುವ ಪಕ್ಷ ನಮ್ಮದು ಎಂದು ಹೇಳಿದರು. ಕಲಿತದ್ದನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು. ಗ್ರಾಮದಿಂದ ನಗರವರೆಗೆ ಪಕ್ಷದ ಸಂದೇಶವನ್ನು ತಲುಪಿಸುವುದು

ನಮ್ಮ ಪ್ರತಿಯೊಬ್ಬ ಕಾರ್ಯಕರ್ತರ ಕೆಲಸ. ನಮ್ಮ ಕಾರ್ಯಕರ್ತರು ಒಂದು ಚಲಿಸುವ ವಿಶ್ವವಿದ್ಯಾಲಯ ಆಗಬೇಕು. ನಮ್ಮ ಮಾತು, ನಮ್ಮ ನಡೆ, ನಮ್ಮ ಸೇವೆ  ಇವು ಜನರಿಗೆ ಪ್ರೇರಣೆ ಆಗಬೇಕು. ಯುವಕರೇ ನಮ್ಮ ಶಕ್ತಿ ನಮ್ಮ ಸಂಘಟನೆಯ ಭವಿಷ್ಯ ನಮ್ಮೆಲ್ಲರ ಕೈಯಲ್ಲಿದೆ.

ನಾವು ಸಕ್ರಿಯವಾಗಿ ಪಾಲ್ಗೊಂಡರೆ, ನಮ್ಮ ಅಭಿಯಾನ ಯಶಸ್ವಿಯಾಗುತ್ತದೆ. ನಾವು ಒಗ್ಗಟ್ಟಾಗಿ ಕೆಲಸ ಮಾಡಿದರೆ ಯಾವುದೇ ಗುರಿ ಅಸಾಧ್ಯವಲ್ಲ ಎಂದು ಮಾತನಾಡಿದರು. ಸಮಾರಂಭದಲ್ಲಿ ಹಿರಿಯ ಮುಖಂಡರಾದ ಶ್ರೀ ರಾಚಣ್ಣಗೌಡ ಮುದ್ನಾಳ, ಶ್ರೀ ಸಿದ್ದಣಗೌಡ ವಡಗೇರಾ, ಶ್ರೀ ಶರಣಭೂಪಾಲರಡ್ಡಿ ನಾಯ್ಕಲ್, ಶ್ರೀ ದೇವರಾಜ ನಾಯಕ್ ಉಳ್ಳೆಸೂಗೂರ್, ವಕ್ತಾರರಾದ ಶ್ರೀ ವೆಂಕಟರಡ್ಡಿ ಅಬ್ಬೆತುಮಕೂರ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಪರಶುರಾಮ ಕುರುಕುಂದಾ, ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ನಾಗರಡ್ಡಿ ಇಬ್ರಾಹಿಮಪುರ, ಶ್ರೀ ಶಿವುಕುಮಾರ್ ಕೊಂಕಲ್ ಮತ್ತು ಬಿ ಎಲ್ ಎ 2 ಗೋವಿಂದಪ್ಪ ಕೊಂಚೆಟ್ಟಿ ಅವರು ಸೇರಿದಂತೆ ದೋರನಹಳ್ಳಿ ಮತ್ತು ನಾಯ್ಕಲ್ ಮಹಾಶಕ್ತಿ ಕೇಂದ್ರಗಳ ಬೂತ್ ಅಧ್ಯಕ್ಷರು, ಬಿ ಎಲ್ ಎ ಗಳು ಮತ್ತು ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು.

# ಶ್ರೀ ಸಿದ್ಧಾರೂಢ ಮಠದ 28 ನೇ ಜಾತ್ರಾ ಮಹೋತ್ಸವ, ಉಚಿತ ಸಾಮೂಹಿಕ ವಿವಾಹ ಚಿತ್ತಿ ಪತ್ರ ಬಿಡುಗಡೆ

• ಮಲ್ಲಮ್ಮ ನುಡಿ ವಾರ್ತೆ, ಯಾದಗಿರಿ



ಯಾದಗಿರಿ ತಾಲೂಕಿನ ರಾಮಸಮುದ್ರ ಗ್ರಾಮದ ಜಗದ್ಗುರು ಶ್ರೀ ಸಿದ್ಧಾರೂಢ ಮಠ ಸದ್ಗುರು ಹರಿಶ್ವರಾನಂದ ಸರಸ್ವತಿ ಸಂಸ್ಥಾನ ಮಠದಲ್ಲಿ 28 ನೇ ಜಾತ್ರಾ ಮಹೋತ್ಸವ ಹಾಗೂ ದಿನಾಂಕ.18.04.2026 ರಂದು

ಎರಡನೇ ಮಹಾರಥೋತ್ಸವ ಹಾಗೂ 19.04.2026ರಂದು ಉಚಿತ ಸಾಮೂಹಿಕ ವಿವಾಹ ಹಮ್ಮಿಕೊಳ್ಳಲಾಗಿದೆ. ಜಗದ್ಗುರು ಸಿದ್ಧಾರೂಢರ ಜಾತ್ರೆಯ ಪತ್ರಿಕೆ ಪೋಸ್ಟರ್ ಬಿಡುಗಡೆ ಮಾಡಲಾಯಿತು. ಮಠದ ಪಿತಾಧಿಪತಿಗಳಾದ ಶ್ರೀ ಸದ್ಗುರು ಹರಿಸ್ವಾರಾನಂದ ಸರಸ್ವತಿ ಇವರು ನೇತೃತ್ವದಲ್ಲಿ ಉಚಿತವಾಗಿ ಮದುವೆಯಾಗುವ ವಧು ವರರಿಗೆ ಉಚಿತವಾಗಿ ತಾಳಿ, ಮುತ್ತು ಹಾಗೂ ಕಾಲುಂಗರ ಮತ್ತು ಬಟ್ಟೆ ನೀಡಿ ಮದುವೆ ಮಾಡಿ ಕೊಡಲಾಗುವುದು, ಈ ಸಂದರ್ಭದಲ್ಲಿ ಮಠದ ಭಕ್ತರಾದ ಮಲ್ಲಿಕಾರ್ಜುನ.ಎಂ.ಜಲ್ಲಪನೋರ್, ಬಾಬುಗೌಡ ಪೊಲೀಸ್ ಪಾಟೀಲ್, ಚಂದಪ್ಪ ದಂಡನೂರ್, ಬಾಸ್ಕಾರ್ ಬೋಳೆನೂರ, ವಿಶ್ವನಾಥ ಬಾಗ್ಲಿ, ಬಸಲಿಂಗಪ್ಪ ಜೊಜನೋರ್, ಹಣಮಂತ ನಾಯಕ, ಹನುಮಂತ ಮ್ಯಾಳೂರ, ದೇವಿಂದ್ರ ಹೊಸಮನಿ, ಸೀರಿಮಂತ, ಸೀಮಿತ್ರ, ಹನಮಂತ, ಬಸವರಾಜ, ಹನುಮಂತ. ಸಾಬಣ್ಣ, ಮಲ್ಲಿಕಾರ್ಜುನ, ಅಭಿಮನ್ಯು ಮತ್ತು ಶಿಷ್ಯರು ಹಾಗೂ ಊರಿನ ಮುಖಂಡರು ಉಪಸ್ಥಿತರಿದ್ದರು.

# ಎಸ್‌ಬಿಐ ಬ್ಯಾಂಕ್‌ನ ಎಟಿಎಂ ಬಂದ್ ಗ್ರಾಹಕರಿಗೆ ನಿರಂತರ ಸಂಕಷ್ಟ




“ ಎಟಿಎಮ್ ಗಾಗಿ ಸಾಕಷ್ಟು ಸ್ಥಳವಕಾಶ ನೋಡಿದೀವಿ ಆದರೆ ಸರಿಯಾದ ಮಳಿಗೆ ಸಿಗುತ್ತಿಲ್ಲ ಮೇಲಧಿಕಾರಿಗಳ ಗಮನಕ್ಕೆ ತಂದಿದೀವಿ ಆದಷ್ಟು ಬೇಗ ಪಟ್ಟಣದ ಮುಖಂಡರು ಗಮನಕ್ಕೆ ತಂದು ಎಟಿಎಮ್ ಗೆ ಚಾಲನೆ ನೀಡಲು ಸಹಕಾರ ನೀಡಲಾಗುವದು.

**ಶಿವಾನಂದ ವ್ಯವಸ್ತಾಪಕರು ಎಸ್ ಬಿಐ ಹುಣಸಗಿ**

“ ಎಟಿಎಮ್ ಬಂದು ವರ್ಷ ಕಳೆದರು ಬ್ಯಾಂಕ ಒಳಗಡೆ ಇಟ್ಟಿದ್ದಾರೆ ನಾವು ಸಾಕಷ್ಟು ಬಾರಿ ಅಧಿಕಾರಿಗಳ ಗಮನಕ್ಕೆ ತಂದಿದ್ದೇವೆ ಆದರೆ ಇನ್ನು ಸ್ಥಳವಾಕಾಶಮಾಡಿಲ್ಲ ಗ್ರಾಹಕರಿಗೆ ಎಟಿಎಮ್ ಬಳಕೆಗಾಗಿ ಬೇರೆ ಕಡೆ ಹೋಗಲಿಕ್ಕೆ ತೊಂದರೆ ಆಗುತ್ತೆ ಆದಷ್ಟು ಬೇಗ ಈ ಸಮಸ್ಯೆಗೆ ಪರಿಹಾರ ಕಂದುಕೊಳ್ಳಬೇಕು ಇಲ್ಲಾಂದರೆ ಮುಂದಿನ ದಿನದಲ್ಲಿ ಮುಖ್ಯ ಕಛೇರಿಗೆ ಭೇಟಿ ನೀಡಿ ಮನವಿ ಸಲ್ಲಿಸಲಾಗುವದು.

**ಶಿವಲಿಂಗ ಸಾಹುಕಾರ ಪಟ್ಟಣ ಶೆಟ್ಟಿ**
**ಕರವೆ ತಾಲೂಕು ಗೌರವ ಅಧ್ಯಕ್ಷರು ಹುಣಸಗಿ**

• ಮಲ್ಲಮ್ಮ ನುಡಿ ವಾರ್ತೆ, ಹುಣಸಗಿ

ಪಟ್ಟಣದ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ (ಎಸ್‌ಬಿಐ) ಶಾಖೆ ಸುಮಾರು ನಲವತ್ತು ವರ್ಷಗಳ ಇತಿಹಾಸ ಹೊಂದಿರುವ ಪ್ರಮುಖ ಬ್ಯಾಂಕ್ ಆಗಿದ್ದು, ದಿನನಿತ್ಯ ತಾಲೂಕಿನ ಸುತ್ತಮುತ್ತಲಿನ ಹಳ್ಳಿಗಳಿಂದ ನೂರಾರು ಜನರು ಬ್ಯಾಂಕ್ ವ್ಯವಹಾರಗಳಿಗಾಗಿ ಆಗಮಿಸುತ್ತಾರೆ.

ಈ ಬ್ಯಾಂಕ್‌ನಲ್ಲಿ ರಾಜ್ಯ ಹಾಗೂ ಕೇಂದ್ರ ಸರ್ಕಾರದ ನೌಕರರು ಸೇರಿದಂತೆ ಅನೇಕ ಗ್ರಾಹಕರು ಖಾತೆ ಹೊಂದಿದ್ದು, ಪ್ರತಿ ತಿಂಗಳು ಸಂಬಳವನ್ನು ಇದೇ ಬ್ಯಾಂಕ್ ಮೂಲಕ ಪಡೆಯುತ್ತಾರೆ. ಆದರೆ, ಬ್ಯಾಂಕ್‌ನಲ್ಲಿರುವ ಎಟಿಎಂ ಯಂತ್ರ ಹಲವು ದಿನಗಳಿಂದ ಕಾರ್ಯನಿರ್ವಹಣೆ ಮಾಡದೆ ಇರುವುದರಿಂದ ಗ್ರಾಹಕರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ.

ಇದಕ್ಕೂ ಮೀರಿಸಿ, ಎಟಿಎಂ ಪಿನ್ ಜನರೇಟ್ ಮಾಡಿಕೊಳ್ಳಲು ಸಹ ಸ್ಥಳೀಯವಾಗಿ ಯಾವುದೇ ವ್ಯವಸ್ಥೆ ಇಲ್ಲದ ಕಾರಣ, ಗ್ರಾಹಕರು ಕೆಂಭಾವಿ, ಕಕ್ಕೇರಾ, ಸುರಪುರ ಮುಂತಾದ ಪಟ್ಟಣಗಳಿಗೆ ತೆರಳಬೇಕಾದ ಅನಿವಾರ್ಯತೆ ಎದುರಾಗಿದೆ. ಇದರಿಂದ ಗ್ರಾಮೀಣ ಭಾಗದ ಜನರಿಗೆ ಸಮಯ ಮತ್ತು ಹಣದ ವ್ಯಯ ಹೆಚ್ಚಾಗಿದೆ.

ಇನ್ನು ಬ್ಯಾಂಕ್‌ನಲ್ಲಿ ಹೊಸ ಎಟಿಎಂ ಯಂತ್ರ ಇದ್ದರೂ, ಇದುವರೆಗೆ ಅದಕ್ಕೆ ಚಾಲನೆ ನೀಡಲಾಗಿಲ್ಲ. ಸ್ಥಳದ ಅಭಾವ ಇದೆ ಎಂದು ಕಾರಣ ನೀಡುತ್ತಾ ಬ್ಯಾಂಕ್ ಅಧಿಕಾರಿಗಳು ವಿಳಂಬ ಮಾಡುತ್ತಿದ್ದಾರೆ ಎಂಬ ಆರೋಪ ಕೇಳಿಬರುತ್ತಿದೆ.

ಎಟಿಎಂ ಯಂತ್ರವನ್ನು ಬ್ಯಾಂಕ್ ಒಳಗಡೆ ಇಟ್ಟು–ಕೊಂಡು ಸಾರ್ವಜನಿಕರಿಗೆ ಬಳಸಲು ಅವಕಾಶ ನೀಡಲಾಗುತ್ತಿಲ್ಲ. ಈ ಕುರಿತು ಬ್ಯಾಂಕ್ ಸಿಬ್ಬಂದಿಯನ್ನು ಪ್ರಶ್ನಿಸಿದಾಗ "ಇಂದು, ನಾಳೆ ಸರಿಯಾಗುತ್ತದೆ" ಎಂಬ ಉತ್ತರ ನೀಡಲಾಗುತ್ತಿದೆಯೇ ಹೊರತು ಯಾವುದೇ ಸ್ಪಷ್ಟ ಕ್ರಮ ಕೈಗೊಳ್ಳಲಾಗುತ್ತಿಲ್ಲ.

ಈ ಸಮಸ್ಯೆಯನ್ನು ಹಲವು ಬಾರಿ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಪ್ರಯೋಜನವಾಗದೇ ಇರುವುದರಿಂದ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ತಕ್ಷಣವೇ ಎಟಿಎಂ ಸೇವೆ ಪ್ರಾರಂಭಿಸಿ, ಪಿನ್ ಜನರೇಶನ್ ವ್ಯವಸ್ಥೆಯನ್ನು ಸ್ಥಳೀಯವಾಗಿ ಕಲ್ಪಿಸಬೇಕೆಂದು ಗ್ರಾಹಕರು ಒತ್ತಾಯಿಸಿದ್ದಾರೆ.

# ಅಂಬೇಡ್ಕರ್ ವಾದಿಗಳು ನರಿಗಳಲ್ಲ ಹುಲಿಗಳು: ವೆಂಕಟಸ್ವಾಮಿ

• ಮಲ್ಲಮ್ಮ ನುಡಿ ವಾರ್ತೆ ಹೊಳೆನರಸೀಪುರ



ಅಂಬೇಡ್ಕರ್ ವಾದಿಗಳು ನರಿಗಳಲ್ಲ, ಹುಲಿಗಳಾಗಿದ್ದಾರೆ ಎಂದು ಆರ್‌ಪಿಐ ರಾಷ್ಟ್ರೀಯ ಕಾರ್ಯಾಧ್ಯಕ್ಷ ಹಾಗೂ ಸಮತಾ ಸೈನಿಕ ದಳದ ರಾಷ್ಟ್ರಾಧ್ಯಕ್ಷ ಡಾ. ಎಂ. ವೆಂಕಟಸ್ವಾಮಿ ಸ್ಪಷ್ಟಪಡಿಸಿದರು. ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಮಂಗಳವಾರ ರಿಪಬ್ಲಿ ಪಾರ್ಟಿ ಆಫ್ ಇಂಡಿಯಾ ಮತ್ತು ಸಮತಾ ಸೈನಿಕ ದಳದ ವತಿಯಿಂದ ಆಯೋಜಿಸಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಅಂಗವಾಗಿ ನಡೆದ ಕಾರ್ಯಕರ್ತರ ಸೇರ್ಪಡೆ ಹಾಗೂ ಕಾರ್ಯಾಲಯ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿ ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ ಹಾಗೂ ಸಮತಾ ಸೈನಿಕ ದಳವು ಯಾವುದೇ ಒಂದು ಜಾತಿ ಅಥವಾ ಧರ್ಮಕ್ಕೆ ಸೀಮಿತವಾಗಿಲ್ಲ; ಇವು ನಿಜವಾದ ಜಾತ್ಯತೀತ ಸಂಘಟನೆಗಳಾಗಿವೆ. ದೇಶದಲ್ಲಿ ಹಲವಾರು ಸಂಘಟನೆಗಳು ಜಾತ್ಯತೀತವೆಂದು ಹೇಳಿಕೊಳ್ಳುತ್ತವೆ, ಆದರೆ ನಿಜವಾದ ಜಾತ್ಯತೀತತೆ ನಮ್ಮ ಸಂಘಟನೆಗಳಲ್ಲಿ ಮಾತ್ರ ಕಾಣಸಿಗುತ್ತದೆ ಎಂದು ಹೇಳಿದರು.

ಹೊಳೆನರಸೀಪುರದಲ್ಲಿ ಕಾರ್ಯಾಲಯ ಸ್ಥಾಪನೆ ಸುಲಭದ ಕೆಲಸವಲ್ಲ. ಇದಕ್ಕಾಗಿ ಆರ್‌ಪಿಐ ರಾಜ್ಯಾಧ್ಯಕ್ಷ ಸತೀಶ್ ಅವರು ಅಪಾರ ಶ್ರಮ ಪಟ್ಟಿದ್ದಾರೆ. ನಾವು ನರಿಗಳಲ್ಲ, ಹುಲಿಗಳು ಎಂಬುದನ್ನು ಈ ಕಾರ್ಯಕರ್ತರ ಸಂಘಟನೆ ಸಾಬೀತುಪಡಿಸಿದೆ ಎಂದು ಅವರು ಹೇಳಿದರು.

ಅಧಿಕಾರ ಪಡೆಯಲು ಕೆಲವರು ಜಾತ್ಯತೀತತೆಯ ಹೆಸರಿನಲ್ಲಿ ರಾಜಕೀಯ ಮಾಡುತ್ತಾರೆ. ಆದರೆ ದಲಿತರ ಮೇಲೆ ನಡೆಯುತ್ತಿರುವ ಅನ್ಯಾಯವನ್ನು ತಡೆಗಟ್ಟಲು ಮುಂದೆ ಬರದೇ ಇರುವವರನ್ನು ಜಾತ್ಯತೀತರು ಎಂದು ಕರೆಯಲು ಸಾಧ್ಯವಿಲ್ಲ ಎಂದು ಪ್ರಶ್ನಿಸಿದರು.

ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರು ಸ್ಥಾಪಿಸಿದ ಈ ಸಂಘಟನೆಗಳು ಎಲ್ಲಾ ಜಾತಿ–ಜನಾಂಗಗಳನ್ನು ಮೀರಿ ಕಟ್ಟಲ್ಪಟ್ಟಿವೆ. ಯಾರಾದರೂ ಈ ಸಂಘಟನೆಗಳಲ್ಲಿ ಸೇರಿ ಪಕ್ಷವನ್ನು ಬಲಪಡಿಸಬಹುದು. ಯುವಕರು ಕಾನೂನು ಚೌಕಟ್ಟಿನಲ್ಲಿ ಸಂಘಟನೆಯನ್ನು ಕಟ್ಟಲು ಮುಂದಾಗಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮ ನಡೆಯದಂತೆ ಕೆಲವು ಪಟ್ಟಭದ್ರ ಶಕ್ತಿಗಳು ಪ್ರಯತ್ನಿಸಿದರೂ, ಅಂಬೇಡ್ಕರ್ ವಾದಿಗಳು, ಚಿಂತಕರು ಹಾಗೂ ಬುದ್ಧಿಜೀವಿಗಳು ಧೈರ್ಯದಿಂದ ಭಾಗವಹಿಸಿರುವುದು ಶ್ಲಾಘನೀಯ. ಇಂತಹವರು ನಿಜವಾದ ಹುಲಿಗಳು ಎಂದು ಅವರು ಹೇಳಿದರು.

ಭಯಪಟ್ಟು ಕಾರ್ಯಕ್ರಮಕ್ಕೆ ಬಾರದವರು ಕುರಿಗಳಂತಿದ್ದಾರೆ. ನಾವು ಕುರಿಗಳಲ್ಲ,

ಹುಲಿಗಳೆಂದು ಅರಿತು ಕಾರ್ಯಕ್ರಮಕ್ಕೆ ಬಂದಿರುವವರೇ ನಿಜವಾದ ಕಾರ್ಯಕರ್ತರು. ಇಂತಹ ಹುಲಿಗಳು ಒಂದೇ ದಿನ ಅನ್ಯಾಯದ ವಿರುದ್ಧ ಹೋರಾಟ ನಡೆಸುತ್ತವೆ ಎಂದು ಎಚ್ಚರಿಸಿದರು.

ಈ ಕಾರ್ಯಕ್ರಮದಲ್ಲಿ ಸಾವಿರಾರು ಭೀಮ ಸೈನಿಕರನ್ನು ರೂಪಿಸುವ ಶಕ್ತಿ ಅಡಗಿದೆ ಎಂದು ಹೇಳಿ, ಜಾತಿವಾದಿ ಶಕ್ತಿಗಳ ಅಡ್ಡಿಪಡಿಸುವ ಪ್ರಯತ್ನಗಳಿಗೆ ಇಂದಿನ ಭೀಮಶಕ್ತಿ ಉತ್ತರ ನೀಡಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಡಾ. ಎಂ. ವೆಂಕಟಸ್ವಾಮಿ, ಆರ್‌ಪಿಐ ರಾಜ್ಯಾಧ್ಯಕ್ಷ ಸತೀಶ್ ಸೇರಿದಂತೆ ಕಾರ್ಯಕರ್ತರು ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಮೆರವಣಿಗೆ ಮೂಲಕ ಅಂಬೇಡ್ಕರ್ ಭವನಕ್ಕೆ ಆಗಮಿಸಿದರು. ಸುಮಾರು 150ಕ್ಕೂ ಹೆಚ್ಚು ಮಂದಿ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ಕಾರ್ಯಕ್ರಮದಲ್ಲಿ ಯುವ ಘಟಕದ ರಾಜ್ಯಾಧ್ಯಕ್ಷ ಪ್ರಶಾಂತ್, ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕ ಎಂ. ಸೋಮಶೇಖರ್, ಭೀಮ ಆರ್ಮಿಯ ಜಿಲ್ಲಾಧ್ಯಕ್ಷ ಪ್ರಸನ್ನ, ರಾಜ್ಯ ಕಾರ್ಯದರ್ಶಿ ಕವಿತಾ ಛಲವಾದಿ, ಸುರೇಖಾ, ನಿವೃತ್ತ ಎಲ್‌ಐಸಿ ಅಧಿಕಾರಿ ರಾಜೀವ್ ಸೇರಿದಂತೆ ಹಲವರು ಹಾಜರಿದ್ದರು.

**ಅಂಬೇಡ್ಕರ್ ಕನಸನ್ನು ನನಸು ಮಾಡುವುದು ನಮ್ಮ ಕರ್ತವ್ಯ: ಸತೀಶ್**

“ ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ ಹಾಗೂ ಸಮತಾ ಸೈನಿಕ ದಳ ಈ ದೇಶಕ್ಕೆ ಹೊಸದೇನಲ್ಲ ಎಂದು ಹೇಳಿದರು. ಬಾಬಾಸಾಹೇಬ್ ಅಂಬೇಡ್ಕರ್ ಅವರು ಅಂದಿನ ಕಾಲದಲ್ಲಿಯೇ ಈ ಸಂಘಟನೆಗಳನ್ನು ಸ್ಥಾಪಿಸಿ, ದಲಿತರು ರಾಜಕೀಯವಾಗಿ ಮುಂದೆ ಬರಬೇಕೆಂಬ ಆಶಯದಿಂದ ಅಸಮಾನತೆಯ ವಿರುದ್ಧ ಹೋರಾಟ ನಡೆಸಿದ ಮಹಾನ್ ನಾಯಕರು. ಸಮತಾವಾದ ಹಾಗೂ ಸಮಾನ ಸಮಾಜ ನಿರ್ಮಾಣವೇ ಅವರ ಉದ್ದೇಶವಾಗಿದ್ದು, ಅದಕ್ಕಾಗಿ ರಿಪಬ್ಲಿಕನ್ ಪಕ್ಷ ಮತ್ತು ಸಮತಾ ಸೈನಿಕ ದಳವನ್ನು ಸ್ಥಾಪಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಹೇಳಿದರು. ಎಲ್ಲಾ ಜಾತಿ, ಜನಾಂಗ ಹಾಗೂ ಧರ್ಮದವರನ್ನು ಒಗ್ಗೂಡಿಸಿಕೊಂಡು ರಾಜಕೀಯವಾಗಿ ಮುನ್ನಡೆಸುವ ತಳಹದಿಯನ್ನು ಅಂಬೇಡ್ಕರ್ ಹಾಕಿಕೊಟ್ಟಿದ್ದು, ಅದನ್ನು ಮುಂದುವರಿಸಿಕೊಂಡು ಹೋಗುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದರು. ರಿಪಬ್ಲಿಕನ್ ಪಕ್ಷದ ಮೂಲಕ ಎಂಎ ಹಾಗೂ ಎಂಪಿಗಳಾಗಿ ಅಧಿಕಾರದ ಚುಕ್ಕಾಣಿ ಹಿಡಿದ ಉದಾಹರಣೆಗಳಿವೆ. ಇತ್ತೀಚೆಗೆ ಪಕ್ಷ ಮತ್ತಷ್ಟು ಬಲಿಷ್ಠವಾಗುತ್ತಿದ್ದು, ಯುವಕರು ಸಂಘಟನೆಯನ್ನು ಕಟ್ಟಲು ಮುಂದಾಗಬೇಕು ಎಂದು ಕರೆ ನೀಡಿದರು. ಶೋಷಿತ ಸಮುದಾಯದವರು ರಾಜಕೀಯ ಅಧಿಕಾರ ಹಿಡಿಯಬೇಕು ಎಂಬುದು ಅಂಬೇಡ್ಕರ್ ಅವರ ಕನಸಾಗಿತ್ತು. 1936ರಲ್ಲಿಯೇ ಅವರು ಈ ದಾರಿಯನ್ನು ತೋರಿಸಿ, ರಾಜಕೀಯವಾಗಿ ಮುಂದುವರೆಯಲು ಸಹಕಾರ ನೀಡಿದ್ದರು. ಅವರ ಕನಸನ್ನು ನನಸು ಮಾಡಲು ಎಲ್ಲರೂ ಕೈಜೋಡಿಸಬೇಕು ಎಂದು ಸತೀಶ್ ತಿಳಿಸಿದರು.

“ ಸಂವಿಧಾನವನ್ನು ಗೌರವಿಸುವ ಹಾಗೂ ದಲಿತ ಸಂಘಟನೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ ಮತ್ತು ಸಮತಾ ಸೈನಿಕ ದಳಕ್ಕೆ ಸೇರ್ಪಡೆಯಾಗಿ ದುಡಿಯುವವರೇ ಪಕ್ಷವನ್ನು ಬಲಪಡಿಸಲು ಸಾಧ್ಯ ಎಂದು ಮುಖಂಡರು ಹೇಳಿದರು.

**ಡಾ. ಎಂ ವೆಂಕಟಸ್ವಾಮಿ**

# ಅತಿಸಾರ ಬೇಧಿಯನ್ನು ನಿರ್ಲಕ್ಷಿಸಬೇಡಿ: ಗೀತಾ ಹಿರೇಮಠ




• **ಮಲ್ಲಮ್ಮ ನುಡಿ ವಾರ್ತೆ, ಸಿಂಧನೂರು**

ಮಕ್ಕಳಲ್ಲಿ ಅತಿಸಾರ ನಿರ್ವಹಣೆಗಾಗಿ ಸೇವಿಸುವ ಆಹಾರ ಪದಾರ್ಥಗಳನ್ನು ಹೆಚ್ಚು ಕಾಳಜಿ ಹಾಗೂ ಯಾವುದೇ ಕಾರಣಲ್ಲೂ ದೇಹದಲ್ಲಿನ ನೀರಿನಂಶದ ಕೊರತೆ ಉಂಟಾಗದಂತೆ ನಿಗಾವಹಿಸಲು ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ ಮೇರಿ ತಿಳಿಸಿದರು.

ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ರಾಯಚೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರ್ ತಾಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯ ಸಿಂಧನೂರಿನ ನಗರದ ವಾರ್ಡ್ ನಂಬರ್ 23ರ ಅಂಗನವಾಡಿ ಕೇಂದ್ರದಲ್ಲಿ ಅತಿಸಾರ ಬೇಧಿ ಕುರಿತು ಜಾಗೃತಿ ನೀಡಿ ಮಾತನಾಡುತ್ತಾ, ಸಾಮಾನ್ಯವಾಗಿ 5 ವರ್ಷದೊಳಗಿನ ಮಕ್ಕಳನ್ನು ಅತಸಾರ ಬೇಧಿಯಿಂದ ಸಂರಕ್ಷಿಸುವ ದಿಶೆಯಲ್ಲಿ ಆಹಾರ ಸಿದ್ದಪಡಿಸುವ ಹಾಗೂ ಉಣಿಸುವ ಪೂರ್ವದಲ್ಲಿ ತಾಯಿ ಕೈಗಳನ್ನು ಸ್ವಚ್ಚವಾಗಿ ತೊಳೆದುಕೊಳ್ಳಬೇಕು ಎಂದು ವಿನಂತಿಸಿದರು.

ನಂತರ ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ಹಿರೇಮಠ, ದಿನನಿತ್ಯ ಆಹಾರ ಸಿದ್ದಪಡಿಸುವಾಗ ಶುದ್ಧವಾದ ನೀರು ಬಳಕೆ, ಸಿದ್ದಪಡಿಸಿದ ಆಹಾರ ಪದಾರ್ಥ ಮುಚ್ಚಿಡಲು ನಿಗಾವಹಿಸಬೇಕು. ಮುಖ್ಯವಾಗಿ ಬೇಧಿಯ ಪ್ರಕರಣಗಳಲ್ಲಿ ಮಕ್ಕಳ ಕಣ್ಣುಗಳು ಒಳಕ್ಕೆ ಹೋಗಿರುವುದು, ಕುಡಿಯಲು ಸಾಧ್ಯವಾಗದೇ ಇರುವುದು ಅಥವಾ ಕಡಿಮೆ ಕುಡಿಯುವುದು, ಚರ್ಮವನ್ನು ಚುವುಟಿದರೆ ನಿಧಾನವಾಗಿ ಮೊದಲಿನ ಸ್ಥಿತಿಗೆ ಬರುವುದು ಕಂಡು ಬಂದರೆ ನಿರ್ಲಕ್ಷ್ಯ ಮಾಡಬಾರದು, ಹೆಚ್ಚು ಓಆರ್ಎಸ್ ದ್ರಾವಣ ಕುಡಿಸಬೇಕು. ಇದರೊಂದಿಗೆ ಮಗುವಿನ ವಯಸ್ಸಿನ ಅನುಸಾರ ಮನೆಯಲ್ಲಿ ತಯಾರಿಸಿದ ಗಂಜಿ, ಬೇಳೆ ತಿಳಿ, ಕೊಡಬೇಕು ಎಂದು ತಿಳಿಸಿದರು.

ಸಂದರ್ಭದಲ್ಲಿ ತ್ರೇಜಾ ಪಿಹೆಚ್‌ಸಿಓ, ಕಸ್ತೂರಿ ಆಶಾ ಕಾರ್ಯಕರ್ತೆ, ಪದ್ಮಾ, ಅಂಗನವಾಡಿ ಕಾರ್ಯಕರ್ತೆ, ರಾಜ್ಮಾ ಅಂಗನವಾಡಿ ಸಹಾಯಕಿ ಗರ್ಭಿಣಿ ತಾಯಂದಿರು ಉಪಸ್ಥಿತರಿದ್ದರು.

## ಪೂರ್ವಭಾವಿ ಸಿದ್ಧತಾ ಸಭೆ

# ಸಂಭ್ರಮದಿಂದ ಬಸವ ಜಯಂತಿ ಆಚರಣೆ; ಶಿವಾನಂದ



• **ಮಲ್ಲಮ್ಮ ನುಡಿ ವಾರ್ತೆ, ರಾಯಚೂರು**

ಜಿಲ್ಲಾಡಳಿತದಿಂದ ಕರ್ನಾಟಕದ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಜಯಂತಿಯನ್ನು ಏಪ್ರಿಲ್ 20ರಂದು ಸಂಭ್ರಮದಿಂದ ಆಚರಿಸಲಾಗುವುದು ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಶಿವಾನಂದ ಅವರು ತಿಳಿಸಿದರು. ಏಪ್ರಿಲ್ 09ರ ಗುರುವಾರದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಬಸವಣ್ಣ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಬಸವೇಶ್ವರ ವೃತ್ತದಲ್ಲಿ ಬಸವಣ್ಣನವರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು. ನಂತರ ಬೆಳಿಗ್ಗೆ 11ಕ್ಕೆ ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದರು.

ಸರ್ಕಾರದ ಮಾರ್ಗಸೂಚಿಯನ್ವಯ ಜಯಂತಿ ಆಚರಣೆ ನಡೆಯಬೇಕು. ಶಿಷ್ಟಾಚಾರ ಅನುಸಾರ ಆಮಂತ್ರಣ ಪತ್ರಿಕೆ ಮುದ್ರಿಸಿ ವಿತರಿಸಬೇಕು. ಜಯಂತಿಗೆ ಆಗಮಿಸುವ ಜನತೆಗೆ ಕುಡಿಯುವ ನೀರು, ಉಪಹಾರ, ಆಸನದ ವ್ಯವಸ್ಥೆ ಮಾಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಯಂತಿಯನ್ನು ಜಿಲ್ಲೆಯ ಎಲ್ಲ ಶಾಲಾ-ಕಾಲೇಜುಗಳು ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಆಚರಣೆ ಮಾಡುವಂತೆ ಆದೇಶ ಹೊರಡಿಸಲು ಕ್ರಮ ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಕಾರ್ಯಕ್ರಮದಲ್ಲಿ ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಅಪರ ಜಿಲ್ಲಾಧಿಕಾರಿಗಳು ಸಭೆಯ ಮೂಲಕ ಸಾರ್ವಜನಿಕರಲ್ಲಿ ಮನವಿ ಮಾಡಿದರು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಉತ್ತರಾದೇವಿ, ಸಮಾಜದ ಮುಖಂಡರಾದ ಶಿವಾನಂದ ಚೌಕಿ, ಚಂದ್ರಶೇಖರ ಪಾಟೀಲ ಮಿರ್ಜಾಪುರ, ಪರಮೇಶ್ವರ ಸಾಲಿಮಠ, ನಾಗೇಶ್ವರಪ್ಪ, ಬಸವರಾಜ, ಚೆನ್ನಬಸವಣ್ಣ, ಜೆ.ಬಸವರಾಜ, ಆನಂದ ಪಾಟೀಲ, ಕಲ್ಲಯ್ಯ ಸ್ವಾಮಿ, ವೀರಪ್ಪಣ್ಣ ಗೌಡ ಬಂಡಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಸಭೆಯಲ್ಲಿ ಇದ್ದರು.

# ಏ 10 ಕ್ಕೆ ವಿದ್ಯುತ್ ವ್ಯತ್ಯಯ

• **ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ**

ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದ ವ್ಯಾಪ್ತಿಯಲ್ಲಿ ಬಿದ್ದಾಪುರ ಕಾಲೋನಿ ಫೀಡರ್ ವ್ಯಾಪ್ತಿಯ ಪ್ರದೇಶಗಳಲ್ಲಿ ಏಪ್ರಿಲ್ 10 ರಂದು ಶುಕ್ರವಾರ ಬೆಳಿಗ್ಗೆ 9 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ನಿರ್ವಹಣಾ ಕಾರ್ಯಕೈಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಿದ್ದಾಪೂರ ಕಾಲೋನಿ ಫೀಡರ್: ಎನ್.ಜಿ.ಓ. ಕಾಲೋನಿ, ಮಾಕಾ ಲೇಔಟ್, ದತ್ತ ನಗರ, ಬಿದ್ದಾಪೂರ ರೈಲ್ವೆ ಟ್ರ್ಯಾಕ್ ಏರಿಯಾ, ಬಿದ್ದಾಪೂರ ರಾಘವೇಂದ್ರ ಕಾಲೋನಿ ಏರೀಯಾ, ಭಾಗ್ಯವಂತಿ ನಗರ ಚಿತಾರಿ ಅಡ್ಡಾ ಏರಿಯಾ, ವರ್ದಾ ನಗರ, ಕೆ.ಇ.ಬಿ. ಕಲ್ಯಾಣ ಮಂಟಪ ಏರಿಯಾ, ಸನ್.ಇಂಟರ್ ನ್ಯಾಶನಲ್ ಹೋಟೆಲ್ ಎದುರುಗಡೆ ಪ್ರದೇಶ, ರೈನ್‌ಬೋ ಅಪಾರ್ಟ್‌ಮೆಂಟ್, ರೆಹಮತ್ ನಗರ, ಎಸ್. ಆರ್. ಅಪಾರ್ಟ್‌ಮೆಂಟ್, ಧರಿಯಾಪೂರ ಏರಿಯಾ, ಹೂಡಾ ಮಸೀದಿ, ಅಂಬೀಕಾ ನಗರ, ಶಹಾಬಾಜ್ ಕಾಲೋನಿ, ರುದ್ರವಾಡಿ ಆಸ್ಪತ್ರೆ, ಪಿ.ಡಬ್ಲ್ಯೂ.ಡಿ. ಕ್ವಾರ್ಟರ್ಸ್, ವರ್ಧಾ ನಗರ, ರಾಘವೆಂದ್ರ ದೇವಸ್ಥಾನ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

# ಬೇಸಿಗೆ ಕಾಲ: ಮುನ್ನೆಚ್ಚರಿಕೆ ವಹಿಸಲು ಸಲಹೆ

• **ಮಲ್ಲಮ್ಮ ನುಡಿ ವಾರ್ತೆ, ರಾಯಚೂರು**

ಪ್ರಸ್ತುತ ಜಿಲ್ಲೆಯಲ್ಲಿ ಬೇಸಿಗೆ ಕಾಲ ಆರಂಭವಾಗಿದೆ. ಈ ಅವಧಿಯಲ್ಲಿ ಅತಿಯಾದ ಉಷ್ಣಾಂಶದಿಂದ ನಾನಾ ರೀತಿಯ ಅನಾರೋಗ್ಯ ಪರಿಸ್ಥಿತಿಗಳು ಸಂಭವಿಸುವ ಸಾಧ್ಯತೆಗಳಿವೆ. ಹೀಗಾಗಿ ಜಿಲ್ಲಾ ಆರೋಗ್ಯ ಇಲಾಖೆಯಿಂದ ಸಲಹೆಗಳನ್ನು ನೀಡಲಾಗುತ್ತಿದ್ದು, ಅವುಗಳನ್ನು ಸರಿಯಾಗಿ ಪಾಲಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಕೋರಿದ್ದಾರೆ. ಪ್ರಸ್ತುತ ವರ್ಷದ ಬೇಸಿಗೆಯು ಪ್ರಖರವಾಗಿರುವ ಸಾಧ್ಯತೆಗಳ ಬಗ್ಗೆ ವರದಿ ಹಿನ್ನಲೆಯಲ್ಲಿ ಮುಖ್ಯವಾಗಿ ಚಿಕ್ಕ ಮಕ್ಕಳು, ಗರ್ಭಿಣಿ, ಬಾಣಂತಿಯರು, ವಯೊವೃದ್ದರ ಕಾಳಜಿಗಾಗಿ ಕುಟುಂಬದ ಸದಸ್ಯರು ಹೆಚ್ಚಿನ ಆಧ್ಯತೆ ನೀಡಬೇಕು. ಬಿಸಿಲಿನ ಪ್ರಖರತೆ ಹೆಚ್ಚಿರುವ ಮಧ್ಯಾಹ್ನ 1 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಹೆಚ್ಚು ಜಾಗರೂಕರಾಗಿರಬೇಕು.

ಹೆರಿಗೆ ನಂತರ ಬಾಣಂತಿಯರು ನವಜಾತ ಶಿಶುವಿಗೆ ಮೇಲಿಂದ ಮೇಲೆ ಎದೆ ಹಾಲುಣಿಸುವ ಮೂಲಕ ಶಿಶುವಿನಲ್ಲಾಗುವ ನಿರ್ಜಲೀಕರಣ ತಡೆಯಲು ಸಹಕಾರಿಯಾಗುವುದು. ರೋಗ ನಿರೋಧಕ ಶಕ್ತಿ ವೃದ್ದಿಸಲು 12 ಮಾರಕ ರೋಗಗಳ ವಿರುದ್ಧ ಲಸಿಕೆ ಹಾಕಿಸಲು ಮರೆಯಬಾರದು.

ಪ್ರಖರ ಬಿಸಿಲಿನ ಅವಧಿಯಲ್ಲಿ ಆದಷ್ಟು ಮನೆಯ ಹೊರಗೆ ಹೋಗದಂತೆ ಮುತವರ್ಜಿ ವಹಿಸಿ. ಮನೆಯ ಒಳಗೆ ಅಥವಾ ನೆರಳು ಇರುವ ಸ್ಥಳದಲ್ಲಿ ವಿಶ್ರಾಂತಿ ಪಡೆಯಬೇಕಿದೆ. ಆದಷ್ಟು ಮಸಾಲೆಯುಕ್ತ ಪದಾರ್ಥಗಳ ಸೇವನೆ ಕಡಿಮೆ ಮಾಡಬೇಕು. ಅಧಿಕ ಬಿಸಿಲಿರುವ ಸಮಯದಲ್ಲಿ ಮನೆಯ ಹೊರಗೆ ಹೊಗದಿರಲು ಯೋಚಿಸಿ, ದೈನಂದಿನವಾಗಿ ತೆಗೆದುಕೊಳ್ಳುವ ಮಾತ್ರೆಗಳನ್ನು ಜೊತೆಯಲ್ಲಿರಿಸಿಕೊಳ್ಳಿ, ದ್ರವ ಆಹಾರ ಹೆಚ್ಚು ಸೇವಿಸಬೇಕು.

ಆಟವಾಡುವ ಮಕ್ಕಳು ಬಿಸಿಲಿನಲ್ಲಿ ನಿಲ್ಲಿಸಿರುವ ವಾಹನ ಮುಟ್ಟದಂತೆ ಜಾಗೃತಿ ವಹಿಸಬೇಕು. ಮಕ್ಕಳು ಅಸುರಕ್ಷಿತ ಆಹಾರ, ಪಾನೀಯ ಸೇವಿಸದಂತೆ ನಿಗಾವಹಿಸಿ. ಓಆರ್‌ಎಸ್ ಬಳಕೆಗೆ ಆಧ್ಯತೆ ನೀಡಿ: ನಿರ್ಜಲಿಕರಣದಿಂದ ದೇಹದ ನೀರಿನ ಅಂಶದ ಜೊತೆಗೆ ಲವಣಾಂಶ ಕಡಿಮೆಯಾಗದಂತೆ ಓಆರ್‌ಎಸ್ ಜೀವಜಲ ಪ್ಯಾಕೇಟ್ ಸದಾ ಮನೆಯಲ್ಲಿರಲಿ. ಒಂದು ಲೀಟರ್ ನೀರಿಗೆ ಪ್ಯಾಕೇಟ್ ಸಂಪೂರ್ಣ ಪುಡಿ ಹಾಕಿ ದ್ರಾವಣ ಸಿದ್ದಪಡಿಸಿ 24 ಗಂಟೆಯೊಳಗೆ ಬಳಸಬೇಕು.

ಇದಲ್ಲದೆ ಲಿಂಬೂ ಪಾನಕ, ಎಳೆನೀರು, ಮಜ್ಜಿಗೆ ಕುಡಿಯಬಹುದು. ಆಹಾರದಲ್ಲಿ ಬೇಳೆ ತಿಳಿ ಬಳಸಿ, ಅಲ್ಲದೆ ಮುಂಜಾಗೃತವಾಗಿ ಜಿಲ್ಲಾ ಎನ್‌ಫೋರ್ಸಮೆಂಟ್ ಅಧಿಕಾರಿ ಡಾ.ಶಿವಕುಮಾರ ನಾರಾ ನೇತೃತ್ವದಲ್ಲಿ ಜಿಲ್ಲೆಯಾದ್ಯಂತ ಜಿಲ್ಲಾ ವಿಪತ್ತು ವಿಪತ್ತು ನಿರ್ವಹಣಾ ಪ್ರಾಧಿಕಾರದ ಮಾರ್ಗಸೂಚಿಯನ್ವಯ ಆರೋಗ್ಯ ಇಲಾಖೆ ಸಿಬ್ಬಂದಿ ಎಲ್ಲ ಆಸ್ಪತ್ರೆಯ ಬರುವ ಜನತೆಗೆ ಗ್ರಾಮಗಳಲ್ಲಿ ಹತ್ತಿ ಉಡುಪು ಬಳಕೆ, ಛತ್ರಿ ಜೊತೆಯಲ್ಲಿ ನೀರು ಇರುವಂತೆ ಸಾರ್ವಜನಿಕರಿಗೆ ವ್ಯಾಪಕ ಪ್ರಚಾರ ಕೈಗೊಳ್ಳಲಾಗುತ್ತಿದೆ. ವಾಂತಿ ಬೇಧಿ ತಡೆ: ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ವಾಂತಿ-ಬೇಧಿ ಪ್ರಕರಣಗಳು ಉಂಟಾಗುವ ಹಿನ್ನಲೆಯಲ್ಲಿ ಶುದ್ದೀಕರಿಸಿದ ನೀರು ಅಥವಾ ನೀರು ಶುದ್ದೀಕರಣ ಘಟಕದ ನೀರನ್ನು ಕುಡಿಯಲು ಬಳಸಬೇಕು. ಅಲ್ಲದೆ ಊಟದ ಮೊದಲು ಶೌಚದ ನಂತರ ಕೈಗಳನ್ನು ಸಾಬೂನು ಮತ್ತು ನೀರಿನಿಂದ 45 ಸೆಕೆಂಡ್‌ಗಳ ಕಾಲ ತೊಳೆದ ನಂತರ ಆಹಾರ ಸೇವಿಸಬೇಕು. ನೀರಿನ ಸಂಗ್ರಹಣಗಳ ಮೇಲೆ ತಪ್ಪದೇ ಮುಚ್ಚಳ ಮುಚ್ಚಬೇಕು. ಸುರಕ್ಷಿತ ಆಹಾರ ಮಾತ್ರ ಸೇವಿಸಿ, ಆದಷ್ಟು ಮನೆಯಲ್ಲಿ ತಯಾರಿಸಿದ ಆಹಾರಕ್ಕೆ ಆದ್ಯತೆ ನೀಡಬೇಕು. ರಸ್ತೆ ಬದಿ ತೆರೆದಿಟ್ಟ ಆಹಾರ ಪದಾರ್ಥ ಸೇವಿಸಬಾರದು, ಮಲ, ಮೂತ್ರ ವಿಸರ್ಜನೆಗಾಗಿ ಶೌಚಾಲಯ ಬಳಸಬೇಕು. ಇದಕ್ಕಾಗಿ ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ.ಗಣೇಶ್ ಕೆ. ನೇತೃತ್ವದಲ್ಲಿ ಅಗತ್ಯ ಜಾಗೃತಿ ನೀಡಲಾಗುತ್ತಿದೆ. ಅಲ್ಲದೆ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ಮುಂಜಾಗ್ರತಾ ಔಷಧಿಗಳು ಲಭ್ಯವಿವೆ. ಯಾವುದೇ ತುರ್ತು ಸಂದರ್ಭದಲ್ಲಿ 108ಕ್ಕೆ ಕರೆ ಮಾಡಿ ಆಂಬ್ಯುಲೆನ್ಸ್ ಸದುಪಯೋಗ ಪಡೆಯಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಡಿವ ನೀರು ಪೂರೈಕೆ, ನೈರ್ಮಲ್ಯಕ್ಕೆ ವಿಶೇಷ ಕಾಳಜಿ ವಹಿಸಿ: ಕೃಷ್ಣಮೂರ್ತಿ



• **ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ**

ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಕುಡಿವ ನೀರು ಪೂರೈಕೆ ಮತ್ತು ನೈರ್ಮಲ್ಯಕ್ಕೆ ಎಲ್ಲ ಪಿಡಿಓಗಳು ವಿಶೇಷ ಕಾಳಜಿ ವಹಿಸಬೇಕು ಎಂದು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳಾದ ಟಿ.ಕೃಷ್ಣಮೂರ್ತಿ ಅವರು ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್‌ನ ಜೆ.ಎಚ್ ಪಟೇಲ್ ಸಭಾಂಗಣದಲ್ಲಿ ಏಪ್ರಿಲ್ 8ರಂದು ಕೊಪ್ಪಳ ಜಿಲ್ಲೆಯ ವಿವಿಧ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳೊಂದಿಗೆ ಕುಡಿಯುವ ನೀರು ಮತ್ತು ಇತರೆ ವಿಷಯಗಳ ಕುರಿತು ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಎಲ್ಲ ಗ್ರಾಮಗಳಲ್ಲಿ ಕುಡಿಯುವ ನೀರಿನ ಮೂಲಗಳಲ್ಲಿ ಬೇಸಿಗೆ ಮುಗಿಯುವವರೆಗೂ ಬಳಕೆಗೆ ಸಾಧ್ಯವಾಗುವಷ್ಟು ನೀರಿನ ಸಂಗ್ರಹಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು. ಒಂದು ವೇಳೆ ಯಾವುದೇ ನೀರಿನ ಮೂಲವಿಲ್ಲದೇ ಇದ್ದಲ್ಲಿ ಅಂತಹ ಪ್ರದೇಶಗಳಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಅಥವಾ ಖಾಸಗಿ ಬೋರವೆಲ್‌ಗಳಿಂದ ಬಾಡಿಗೆ ಆಧಾರದಲ್ಲಿ ನೀರು ಪಡೆಯಲು ಜಿ.ಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳ ಅನುಮತಿಯೊಂದಿಗೆ ನಿಯಮಾನುಸಾರ ಕ್ರಮ ವಹಿಸಬೇಕು ಎಂದರು.

ಜಿಲ್ಲಾ ಪಂಚಾಯಿತಿಗೆ ಸಂಬಂಧಿಸಿದ ಜಲಜೀವನ್ ಮಿಷನ್, ಸ್ವಚ್ಛ ಭಾರತ್ ಮಿಷನ್, ವಸತಿ ಯೋಜನೆ, ಉದ್ಯೋಗ ಖಾತರಿ ಯೋಜನೆ, ಪಂಚಾಯತ್ ರಾಜ್ ವಿಷಯಕ್ಕೆ ಸಂಬಂಧಿಸಿದಂತೆ, ತೆರಿಗೆ ವಸೂಲಾತಿ, ಆಸ್ತಿಗಳ ಸಮೀಕ್ಷೆ, ಸಕಾಲ, ಗ್ರಾಮ ಆರೋಗ್ಯ ಅಭಿಯಾನ, ಬಯೋಮೆಟ್ರಿಕ್ ಹಾಜರಾತಿ, ಗ್ರಂಥಾಲಯ ನಿರ್ವಹಣೆ ಸೇರಿದಂತೆ ಎಲ್ಲಾ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ಅನುಷ್ಠಾನ ಮಾಡಬೇಕು. ತೆರಿಗೆ ಸಂಗ್ರಹಣೆಯಲ್ಲಿ ಪ್ರಗತಿ ಸಾಧಿಸದ ಪಂಚಾಯತಿಗಳು ಕೂಡಲು ನಿಗದಿತ ಗುರಿಯಂತೆ ತೆರಿಗೆ ಸಂಗ್ರಹಣೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಎಲ್ಲ ಪಿಡಿಓಗಳಿಗೆ ಸೂಚನೆ ನೀಡಿದರು.

ಗ್ರಾಮೀಣ ಪ್ರದೇಶದಲ್ಲಿನ ಕುಡಿಯುವ ನೀರಿನ ಸರಬರಾಜು ಪೈಪುಗಳನ್ನು ನಿರಂತರವಾಗಿ ಗಮನಿಸಿ, ಯಾವುದೇ ಸೋರಿಕೆ ಕಂಡುಬಂದಲ್ಲಿ ಅದನ್ನು ಕೂಡಲೇ ಸರಿಪಡಿಸಿ ಕುಡಿಯುವ ನೀರು ಕಲುಷಿತವಾಗದಂತೆ ಕ್ರಮವಹಿಸಬೇಕು. ಶುದ್ಧ ಕುಡಿಯುವ ನೀರಿನ ಮೋಟಾರ್ ಪಂಪ್ ಹಾಗೂ ಜಲಜೀವನ್ ಮಿಷನ್ ನೀರು ಸರಬರಾಜು ಪಂಪ್‌ಗಳು ಸುಸ್ಥಿಯಲ್ಲಿರುವಂತೆ ನೋಡಿಕೊಳ್ಳಬೇಕು. ಎಲ್ಲಾ ಓ.ಎಚ್.ಟಿ ಟ್ಯಾಂಕುಗಳನ್ನು ಕ್ರಮೇಣವಾಗಿ ಸ್ವಚ್ಛಗೊಳಿಸಿ, ಈ ಬಗ್ಗೆ ಸ್ವಚ್ಛತಾ ಕಾರ್ಯದ ಮತ್ತು ಸ್ವಚ್ಛತಾ ಕಾರ್ಯ ಪೂರ್ಣಗೊಂಡ ನಂತರದ ಎರಡೂ ಜಿ.ಪಿ.ಎಸ್ ಪೋಟೋಗಳೊಂದಿಗೆ ಜಿಪಂ.ಗೆ ವರದಿ ಸಲ್ಲಿಸಬೇಕು. ಕುಡಿಯುವ ನೀರಿನ ಪರೀಕ್ಷೆಗಳು ಶೇ. 100 ರಷ್ಟಾಗಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲೆಯ ಎಲ್ಲ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಹಾಗೂ ಇತರೆ ಇಲಾಖೆಗಳ ಅಧಿಕಾರಿಗಳು, ಎಲ್ಲ ಗ್ರಾ.ಪಂ ಪಿಡಿಓ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ರೈಲ್ವೇ ಮದ್ಯೆ ಅಪರಿಚಿತ ವ್ಯಕ್ತಿ ಆತ್ಮಹತ್ಯೆ

• **ಮಲ್ಲಮ್ಮ ನುಡಿ ವಾರ್ತೆ, ರಾಯಚೂರು**



ರಾಯಚೂರು ರೈಲ್ವೇ ನಿಲ್ದಾಣದ ವೇದಿಕೆ ಸಂಖ್ಯೆ 02 ರ ಹತ್ತಿರ ಡೌನ್‌ಮೇನ್ ಲೈನ್ ರೈಲುಹಳಿಯ ಮದ್ಯೆ ಸುಮಾರು 25 ವರ್ಷದ ಅಪರಿಚಿತ ಗಂಡಸ್ಸು ಯಾವುದೋ ಚಲಿಸುವ ರೈಲು ಗಾಡಿಗೆ ಅಡ್ಡ ಮಲಗಿ ತಲೆಕೊಟ್ಟು ಆತ್ಮಹತ್ಯೆ ಮಾಡಿಕೊಂಡು ಮೃತಪಟ್ಟಿದ್ದು, ಈ ಕುರಿತು ರೈಲ್ವೆ ಪೊಲೀಸ್ ಠಾಣೆಯಲ್ಲಿ ಯು.ಡಿ.ಆರ್ ನಂ 13/2026 ಯು/ಎಸ್ 194 ಬಿಎನ್‌ಎಸ್‌ಎಸ್ ರಿತ್ಯಾ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ ಎಂದು ಠಾಣೆಯ ಅಧಿಕಾರಿಗಳು ತಿಳಿಸಿದ್ದಾರೆ.

ಮೃತದೇಹ ದೊರೆತ ಘಟನಾ ಸ್ಥಳಗಳಲ್ಲಿ ಮೃತನ ವಾರಸುದಾರರು ಯಾರು ಪತ್ತೆಯಾಗಿರುವುದಿಲ್ಲ. ಮೃತನ ವಾರುಸುದಾರ ಪತ್ತೆ ಹಾಗೂ ಪಿ.ಎಂ.ಇ. ಸಲುವಾಗಿ ಮೃತದೇಹಗಳನ್ನು ರಾಯಚೂರು ರೀಮ್ಸ್ ಆಸ್ಪತ್ರೆಯ ಶೀತಲ ಶವಗಾರದಲ್ಲಿ ಇಡಲಾಗಿದೆ.

ಅಪರಿಚಿತ ಗಂಡಸ್ಸು ವಯಸ್ಸು ಸುಮಾರು 25 ವರ್ಷ, ಎತ್ತರ ಸುಮಾರು 5.2 ಅಡಿ, ಗೋಧಿ ಮೈ ಬಣ್ಣ, ದುಂಡು ಮುಖ, ದಪ್ಪ ಮೂಗು, ಕಪ್ಪು ಕಣ್ಣುಗಳು, ತಲೆಯಲ್ಲಿ 2 ಇಂಚು ಕಪ್ಪು ಕೂದಲು, ಚಿಗರು ಗಡ್ಡ ಮೀಸೆ ಬಿಟ್ಟಿದ್ದು, ಸಾಧಾರಣ ಶರೀರ ಹೊಂದಿರುತ್ತಾನೆ.

ಒಂದು ತಿಳಿ ಗುಲಾಬಿ ಬಣ್ಣದ ರೆಡಿಮೇಡ್ ಶರ್ಟು, ಒಂದು ಒಂದು ನೀಲಿ ಬಣ್ಣದ ಜೀನ್ಸ ಪ್ಯಾಂಟ್, ಒಂದು ಬೂದು ಬಣ್ಣ ಚಡ್ಡಿ, ಕೆಂಪು ಬಣ್ಣದ ಉಡದಾರ ಧರಿಸಲಾಗಿದೆ.

ಮೃತನ ವಾರಸುದಾರರು ಪತ್ತೆಯಾದಲ್ಲಿ ಅಥವಾ ಈ ಮೃತನ ಹೋಲಿಕೆಯ ಪುರುಷ ಕಾಣೆ-ಯಾದ ಪ್ರಕರಣ ದಾಖಲಾಗಿದ್ದಲ್ಲಿ ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 08532-231716 ಅಥವಾ ಮೊಬೈಲ್ ಸಂಖ್ಯೆ: 9480802111 ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ: 080-22871291ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೆಸ್ಕಾಂ ನಗರ 2: ಏ 11ಕ್ಕೆ ವಿದ್ಯುತ್ ವ್ಯತ್ಯಯ

• **ಮಲ್ಲಮ್ಮ ನುಡಿ ವಾರ್ತೆ, ರಾಯಚೂರು**

ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ 2ರ 110 ಕೆ.ವಿ ಮೇಸ್, ವಡವಟ್ಟಿ ವಿದ್ಯುತ್ ಮಾರ್ಗದ ದುರಸ್ತಿ ಹಾಗೂ ಸುಧಾರಣೆ ಕಾಮಗಾರಿಯನ್ನು ನಿರ್ವಹಿಸುವ ಪ್ರಯುಕ್ತ ಏಪ್ರಿಲ್ 11ರ ಬೆಳಿಗ್ಗೆ 10ರಿಂದ ಸಂಜೆ 4ರವರೆಗೆ ದೇವಿ ನಗರ, ಹರಿಜನವಾಡ, ನವಾಬ್ ಗಡ್ಡ, ಎನ್.ಜಿ.ಓ ಕಾಲೋನಿ, ಮುನ್ನೂರುವಾಡಿ. ಜಲಾಲ್ ನಗರ, ಮಾರ್ಕೆಟ್ ಯಾರ್ಡ್, ನೀರಭಾವಿ ಕುಂಟಾ, ಬಸವನಭಾವಿ ಸರ್ಕಲ್, ತಾಯಮ್ಮ ಗುಡಿ, ದೇವಿನಗರ, ಅಶ್ವಿನಿ ಕಾಲೋನಿ, ಅಗ್ರೀಗೋಲ್ಡ್, ಗದ್ವಾಲ ರೋಡ, ಎಮ್.ವಿ.ಜಿ. ಲೇಔಟ್ ಸೇರಿದಂತೆ ಸುತ್ತಮುತ್ತಲಿನ ಎಲ್ಲಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿರಂತರ ಗ್ರಾಹಕರ ಸೇವಾ ಕೇಂದ್ರ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ 2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೀರಭದ್ರೇಶ್ವರ ಜಾತ್ರೆ ವೈಭವ

ಕಲಬುರಗಿ: ಜಿಲ್ಲೆಯ ಕಾಳಗಿ ತಾಲೂಕಿನ ರಾಯಕೋಡ್ ಗ್ರಾಮದಲ್ಲಿ ಶ್ರೀ ವೀರಭದ್ರೇಶ್ವರ ಜಾತ್ರೆ ಅಂಗವಾಗಿ ಭಕ್ತಿ ಭಾವದಿಂದ ಉಚ್ಛಾಯಿ ಮೆರವಣಿಗೆ ಜರುಗಿತು. ಈ ಸಂದರ್ಭದಲ್ಲಿ ಪುರವಂತರು ಹಾಗೂ ಅಪಾರ ಸಂಖ್ಯೆಯ ಭಕ್ತರು ಅಗ್ನಿ ಪ್ರವೇಶ ಮಾಡಿ ತಮ್ಮ ಭಕ್ತಿಯನ್ನು ವ್ಯಕ್ತಪಡಿಸಿದರು. ಬಳಿಕ ಗ್ರಾಮದ ಪ್ರಮುಖ ಬೀದಿಗಳಲ್ಲಿ ಶ್ರೀ ವೀರಭದ್ರೇಶ್ವರ ದೇವರ ಉಚ್ಛಾಯಿ ರಥೋತ್ಸವ ಮತ್ತು ಪಲ್ಲಕ್ಕಿ ಮೆರವಣಿಗೆ ವಿಜೃಂಭಣೆಯಿಂದ ನಡೆಯಿತು. ಶ್ರೀ ವೀರಭದ್ರೇಶ್ವರ ದೇವರ ಮಹಾರಥೋತ್ಸವ ಜರುಗಿದ್ದು, ಈ ವೈಭವವನ್ನು ಕಣ್ತುಂಬಿಕೊಳ್ಳಲು ಜಿಲ್ಲೆಯ ವಿವಿಧ ಭಾಗಗಳಿಂದ ಸಾವಿರಾರು ಭಕ್ತರು ಆಗಮಿಸಿದ್ದರು.

# ವೈಯಕ್ತಿಕ ಚಟುವಟಿಕೆಗೆ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ, ರಾಯಚೂರು**

ಜಿಲ್ಲೆಯ ತುರ್ವಿಹಾಳ ಪಟ್ಟಣ ಪಂಚಾಯತ ವತಿಯಿಂದ 2026-27ನೇ ಸಾಲಿನ ಎಸ್.ಎಫ್.ಸಿ. ಶೇ.7.25 ಇತರೆ ಬಡಜನರ ಕಲ್ಯಾಣಕ್ಕಾಗಿ ಮತ್ತು ಶೇ.5 ವಿಕಲಚೇತನರಿಗಾಗಿ ಯೋಜನೆಗೆ ಕಾಯ್ದಿರಿಸಲಾದ ಎಸ್.ಎಫ್.ಸಿ. ಮುಕ್ತ ನಿಧಿ ಅನುದಾನ ಅನುಷ್ಠಾನಕ್ಕಾಗಿ ವೈಯಕ್ತಿಕ ಚಟುವಟಿಕೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

2026-27 ನೇ ಸಾಲಿನ ಎಸ್ ಎಫ್ ಸಿ-7.25% ಇತರೆ ಬಡ ವರ್ಗದವರಿಗೆ ಶಸ್ತ್ರ ಚಿಕಿತ್ಸೆಗೆ ಒಳಗಾಗಿರುವ ರೋಗಿಗಳಿಗೆ ಧನ ಸಹಾಯಕ್ಕೆ ನಿಗದಿತ ಅರ್ಜಿ ನಮೂನೆ 2025-26ನೇ ಸಾಲಿನೊಳಗೆ ಶಸ್ತ್ರ ಚಿಕಿತ್ಸೆಗೊಳಗಾದ ದಾಖಲಾತಿಗಳು (ವೈದ್ಯಾಧಿಕಾರಿಗಳಿಂದ ದೃಡೀಕರಣ ಪ್ರಮಾಣ ಪತ್ರ) ಆಧಾರ ಕಾರ್ಡ್, ರೇಷನ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಬುಕ್ ಝರಾಕ್ಸ್ ಪ್ರತಿ ಚುನಾವಣಾ ಗುರುತಿನ ಚೀಟಿ ಸಲ್ಲಿಸಬೇಕು.

ವಿಕಲಾಂಗಚೇತನರು, ಪೋಲಿಯೋ ರೋಗಕೊಳ ಪಟ್ಟವರಿಗೆ ಕೃತಕ ಜೋಡಣೆಗೆ ತಗುಲುವ ಮೊತ್ತದ ಸಹಾಯಧನಕ್ಕೆ ನಿಗದಿತ ಅರ್ಜಿ ನಮೂನ,□ ಅಂಗವಿಕಲ ಪ್ರಮಾಣ ಪತ್ರ, ವೈದ್ಯಾಧಿಕಾರಿಗಳಿಂದ ದೃಡೀಕರಣ ಪತ್ರ, ಆಧಾರ ಕಾರ್ಡ್, ರೇಷನ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ, ಚುನಾವಣೆ ಗುರುತಿನ ಚೀಟಿ, ಬ್ಯಾಂಕ್ ಪುಸ್ತಕ ಝರಾಕ್ಸ್ ಸಲ್ಲಿಸಬೇಕು.

2026-27ನೇ ಸಾಲಿನ ಎಸ್‌ಎಫ್‌ಸಿ ಯೋಜನೆಯಡಿ ಪರಿಶಿಷ್ಟ ಜಾತಿಯ ಎಸ್.ಎಸ್.ಎಲ್.ಸಿ ಉತ್ತೀರ್ಣವಾಗಿರುವ ವಿದ್ಯಾರ್ಥಿಗಳಿಗೆ ಪ್ರತ್ಸಾಹ ಧನಕ್ಕೆ 2025-26 ನೇ ಸಾಲಿನಲ್ಲಿ ಉತ್ತೀರ್ಣವಾದ ವಿದ್ಯಾರ್ಥಿಗಳು ಶಾಲೆಯ ದೃಡೀಕರಣ ಪತ್ರ, (ಪ್ರಸಕ್ತ ಸಾಲಿನ) ಶಾಲೆಯಲ್ಲಿ ಫೀ ತುಂಬಿದ ರಸೀದಿ, ಎಸ್.ಎಸ್.ಎಲ್.ಸಿ ಅಂಕಪಟ್ಟಿ ಝರಾಕ್ಸ್ ಪ್ರತಿ, ಪಡಿತರ ಚೀಟಿ, ಆಧಾರ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಪಾಸ್ ಫೊಟೊ, ಬ್ಯಾಂಕ್ ಪುಸ್ತಕ ಝರಾಕ್ಸ್ ಪ್ರತಿ, ವಾಸಸ್ಥಳ ಪ್ರಮಾಣ ಪತ್ರದೊಂದಿಗೆ ಏಪ್ರಿಲ್ 22ರ ಸಂಜೆ 5.30ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಕೊನೆಯ ದಿನಾಂಕ ಮೀರಿ ಬಂದಂತಹ ಯಾವುದೇ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ ವಿಳಾಸ: http://www.itstaffulbturvihal.co.in ನಲ್ಲಿ ಈ ಮಾಹಿತಿಯನ್ನು ಡೌನ್‌ಲೋಡ್ ಮಾಡಿಕೊಂಡು ವಿವರ ಪಡೆದುಕೊಳ್ಳಬಹುದಾಗಿದೆ ಎಂದು ತುರ್ವಿಹಾಳ ಪಟ್ಟಣ ಪಂಚಾಯತ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯುವಕನಮೇಲೆ ಹಲ್ಲೆ ಪ್ರಕರಣ ದಾಖಲು

• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು**

ಕಸಾಯಿಖಾನೆಗೆ ಜಾನುವಾರು ಸಾಗಿಸುತ್ತಿದ್ದ ವಾಹನದ ಬಗ್ಗೆ ಪ್ರಶ್ನಿಸಿದ್ದರಿಂದ ಕುಪಿತಗೊಂಡ ಆರೋಪಿ ಚಂದ್ರಮೌಳಿ ಎಂಬ ಯುವಕನ ಮೇಲೆ ಹಲ್ಲೆನಡೆಸಿರುವ ಘಟನೆ ತಾಲೂಕಿನ ಕಟ್ಟೆಮಳಲವಾಡಿ ಎಂಬಲ್ಲಿ ಎ.8ರ ಬುಧವಾರ ನಡೆದಿದೆ.

ನಗರದ ಬ್ರಾಹ್ಮಣರ ಬಡಾವಣೆಯ ಗುರುರಾಜ್ ಪುತ್ರ, ರಾಷ್ಟ್ರ ರಕ್ಷಣಾ ಪಡೆ ಸಂಘಟನೆಯ ಸದಸ್ಯ ಚಂದ್ರಮೌಳಿ ಎಂಬಾತ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾನೆ.

ಈ ನಡುವೆ ತಮ್ಮ ಮೇಲೆ ಹಲ್ಲೆ ನಡೆಸಿದ್ದಾರೆಂದು ಶಬ್ಬೀರ್ ನಗರದ ಶಾರೂಕ್ ಸಹ ಪ್ರತಿ-ದೂರು ನೀಡಿದ್ದಾರೆ.

ಕೆ.ಆರ್.ನಗರದ ಕಡೆಯಿಂದ ಬೊಲೆರೋ ವಾಹನದಲ್ಲಿ ಅಕ್ರಮವಾಗಿ ಗೋವುಗಳನ್ನು ಹುಣಸೂರು ಶಬ್ಬೀರ್ ನಗರದ ಕಸಾಯಿಖಾನೆಗೆ ಸಾಗಿಸುತ್ತಿರುವ ಬಗ್ಗೆ ಮಾಹಿತಿ ಪಡೆದ ಚಂದ್ರಮೌಳಿ, 112 ಗೆ ಮಾಹಿತಿ ನೀಡಿ ನಂತರ ತಮ್ಮ ಸ್ಕೂಟರ್‌ನಲ್ಲಿ ಸ್ನೇಹಿತನೊಂದಿಗೆ ಕಟ್ಟೆಮಳಲವಾಡಿ ಕಡೆಗೆ ತೆರಳಿದ್ದಾರೆ.

ಈ ವೇಳೆ ಕಟ್ಟೆಮಳಲವಾಡಿಯ ನಂದಿ ಸರ್ಕಲ್ ಬಳಿ 7-8 ಜಾನುವಾರುಗಳನ್ನು ತುಂಬಿಕೊಂಡು ಬರುತ್ತಿದ್ದ ಬೊಲೆರೋ ವಾಹನವನ್ನು ತಡೆದು ಪ್ರಶ್ನಿಸಿದ್ದಾರೆ.

ಕಾರಿನಲ್ಲಿ ಸ್ನೇಹಿತರೊಂದಿಗೆ ಬಂದ ಶಾರೂಕ್ ಎಂಬಾತನೊಂದಿಗೆ ಚರ್ಚೆಗಿಳಿದಿದ್ದಾನೆ. ಈ ವೇಳೆ ಇಬ್ಬರಿಗೂ ಮಾತಿನ ಚಕಮಕಿಯಾಗಿದೆ. ಶಾರೂಕ್ ಎಂಬಾತ ಚಂದ್ರಮೌಳಿಗೆ ಎಚ್ಚರಿಕೆ ನೀಡಿ ಹಲ್ಲೆ ನಡೆಸಿದ್ದರಿಂದ ಬಾಯಿ, ಮೂಗಿಗೆ ಪೆಟ್ಟಾಗಿದ್ದು, ಕೆ.ಆರ್.ನಗರ ಕಡೆಯಿಂದ ದಾರಿಯಲ್ಲಿ ಬರುತ್ತಿದ್ದವರು ಆಸ್ಪತ್ರೆಗೆ ಕರೆ ತಂದು ದಾಖಲಿಸಿದ್ದಾರೆ. ಈ ಸಂಬಂಧ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪ್ರತಿದೂರು: ಇತ್ತ ತನ್ನ ಮೇಲೆ ಚಂದ್ರಮೌಳಿ ಎಂಬಾತ ಹಲ್ಲೆ ನಡೆಸಿದ್ದಾನೆಂದು ಶಾರೂಕ್ ನೀಡಿದ ದೂರಿನನ್ವಯ ವಿರುದ್ಧ ಪರಸ್ಪರ ದೂರು ದಾಖಲಾಗಿದೆ.

ಮೂರು ಹಸುಗಳ ವಶ: ಚಂದ್ರಮೌಳಿ ನೀಡಿದ್ದ ದೂರನ್ನಾಧರಿಸಿ ಶಬ್ಬೀರ್ ನಗರದ ಶಾರೂಕ್ ಮನೆಯಿಂದ 3 ಹಸುಗಳನ್ನು ರಕ್ಷಿಸಿ ಪಿಂಜಾರ ಪೋಲ್‌ಗೆ ಕಳುಹಿಸಲಾಗಿದ್ದು, ಶಾರೂಕ್‌ನನ್ನು ತನಿಖೆ ನಡೆಸಲಾಗುತ್ತಿದೆ. ಬೊಲೆರೋ ವಾಹನ ಪತ್ತೆಗಾಗಿ ಪೊಲೀಸರು ಕ್ರಮ ವಹಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ

ಹುಣಸೂರು: ದೇವಾಲಯದ ಚಿಲಕ ಕೊಯ್ದು ಚಿನ್ನಾಭರಣ ದೋಚಿ, ಗೋಲಕ ಒಡೆದು ನಗ-ನಾಣ್ಯ ದೋಚಿರುವ ಘಟನೆ ತಾಲೂಕಿನ ಬಿಬಿಸಿ ಕಾಲೋನಿಯಲ್ಲಿ ನಡೆದಿದೆ.

ಬಿಬಿಸಿ ಕಾಲೋನಿಯ ಮಸಣಿಕಮ್ಮ ದೇವಾಲಯದ ಮುಂಬಾಗಿಲ ಚಿಲಕ ಕೊಯ್ದು ಒಳ ಹೊಕ್ಕಿರುವ ಕಳ್ಳರು, ದೇವರ ಮೂರ್ತಿ ಮೇಲಿದ್ದ ಸುಮಾರು 60 ಗ್ರಾಂ. ಚಿನ್ನಾಭರಣ, ಬೆಳ್ಳಿಯ ಪದಾರ್ಥಗಳನ್ನು ಕಳ್ಳತನ ಮಾಡಿದ್ದಾರೆ.

ಅಲ್ಲದೆ ಗೋಲಕ ಒಡೆದು ಹಣ ದೋಚಿ ಪರಾರಿಯಾಗಿದ್ದು, ಈ ಸಂಬಂಧ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸ್ಥಳಕ್ಕೆ ಡಿವೈಎಸ್‌ಪಿ ರವಿ, ಎಸ್.ಐ.ರಾಮು ಹಾಗೂ ಸಿಬ್ಬಂದಿ ಭೇಟಿ ನೀಡಿ ಪರಿಶೀಲಿಸಿದ್ದಾರೆ.

# ಮುಖ್ಯಮಂತ್ರಿ ಪ್ರವಾಸ

• **ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ**

ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಬೀದರ ಏರ್‌ಬೇಸ್‌ದಿಂದ ಹೆಲಿಕ್ಯಾಪ್ಟರ್ ಮೂಲಕ ಏಪ್ರಿಲ್ 11 ರಂದು ಶನಿವಾರ ಮಧ್ಯಾಹ್ನ 3.25 ಗಂಟೆಗೆ ಚಿತ್ತಾಪುರ ತಾಲೂಕಿನ ಸೂಗೂರ (ಎನ್) ಗ್ರಾಮದ ಹೆಲಿಪ್ಯಾಡ್‌ಗೆ ಆಗಮಿಸುವರು.

ನಂತರ ಚಿತ್ತಾಪುರ ತಾಲೂಕಿನ ಶ್ರೀಕ್ಷೇತ್ರ ಸೂಗೂರ(ಎನ್) ದಲ್ಲಿ ಸಚ್ಚಿದಾನಂದ, ನಿತ್ಯ ನಿರಂಜನ ಮೂರ್ತಿ, ಸ್ವಯಂಸಿದ್ಧ ಶರಣರು, ಮಹಾತ್ಮ ಶ್ರೀ ಶ್ರೀ ಶ್ರೀ ಭೋಜಲಿಂಗೇಶ್ವರ ಸಿದ್ಧ ಸಂಸ್ಥಾನ ಮಠದ ಶ್ರೀಕ್ಷೇತ್ರ ಸೂಗೂರ (ಎನ್) ವತಿಯಿಂದ ಆಯೋಜಿಸಿರುವ ಶ್ರೀ ಶ್ರೀ ಶ್ರೀ ಭೋಜಲಿಂಗೇಶ್ವರರ ನೂತನ ದೇವಸ್ಥಾನ ಲೋಕಾರ್ಪಣೆ, ಮೂರ್ತಿ ಪ್ರತಿಷ್ಠಾಪನೆ, ನೂತನ ಬೆಳ್ಳಿ ರಥೋತ್ಸವ ಚಾಲನೆ ಹಾಗೂ ಕಲ್ಯಾಣ ಮಂಟಪದ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ನಂತರ ಅಂದು ಸಂಜೆ 4.10 ಗಂಟೆಗೆ ಚಿತ್ತಾಪುರ ತಾಲೂಕಿನ ಸೂಗೂರ (ಎನ್) ಗ್ರಾಮದ ಹೆಲಿಪ್ಯಾಡ್‌ದಿಂದ ರಸ್ತೆ ಮೂಲಕ ಹೊರಟು ಸಂಜೆ 4.30 ಗಂಟೆಗೆ ಚಿತ್ತಾಪುರ ತಾಲೂಕಿನ ಶ್ರೀಕ್ಷೇತ್ರ ನಾಲವಾರಕ್ಕೆ ಆಗಮಿಸಿ, ಸದ್ಗುರು ಶ್ರೀ ಕೋಡಿಸಿದ್ದೇಶ್ವರ ಮಹಾಸಂಸ್ಥಾನ ಮಠಕ್ಕೆ ಭೇಟಿ ನೀಡುವರು. ಅಂದು ಸಂಜೆ 5 ಗಂಟೆಗೆ ಚಿತ್ತಾಪುರ ತಾಲೂಕಿನ ಶ್ರೀಕ್ಷೇತ್ರ ನಾಲವಾರದಿಂದ ರಸ್ತೆ ಮೂಲಕ ಹೊರಟು ಸಂಜೆ 5.10 ಗಂಟೆಗೆ ಚಿತ್ತಾಪುರ ತಾಲೂಕಿನ ಸೂಗೂರ (ಎನ್) ಗ್ರಾಮದ ಹೆಲಿಪ್ಯಾಡ್‌ಗೆ ಆಗಮಿಸಿ, ಅಲ್ಲಿಂದ ಹೆಲಿಕ್ಯಾಪ್ಟರ್ ಮೂಲಕ ಸಂಜೆ 5.45 ಗಂಟೆಗೆ ಕಲಬುರಗಿ ವಿಮಾನ ನಿಲ್ದಾಣಕ್ಕೆ ಆಗಮಿಸಿ, ಸಂಜೆ 6 ಗಂಟೆಗೆ ಕಲಬುರಗಿ ವಿಮಾನ ನಿಲ್ದಾಣದಿಂದ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

# ತರಬೇತಿ ಆರಂಭ: ನೋಂದಣಿಗೆ ಅವಕಾಶ

• **ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ**


ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ವತಿಯಿಂದ ಜಿಲ್ಲಾ ಕ್ರೀಡಾಂಗಣದಲ್ಲಿ ನೂತನವಾಗಿ 'ಖೇಲೋ ಇಂಡಿಯಾ' ಹಾಕಿ ಕ್ರೀಡಾ ತರಬೇತಿ ಪ್ರಾರಂಭಿಸಲಾಗಿದ್ದು, ಜಿಲ್ಲೆಯ ಯುವಕರಲ್ಲಿ ಕ್ರೀಡಾ ಮನೋಭಾವ ಬೆಳೆಸಲು ಉದ್ದೇಶ ಹೊಂದಲಾಗಿದೆ. ಕ್ರೀಡಾ ಕ್ಷೇತ್ರದಲ್ಲಿ ಆಸಕ್ತಿ ಹೊಂದಿರುವವರು ನೋಂದಾಯಿಸಿಕೊಳ್ಳಬಹುದಾಗಿದೆ.

8 ವರ್ಷದಿಂದ 16 ವರ್ಷದೊಳಗಿನ ಬಾಲಕ ಮತ್ತು ಬಾಲಕಿಯರಿಗಾಗಿ ಈ ಹಾಕಿ ತರಬೇತಿ ನೀಡಲಾಗುತ್ತದೆ. ಆಸಕ್ತ ಕ್ರೀಡಾಪಟುಗಳು ನಿಗದಿತ ನಮೂನೆಯಲ್ಲಿ ತಮ್ಮ ವಿವರಗಳನ್ನು ಭರ್ತಿ ಮಾಡುವ ಮೂಲಕ ತರಬೇತಿಗೆ ಸೇರ್ಪಡೆಗೊಳ್ಳಬಹುದು.

ತರಬೇತಿಗೆ ಸೇರಲು ಇಚ್ಛಿಸುವವರು ಅಥವಾ ಹೆಚ್ಚಿನ ಮಾಹಿತಿಗಾಗಿ ಖೇಲೋ ಇಂಡಿಯಾ ಹಾಕಿ ತರಬೇತುದಾರರಾದ ಜೊಹ್ರಾ ಶಮೀಮ್ (ಮೊ.9845778608) ಗೆ ಸಂಪರ್ಕಿಸಬಹುದಾಗಿದೆ ಅಥವಾ ಕ್ರೀಡಾಸಕ್ತರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಚೇರಿಗೆ ಭೇಟಿ ಮಾಡಬಹುದು.

ಕ್ರೀಡೆಯಲ್ಲಿ ಆಸಕ್ತಿ ಹೊಂದಿರುವ ಬಳ್ಳಾರಿ ಜಿಲ್ಲೆಯ ಮಕ್ಕಳು ಈ ಅವಕಾಶ ಸದುಪಯೋಗಪಡೆದುಕೊಳ್ಳಬೇಕು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಕ್ತಿ ಕಾಣೆ: ಪತ್ತೆಗೆ ಮನವಿ



• **ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ**

ನಗರದ ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಎಂ.ಸಂಜಯ್ ನಾಯ್ಕ್ ಎನ್ನುವ 39 ವರ್ಷದ ವ್ಯಕ್ತಿ ಮಾ.08 ರಂದು ಹೊರ ಹೋಗಿ ಬರುವುದಾಗಿ ಹೇಳಿ ಮರಳಿ ಮನೆಗೆ ಬಾರದೇ ಕಾಣೆಯಾಗಿರುವ ಕುರಿತು ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ವ್ಯಕ್ತಿಯ ಚಹರೆ: ಎತ್ತರ 5 ಅಡಿ, ದುಂಡು ಮುಖ, ಸಾಧಾರಣ ಮೈಕಟ್ಟು, ಕಪ್ಪು ಮತ್ತು ಬಿಳಿ ಕೂದಲು ಹೊಂದಿದ್ದು, ಎಡತೊಡೆಯ ಮೇಲೆ ಕಪ್ಪು ಮಚ್ಚೆ ಇರುತ್ತದೆ.

ಕಾಣೆಯಾದ ಸಂದರ್ಭದಲ್ಲಿ ಗುಲಾಬಿ ಬಣ್ಣದ ಟೀ-ಶರ್ಟ್ ಹಾಗೂ ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ, ತೆಲುಗು, ಹಿಂದಿ ಹಾಗೂ ಭೋಜ್‌ಪುರಿ ಭಾಷೆ ಮಾತನಾಡುತ್ತಾನೆ.

ಕಾಣೆಯಾದ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392-258100 ಕರೆ ಮಾಡಿ ಮಾಹಿತಿ ನೀಡಬಹುದಾಗಿದೆ ಎಂದು ಪ್ರಕಟಣೆಯಲ್ಲಿ ಕೋರಿದ್ದಾರೆ.

# ರೈತರ ಅಭ್ಯುದಯಕ್ಕೆ ಸರ್ಕಾರ ಬದ್ಧ: ಪ್ರಿಯಾಂಕ್ ಖರ್ಗೆ

• **ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ**

ಕಾಂಗ್ರೆಸ್ ಸರ್ಕಾರ ರೈತರ ಅಭ್ಯುದಯಕ್ಕೆ ಶ್ರಮಿಸುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ನುಡಿದರು.

ಜಿಲ್ಲಾಡಳಿತ, ಜಿಲ್ಲಾಪಂಚಾಯತ, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ, ತೋಟಗಾರಿಕೆ ಇಲಾಖೆ ಸಂಯುಕ್ತಾಶ್ರಯದಲ್ಲಿ ಚಿತ್ತಾಪುರ ಪಟ್ಟಣದ ಬಜಾಜ್ ಕಲ್ಯಾಣ ಮಂಟಪದಲ್ಲಿ ನಡೆದ ಕಾರ್ಯಕ್ರಮದಲ್ಲಿ

2025-26 ನೇ ಸಾಲಿನ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅನುದಾನದಡಿ ತೋಟಗಾರಿಕೆ ಇಲಾಖೆಯಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ತರಕಾರಿ ಬೀಜಗಳ ಕಿಟ್ ವಿತರಿಸಿ ಅವರು ಮಾತನಾಡುತ್ತಿದ್ದರು.

ನಮ್ಮ ಪಕ್ಷ ಅಧಿಕಾರಕ್ಕೆ ಬಂದ ಮೇಲೆ ರೈತರಿಗೆ ರೂ 2590 ಕೋಟಿ ಅನುದಾನ ಬಿಡುಗಡೆ ಮಾಡಿದ್ದೇವೆ. ಇದರಲ್ಲಿ 656 ಕೋಟಿ ಬೆಳೆ ವಿಮೆ ಸೇರಿದೆ. ಇಷ್ಟೊಂದು ಮೊತ್ತದ ಪರಿಹಾರ ಪಡೆದುಕೊಂಡ ಜಿಲ್ಲೆ ರಾಜ್ಯದಲ್ಲಿ ಮತ್ತೊಂದಿಲ್ಲ. ಜಿಲ್ಲೆಯಲ್ಲಿ ತೊಗರಿಗೆ ನೆಟೆ ರೋಗ ಬಂದು 2 ಲಕ್ಷ ಹೆಕ್ಟೇರ್ ಬೆಳೆ ಹಾನಿಯಾದಾಗ ರೂ 182 ಕೋಟಿ ಬಿಡುಗಡೆ ಮಾಡಿದ್ದೇವೆ. ಆದರೆ, ಇದೇ ತರ ಜಿಲ್ಲೆಯ ರೈತರು ನೆರೆ ಹಾಗೂ ಬರದಿಂದ ನಷ್ಟ ಅನುಭವಿಸಿದಾಗ ಅಂದಿನ ಬಿಜೆಪಿ ಸರ್ಕಾರ ಜಿಲ್ಲೆಗೆ ಕೇವಲ 22 ಕೋಟಿ ಮಾತ್ರ ಬಿಡುಗಡೆ ಮಾಡಿತ್ತು ಎಂದು ನೆನಪಿಸಿದರು.

ಕೇಂದ್ರ ಸರ್ಕಾರ ನಮ್ಮ ರೈತರ ವಿರೋಧಿ ನಿಲುವು ತೆಗೆದುಕೊಂಡು ಬಿಡುಗಡೆ ಮಾಡಬೇಕಾದ ಅನುದಾನ ತಡೆಹಿಡಿದಿದ್ದರಿಂದ ರಾಜ್ಯದ ಇಡೀ ಸಚಿವ ಸಂಪುಟ ದೆಹಲಿಯಲ್ಲಿ ಪ್ರತಿಭಟನೆ ಮಾಡಿತ್ತು. ಇತಿಹಾಸದಲ್ಲಿ ರಾಜ್ಯ ಸರ್ಕಾರವೊಂದು ಕೇಂದ್ರದ ವಿರುದ್ದ ಪ್ರತಿಭಟನೆ ಮಾಡಿದ್ದು ಇದೇ ಮೊದಲು. ಅಷ್ಟಾದರೂ ಕೇಂದ್ರ ಬಗ್ಗದಿದ್ದಾಗ ಕೊನೆಗೆ ರಾಜ್ಯ ಸರ್ಕಾರ ಸುಪ್ರಿಂ ಕೋರ್ಟ್ ಗೆ ಅರ್ಜಿ ಹಾಕಿದಾಗ ಸುಪ್ರಿಂ ಕೋರ್ಟ್ ಅನುದಾನ ಬಿಡುಗಡೆ ಮಾಡಿತ್ತು. ಇದು ರೈತರ ಪರವಾದ ನಮ್ಮ ಬದ್ದತೆಗೆ ಸಾಕ್ಷಿಯಾಗಿದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು.ಕೋಲ್ಡ್ ಸ್ಟೋರೇಜ್ ನಿರ್ಮಾಣ ಮಾಡುವ ಗುರಿ ಹೊಂದಿದ್ದೇವೆ. ಪಲ್ಸ್ ಪ್ರೋಟಿನ್ ಹಬ್ ಮಾಡುವ ಯೋಜನೆಗಳಿವೆ. ಈಗಾಗಲೇ ಡ್ರೋನ್ ಮೂಲಕ ಕೀಟನಾಶಕ ಸಿಂಪಡಣೆ ಮಾಡುವ ಯಂತ್ರಗಳನ್ನು ಪರಿಚಯಿಸಲಾಗಿದೆ. ಇನ್ನು ಮುಂದೆಯೂ ಕೂಡಾ ತಂತ್ರಜ್ಞಾನ ಬಳಕೆ ಮಾಡಿಕೊಂಡು ರೈತರಿಗೆ ಮತ್ತಷ್ಟು ಸುಧಾರಿತ ಯಂತ್ರಗಳನ್ನು ಒದಗಿಸುಲಾಗುವುದು ಎಂದರು.

# ಜನಗಣತಿ: ಜಿಲ್ಲಾ ನ್ಯಾಯಾಧೀಶೆ ಶಾಂತಿ ಅವರಿಂದ ಸ್ವಯಂ ಗಣತಿ



• **ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ**

ಭಾರತ ಸರ್ಕಾರದ ಮಹತ್ವದ ಯೋಜನೆಯಾದ 'ಜನಗಣತಿ' ಪ್ರಕ್ರಿಯೆಯು ಅತ್ಯಂತ ಯಶಸ್ವಿಯಾಗಿ ಆರಂಭಗೊಂಡಿದ್ದು, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಕೆ.ಜಿ.ಶಾಂತಿ ಅವರು, ಬುಧವಾರ ಜಿಲ್ಲಾ ನ್ಯಾಯಾಲಯದ ತಮ್ಮ ಕಚೇರಿಯಲ್ಲಿ 'ಸ್ವಯಂ ಗಣತಿ' ಮಾಡುವ ಮೂಲಕ ಸಾರ್ವಜನಿಕರಿಗೆ ಮಾದರಿಯಾದರು.

ಈ ಬಾರಿಯ ಜನಗಣತಿಯಲ್ಲಿ ಡಿಜಿಟಲ್ ಪದ್ಧತಿಗೆ ಹೆಚ್ಚಿನ ಒತ್ತು ನೀಡಲಾಗಿದ್ದು, ನ್ಯಾಯಾಧೀಶರು ಜನಗಣತಿ ಇಲಾಖೆಯ ಅಧಿಕೃತ ಪೋರ್ಟಲ್ ಮೂಲಕ ತಮ್ಮ ವಿವರಗಳನ್ನು ತಾವೇ ಆನ್‌ಲೈನ್‌ನಲ್ಲಿ ದಾಖಲಿಸಿದರು.

ದೇಶದ ಅಭಿವೃದ್ಧಿ ಮತ್ತು ಭವಿಷ್ಯದ ಯೋಜನೆಗಳ ರೂಪಿಸುವಲ್ಲಿ ಜನಗಣತಿಯು ಬಹಳ ಮುಖ್ಯವಾದ ಪಾತ್ರವಹಿಸುತ್ತದೆ. ಪ್ರತಿಯೊಬ್ಬ ನಾಗರಿಕರು ಯಾವುದೇ ತಪ್ಪು ಮಾಹಿತಿಯನ್ನು ನೀಡದೆ, ನಿಖರವಾದ ವಿವರಗಳನ್ನು ಒದಗಿಸುವುದು ಕರ್ತವ್ಯವಾಗಿದೆ ಎಂದು ಹೇಳಿದರು.

ಡಿಜಿಟಲ್ ಗಣತಿಯಿಂದ ಸಮಯ ಉಳಿತಾಯವಾಗುವುದಲ್ಲದೆ, ದತ್ತಾಂಶದ ನಿಖರತೆ ಹೆಚ್ಚುತ್ತದೆ. ಸಾರ್ವಜನಿಕರು ಆನ್‌ಲೈನ್ ಮೂಲಕ 'ಸ್ವಯಂ ಗಣತಿ' ಮಾಡಿಕೊಳ್ಳಲು ಮುಕ್ತ ಅವಕಾಶವಿದೆ. ಗಣತಿ ಕಾರ್ಯಕ್ಕೆ ಸಾರ್ವಜನಿಕರು ಪೂರ್ಣ ಸಹಕಾರ ನೀಡಬೇಕು ಎಂದು ಅವರು ತಿಳಿಸಿದರು.

ಇದೇ ವೇಳೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಸಹ ಸ್ವಯಂ ಗಣತಿ' ಪ್ರಕ್ರಿಯೆಯಲ್ಲಿ ಭಾಗವಹಿಸಿ ಮಾಹಿತಿ ನೋಂದಾಯಿಸಿದರು.

# ಅಧ್ಯಕ್ಷರಾಗಿ ಕಣ್ಣೂರು ಮಂಜುನಾಥ್ ಉಪಾಧ್ಯಕ್ಷರಾಗಿ ನೂರುಲ್ಲಾ ಅವಿರೋಧ ಆಯ್ಕೆ

• **ಮಲ್ಲಮ್ಮ ನುಡಿ ವಾರ್ತೆ, ಕೋಲಾರ**

ನಗರದ ಜಿಲ್ಲಾ ಪಂಚಾಯತ್ ಮುಂಭಾಗವಿರುವ ಅರಹಳ್ಳಿ ವಿವಿದೋದ್ದೇಶ ಪ್ರಾಥಮಿಕ ಕೃಷಿ ಗ್ರಾಮೀಣ ಸಹಕಾರ ಸಂಘದ ಅಧ್ಯಕ್ಷರ ಮತ್ತು ಉಪಾಧ್ಯಕ್ಷರ ಚುನಾವಣೆ ನಡೆದಿದ್ದು ನೂತನ ಅಧ್ಯಕ್ಷರಾಗಿ ಮೈತ್ರಿ ಪಕ್ಷದ ಅಭ್ಯರ್ಥಿಗಳಾದ ಕಣ್ಣೂರು ಮಂಜುನಾಥ್ ಉಪಾಧ್ಯಕ್ಷರಾಗಿ ನೂರುಲ್ಲಾ ಅವಿರೋಧ ಆಯ್ಕೆಯಾಗಿರುತ್ತಾರೆ.

ನಂತರ ನೂತನ ಅಧ್ಯಕ್ಷರಾದ ಮಂಜುನಾಥ್ ಮಾತನಾಡಿ ನನ್ನ ಗೆಲುವಿಗೆ ಕಾರಣಕರ್ತರಾದ ಮಾಜಿ ಶಾಸಕ ಆರ್ ವರ್ತೂರ್ ಪ್ರಕಾಶ್, ಬೆಗ್ಲಿ ಸೂರ್ಯ ಪ್ರಕಾಶ್

ಸಿಎಂರ್ ಶ್ರೀನಾಥ್ ಮತ್ತು ಸೊಸೈಟಿ ನಿರ್ದೇಶಕರುಗಳಿಗೆ ಚಿರಋಣಿಯಾಗಿರುತ್ತೇನೆ .ಅಧ್ಯಕ್ಷ ಚುಕ್ಕಾಣಿ ಹಿಡಿದಿರುವ ನಾನು ಮುಂದಿನ ದಿನಗಳಲ್ಲಿ ರೈತರಿಗೆ ,ಜನಸಾಮಾನ್ಯರಿಗೆ ಆರ್ಥಿಕವಾಗಿ ಸಬಲೀಕರಣಗೊಳಿಸಲು ಸಹಕಾರ ,ಬೆಂಬಲ ನೀಡುತ್ತೇನೆ ಎಂದು ಭರವಸೆ ನೀಡಿದರು.

ಚುನಾವಣೆ ಅಧಿಕಾರಿಗಳಾಗಿ ಮುಳಬಾಗಿಲು ತಾಲೂಕು ಅಆಔ ಬಿ ಆರ್ ಶಿವಶಂಕರ್ ಕಾರ್ಯ ನಿರ್ವಹಿಸಿದರು. ಸಂಘದ ಅಇಔ ಹರೀಶ್ ಇದ್ದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಆರ್ ವರ್ತೂರ್ ಪ್ರಕಾಶ್, ಬೆಗ್ಲಿ ಸೂರ್ಯ ಪ್ರಕಾಶ್ ,ಸಿಎಂಆರ್ ಶ್ರೀನಾಥ್,ಜಿ ಅಶ್ವತ್ಥ ನಾರಾಯಣ ,ಸುರೇಶ್ ,ನಾಗರಾಜ್ ,ಪುಸ್ತಿ ನಾರಾಯಣಸ್ವಾಮಿ ,ಅರಹಳ್ಳಿ ಸೊಸೈಟಿ ನಿರ್ದೇಶಕರುಗಳು, ಮೈತ್ರಿ ಪಕ್ಷದ ಮುಖಂಡರು ಹಾಗು ಸೊಸೈಟಿ ಸಿಬ್ಬಂದಿಗಳು ಸೇರಿದಂತೆ ಇತರರು ಇದ್ದರು.



# ಐಕ್ಯೂ ಇಂಟರ್ನ್ಯಾಷನಲ್ ಪಿ.ಯು ಕಾಲೇಜು 99% ರಷ್ಟು ಫಲಿತಾಂಶ



• **ಮಲ್ಲಮ್ಮ ನುಡಿ ವಾರ್ತೆ, ಸಿಂಧನೂರು**

2025-26 ನೇ ಸಾಲಿನ ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟವಾಗಿದ್ದು ನಗರ ಹೊರವಲಯದ ಐಕ್ಯೂ ಇಂಟರ್ ನ್ಯಾಷನಲ್ ಪಿ.ಯು ಕಾಲೇಜು 99% ರಷ್ಟು ಫಲಿತಾಂಶ ಪಡೆದಿದ್ದು ಮೊದಲ ಬಾರಿಗೆ ರಾಯಚೂರು ಜಿಲ್ಲೆಗೆ ದ್ವಿತೀಯ ಸ್ಥಾನ ತಾಲ್ಲೂಕಿಗೆ ಪ್ರಥಮ ಗಳಿಸಿದ್ದು. ನಮ್ಮ ಶಾಲೆಯಲ್ಲಿ ಒಟ್ಟು 99 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಅದರಲ್ಲಿ 98 ವಿದ್ಯಾರ್ಥಿಗಳು ಉತ್ತೀರ್ಣರಾಗಿರುತ್ತಾರೆ.ಇದರಲ್ಲಿ 15 ವಿದ್ಯಾರ್ಥಿಗಳು ಶೇ.95% ರಷ್ಟು ಗಳಿಸಿ 48 ವಿದ್ಯಾರ್ಥಿಗಳು ಶೇ.90 ರಷ್ಟು ಉತ್ತೀರ್ಣರಾಗಿದ್ದು ಡಿಸ್ಟಿಂಕ್ಷನ್ ನಲ್ಲಿ 70 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು

ಫಸ್ಟ್‌ಕ್ಲಾಸ್ ನಲ್ಲಿ 98 ವಿದ್ಯಾರ್ಥಿಗಳು ಪಾಸಾಗಿರುತ್ತಾರೆ

ಚಂದ್ರಶೇಖರ್ ಎಚ್ 600ಕ್ಕೆ 588 ಶೇ. 98% ರಷ್ಟು ಗಳಿಸಿ ಜಿಲ್ಲೆಗೆ ದ್ವಿತೀಯ ತಾಲ್ಲೂಕಿಗೆ ಪ್ರಥಮ ಸ್ಪಂದನಾ ಹೂಗಾರ 97% ಹಾಗೂ ಬಸವರಾಜ ಕೆ. 97% ಈ ಇಬ್ಬರೂ ದ್ವಿತೀಯ ಸ್ಥಾನ ಗಳಿಸಿದ್ದು ತೃತೀಯಾ ಸ್ಥಾನವನ್ನು ಇಬ್ಬರೂ ವಿದ್ಯಾರ್ಥಿಗಳು 96% ತೇಜಸ್ವಿನಿ, ಚರಣ್.ಕೆ ಅಷ್ಟೇ ಅಲ್ಲದೆ ಕನ್ನಡದಲ್ಲಿ 100 ಕ್ಕೆ 100 ಅಂಕವನ್ನು ಇಬ್ಬರು ಗಳಿಸಿದ್ದಾರೆ.

ಭೌತಶಾಸ್ತ್ರದಲ್ಲಿ 5 ಜನ 100 ಕ್ಕೆ ವಿದ್ಯಾರ್ಥಿಗಳು ಜೀವಶಾಸ್ತ್ರ 3 ವಿದ್ಯಾರ್ಥಿಗಳು ಗಣಿತದಲ್ಲಿ 8 ಜನ ವಿದ್ಯಾಥಿಗಳು 100ಕ್ಕೆ 100 ಗಣಕ ವಿಜ್ಞಾನದಲ್ಲಿ 7 ವಿದ್ಯಾರ್ಥಿಗಳು 100 ಕ್ಕೆ 100ಗಳಿಸಿ ಕಾಲೇಜಿಗೆ ಹಾಗೂ ಪೋಷಕರಿಗೆ ಗೌರವ ತಂದಿರುವ ಎಲ್ಲಾ ಮಕ್ಕಳಿಗೆ ಹಾಗೂ ಉಪನ್ಯಾಸ ವೃಂದಕ್ಕೂ ಆಡಳಿತ ಮಂಡಳಿಯ ಅಧ್ಯಕ್ಷರರಾದ ಶ್ರೀ ರಾಮಚಂದ್ರ ರಾವ್ ಹಾಗೂ ಶ್ರೀಮತಿ ಸುಗುಣ ಅವರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ಶಾಲಾ ಮಕ್ಕಳ ವಿಶೇಷ ದಾಖಲಾತಿಗಾಗಿ ಜಾಗೃತಿ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ ಮುದಗಲ್

ಸಮೀಪದ ಜನತಾಪುರ ಸರಕಾರಿ ಹಿರಿಯ ಪ್ರಾಥಮಿಕ ಶಾಲಾ ಶಿಕ್ಷಕರು ಹಾಗೂ ವಿಧ್ಯಾರ್ಥಿಗಳು ಗ್ರಾಮದಲ್ಲಿ ಗುರುವಾರ ಸಂಚರಿಸಿ ಶೈಕ್ಷಣಿಕ ವರ್ಷದ ಪ್ರವೇಶ ದಾಖಲಾತಿ ಆಂದೋಲನದ ವಿಶೇಷ ಜಾಗೃತಿ ಮೂಢಿಸಿದರು.

2026-27ನೇ ಸಾಲಿನ ಶೈಕ್ಷಣಿಕ ಪ್ರವೇಶಕ್ಕಾಗಿ ಮಕ್ಕಳನ್ನು ಒಂದನೇ ತರಗತಿ ದಾಖಲಿಸಲು ಜನತಾಪುರ ಗ್ರಾಮದ ಎಲ್ಲಾ ಓಣೆಗಳಲ್ಲಿ ವಿದ್ಯಾರ್ಥಿಗಳೊಂದಿಗೆ ಸಂಚರಿಸಿ ಶಿಕ್ಷಣದ ವಿವಿಧ ಘೋಷ ವ್ಯಾಕ್ಯಗಳನ್ನು ಹಿಡಿದು ಜಾಗೃತಿ ಮಾಡಿ ಹಾಗೂ ಪ್ರಮುಖ ಸ್ಥಳಗಳಲ್ಲಿ, ಅಂಗಡಿಗಳಲ್ಲಿ, ಶಾಲೆಗಳಲ್ಲಿ ಉಚಿತವಾಗಿ ದೊರೆಯುವ ಶೈಕ್ಷಣಿಕ ಸೌಲಭ್ಯಗಳ ಬಿತ್ತಿ ಚಿತ್ರಗಳನ್ನು ಅಂಟಿಸಿ ಗ್ರಾಮಸ್ಥರಲ್ಲಿ ಸರಕಾರಿ ಶಾಲೆಗಳ ಬಗ್ಗೆ ಜಾಗೃತಿ ಮೂಡಿಸಿದರು. ಬಳಿಕ ಶಾಲಾ ಸಹ ಶಿಕ್ಷಕ ಮೌನೇಶ ಎಂ. ಮಾತನಾಡಿದ ಅವರು ಸರಕಾರಿ ಶಾಲೆಗಳಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡುತ್ತಿದ್ದು, ಸರಕಾರ ಮತ್ತು ಶಿಕ್ಷಣ ಇಲಾಖೆ ಜೊತೆಗೆ ಸಂಘ ಸಂಸ್ಥೆಗಳು ನಮ್ಮ ಶಾಲೆಗಳಿಗೆ ಶೈಕ್ಷಣಿಕ ಕೊಡುಗೆಗಳನ್ನು ನೀಡಿದ್ದು, ಸ್ಥಳೀಯ ಶಾಲಾ ಮಕ್ಕಳು ಇದರ ಸದುಪಯೋಗ ಪಡೆದುಕೊಂಡು ಉತ್ತಮ ಶಿಕ್ಷಣ ಪಡೆದುಕೊಳ್ಳಲು ತಿಳಿಸಿದರು.

ಅಭಿಯಾನದಲ್ಲಿ ಎಸ್ಡಿಎಂಸಿ ಅಧ್ಯಕ್ಷ ಅಮರೇಗೌಡ ಪಾಟೀಲ್, ಸಹ ಶಿಕ್ಷಕರು ರವಿಕುಮಾರ, ಅಥಿತಿ ಶಿಕ್ಷಕಿಯರು ಜ್ಯೋತಿ, ಕುಮಾರಿ ಗೀತಾ ಸೇರಿದಂತೆ



# ಅರ್ಥಪೂರ್ಣವಾಗಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿಗೆ ನಿರ್ಧಾರ



• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ವಿವಿಧ ಇಲಾಖೆಗಳು ಹಾಗೂ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಇದೇ ಏಪ್ರಿಲ್ 14 ರಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಅವರ ಅಧ್ಯಕ್ಷತೆಯಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಆಚರಿಸುವ ಕುರಿತು ಇತ್ತೀಚೆಗೆ ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು. ಅಂದು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಬೆಳಿಗ್ಗೆ 11 ಗಂಟೆಗೆ ಈ ಜಯಂತಿ ಆಯೋಜಿಸಲು, ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿ ಗೌರವ ಅರ್ಪಿಸಲು, ನಿರ್ಧರಿಸಲಾಯಿತು. ಅದರಂತೆ

ವೇದಿಕೆ, ಆಸನದ ವ್ಯವಸ್ಥೆ, ಶಿಷ್ಟಾಚಾರದಂತೆ ಗಣ್ಯರನ್ನು, ಉಪನ್ಯಾಸಕರನ್ನು ಆಹ್ವಾನಿಸಲು ಸಭೆಯಲ್ಲಿ ನಿರ್ಧರಿಸಲಾಯಿತು. ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು, ಕಾರ್ಯಕ್ರಮದ ಸಂದರ್ಭದಲ್ಲಿ , ಸೂಕ್ತ ಪೊಲೀಸ್ ಬಂದೋಬಸ್ತ್,

ವೇದಿಕೆ ಸಿದ್ಧತೆ ನೋಡಿಕೊಳ್ಳಲು , ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿ,ಆಮಂತ್ರಣ ಪತ್ರಿಕೆ ವಿತರಿಸುವ ವ್ಯವಸ್ಥೆಗೆ,ಮೆರವಣಿಗೆಗೆ ಮೂರು ಕಲಾ ತಂಡಗಳನ್ನು ಒದಗಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲೆಯ ತಾಲೂಕ ಮಟ್ಟದಲ್ಲಿ

ಶಾಲಾ, ಕಾಲೇಜು, ಗ್ರಾಮ ಪಂಚಾಯತ್, ವಿವಿಧ ಕಚೇರಿ

ಗಳಲ್ಲಿ ಈ ಜಯಂತಿ ಆಚರಣೆ, ಮುಖ್ಯ ಕಾರ್ಯಕ್ರಮಕ್ಕೆ, ಅಗತ್ಯ ಸಿದ್ಧತೆ ಮಾಡಿಕೊಳ್ಳಲು

ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚಿಸಿದರು. ಅಂದು ಡಾ..ಬಿ.ಆರ್.ಅಂಬೇಡ್ಕರ್ ಭವನದ ಮುಂದುಗಡೆ ರಸ್ತೆ ಮತ್ತು ಚರಂಡಿ ಸ್ವಚ್ಛತೆಗೆ ನಗರಸಭೆಯಿಂದ ಕ್ರಮ ಕೈಗೊಳ್ಳಬೇಕು. ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಡಾ.ಬಿ.ಆರ್. ಅಂಬೇಡ್ಕರ್ ಚೌಕ್ ನಲ್ಲಿ ಹಾಗೂ ಕೋಟಗಾರ ವಾಡಾದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಮೂರ್ತಿಗೆ ಬೆಳಿಗ್ಗೆ 9-30ಕ್ಕೆ ವಿವಿಧ ಗಣ್ಯರಿಂದ ಮಾಲಾರ್ಪಣೆ ಹಾಗೂ ಗೌರವ ಅರ್ಪಣೆ ನಡೆಯಲಿದ್ದು, ಅವಶ್ಯಕ ಸಿದ್ಧತೆ ಮಾಡಿಕೊಳ್ಳುವಂತೆ ಅವರು ಸೂಚಿಸಿದರು. ಕಾರ್ಯಕ್ರಮದಲ್ಲಿ ಎಸ್ ಎಸ್ ಎಲ್ ಸಿ ಹಾಗೂ ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಹಾಗೂ ಸಮಾಜ ಸೇವಕರಿಗೆ ಸನ್ಮಾನಿಸಬೇಕು. ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಐವರು ವ್ಯಕ್ತಿಗಳನ್ನು ಆಯ್ಕೆ ಮಾಡಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿ,ಈ ಕಾರ್ಯಕ್ರಮದ ದಿನದಂದು ಡಾ. ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಸಾರ್ವಜನಿಕ ಆರೋಗ್ಯ ತಪಾಸಣೆ ಮೇಳ ಆಯೋಜಿಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಸೂಚಿಸಿದರು. ಸಮಾಜದ ಮೂಲಕ ಹಮ್ಮಿಕೊಳ್ಳಲಾಗುವ ಮೆರವಣಿಗೆ ಕಾರ್ಯಕ್ರಮದ ಬಗ್ಗೆ ಮುಂಚಿತವಾಗಿ ಜಿಲ್ಲಾಡಳಿತಕ್ಕೆ ಮಾಹಿತಿ ನೀಡಲು ಸೂಚಿಸಿದರು. ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಚನ್ನಬಸವ ಸ್ವಾಗತಿಸಿದರು. ಸಾಮಾಜದ ಮುಖಂಡರಾದ ಮರೆಪ್ಪ ಚಟ್ಟರ್ಕರ್, ಸೈದಪ್ಪ ಕೋಳೂರ, ಪರಶುರಾಮ ಒಡೆಯರ್, ವಿಜಯಕುಮಾರ ಶಿರಗೋಳ, ಮಲ್ಲಿಕಾರ್ಜುನ ಕ್ರಾಂತಿ, ಚಂದಪ್ಪ ಕಟ್ಟಿಮನಿ ಇತರರು ಉಪಸ್ಥಿತರಿದ್ದರು.

# ಇಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ

• **ಮಲ್ಲಮ್ಮ ನುಡಿ ವಾರ್ತೆ ಬೀದರ**

ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಜಿಲ್ಲಾ ಪಂಚಾಯತ ಬೀದರ ವತಿಯಿಂದ ಏಪ್ರಿಲ್.10 ರಂದು ಬೆಳಿಗ್ಗೆ 11ಕ್ಕೆ ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರ ಬೀದರದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಆಯೋಜಿಸಲಾಗಿದೆ.

ಕಾರ್ಯಕ್ರಮದ ಉದ್ಘಾಟನೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಮಾಡಲಿದ್ದಾರೆ.

ಕಾರ್ಯಕ್ರಮದ ಘನ ಉಪಸ್ಥಿತಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಐಟಿ ಮತ್ತು ಬಿಟಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಪ್ರಿಯಾಂಕ್ ಖರ್ಗೆ ಹಾಗೂ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರಾದ ಶರಣಪ್ರಕಾಶ ಪಾಟೀಲ ಅವರುಗಳು ವಹಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆ ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ಅವರು ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಬೀದರ ಲೋಕಸಭಾ ಸಂಸದರಾದ ಸಾಗರ ಈಶ್ವರ ಖಂಡ್ರೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ಬಿ.ನಾರಾಯಣರಾವ, ಔರಾದ(ಬಾ) ಶಾಸಕ ಪ್ರಭು ಬಿ.ಚವ್ಹಾಣ, ಬಸವಕಲ್ಯಾಣ ಶಾಸಕ ಶರಣು ಸಲಗರ, ಬೀದರ ದಕ್ಷಿಣ ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಹುಮನಾಬಾದ ಶಾಸಕ ಡಾ.ಸಿದ್ದಲಿಂಗಪ್ಪ ಎನ್.ಪಾಟೀಲ್, ವಿಧಾನ ಪರಿಷತ್ ಶಾಸಕರುಗಳಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ ಜಿ.ನಮೋಶಿ,

ಭೀಮರಾವ ಬಿ.ಪಾಟೀಲ, ಡಾ.ಎಂ.ಜಿ.ಮೂಳೆ ಮತ್ತು ಅಧ್ಯಕ್ಷರು ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕೃಷ್ಣ ಮೇಲ್ದಂಡೆ ಯೋಜನೆ (ಕಾಡಾ) ಭೀಮರಾಯನಗುಡಿ ಕಲಬುರಗಿಯ ಬಾಬು ಹೊನ್ನನಾಯ್ಕ, ಬೀದರ ಮಹಾನಗರ ಪಾಲಿಕೆಯ ಅಧ್ಯಕ್ಷ ಮಹಮ್ಮದ ಗೌಸ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಸಮಾಜ ಕಲ್ಯಾಣ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಬೆಂಗಳೂರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ಆಡಳಿತಾಧಿಕಾರಿಗಳು, ಜಿಲ್ಲಾ ಪಂಚಾಯತ, ಬೀದರನ ಡಿ.ರಂದಿಪ್, ಬೆಂಗಳೂರು ರಾಷ್ಟ್ರೀಯ ಜೀವನೋಪಾಯ ಅಭಿಯಾನ ಅಭಿಯಾನ ನಿರ್ದೇಶಕರಾದ ವಾಸಿರೆಡ್ಡಿ ವಿಜಯಾ ಜ್ಯೋತ್ಸಾನಾ ಅವರುಗಳು ಭಾಗವಹಿಸಲಿದ್ದಾರೆ.

# ಯೋಜನೆ ಅನುಷ್ಠಾನ ವಿಳಂಬ ಸಲ್ಲದು ಅಧಿಕಾರಿಗಳಿಗೆ ಜಗದೀಶ್ ಕಟ್ಟುನಿಟ್ಟಿನ ಸೂಚನೆ



• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ

ಜಿಲ್ಲೆಯಲ್ಲಿ ನಡೆಯುತ್ತಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳು ಮತ್ತು ನೀರು ಸರಬರಾಜು ಯೋಜನೆಗಳನ್ನು ನಿಗದಿತ ಸಮಯದೊಳಗೆ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು. ಯಾವುದೇ ಕಾರಣಕ್ಕೂ ತಾಂತ್ರಿಕ ನೆಪವೊಡ್ಡಿ ವಿಳಂಬ ಮಾಡಬಾರದು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಕೆ. ಜಿ ಜಗದೀಶ್ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಗುರುವಾರ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹೊಸಪೇಟೆ ಸೇರಿದಂತೆ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಅನುಷ್ಠಾನಗೊಳ್ಳುತ್ತಿರುವ ನೀರು ಸರಬರಾಜು ಯೋಜನೆಗಳ ಪ್ರಗತಿಯನ್ನು ಪರಿಶೀಲಿಸಿದ ಅವರು, ಖಾಸಗಿ ವ್ಯಕ್ತಿಗಳು ಅಥವಾ ಸಂಸ್ಥೆಗಳು ಲಾಭದ ಉದ್ದೇಶದಿಂದಲೇ ಕೆಲಸ ಮಾಡುತ್ತಾರೆ. ಆದ್ದರಿಂದ ಯಾವುದೇ ಕಾಮಗಾರಿ ಅನುಷ್ಠಾನಗೊಳಿಸಬೇಕಾದರೆ ಗುಣಮಟ್ಟ ಕಾಯ್ದುಕೊಳ್ಳಬೇಕು. ಕೆಲಸದಲ್ಲಿ ವಿಳಂಬವಾದರೆ ಅಥವಾ ಗುಣಮಟ್ಟದಲ್ಲಿ ರಾಜಿ ಮಾಡಿಕೊಂಡರೆ ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು. ಈ ನಿಟ್ಟಿನಲ್ಲಿ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸಬೇಕು. ಜಿಲ್ಲೆಯ ವಿವಿಧ ಭಾಗಗಳಲ್ಲಿ ನಡೆಯುತ್ತಿರುವ ಹಲವು ಕಾಮಗಾರಿಗಳು ಅನುದಾನದ ಕೊರತೆ ಹಾಗೂ ನಾನಾ ಕಾರಣಗಳಿಂದ ಕುಡಿಯುವ ನೀರು ಸರಬರಾಜು ಯೋಜನೆ ಮತ್ತು ಇತರೆ ಅಭಿವೃದ್ಧಿ ಕಾಮಗಾರಿಗಳ ಪ್ರಗತಿಯಲ್ಲಿ ವಿಳಂಬವಾಗುತ್ತಿವೆ. ಕೂಡಲೇ ಸಂಬಂಧಪಟ್ಟ ಮೇಲುಸ್ತುವಾರಿ ಅಧಿಕಾರಿಗಳೊಂದಿಗೆ ಅಥವಾ ನಮ್ಮೊಂದಿಗೆ ಪತ್ರ ವ್ಯವಹಾರ ನಡೆಸಿ ಪರಿಹಾರ ಕಂಡುಕೊಳ್ಳಬೇಕು. ಅದಷ್ಟೇ ಅಲ್ಲದೇ ಅಧಿಕಾರಿಗಳೊಂದಿಗೆ ಚರ್ಚಿಸಿ ಬಾಕಿ ಇರುವ ಬಿಲ್ ಪಾವತಿ ಮತ್ತು ತಾಂತ್ರಿಕ ಸಮಸ್ಯೆಗಳನ್ನು ಶೀಘ್ರವಾಗಿ ಬಗೆಹರಿಸಿಕೊಂಡು ಯೋಜನೆಗಳ ಚಾಲನೆಗೆ ತರಬೇಕು. ವಿಜಯನಗರ ಜಿಲ್ಲೆಯಾಗಿದ್ದರು ಸಹ ಇನ್ನೂ ಕೆಲವು ಕೇಚೇರಿಗಳು ಅಖಂಡ ಬಳ್ಳಾರಿ ಜಿಲ್ಲೆಯಲ್ಲಿಯೇ ಕಾರ್ಯ ನಿರ್ವಹಿಸುತ್ತಿವೆ. ಇದ-ರಿಂದ ಸಾರ್ವಜನಿಕರಿಗೆ ಸಕಾಲದಲ್ಲಿ ಗುಣಮಟ್ಟದ ಸೇವೆ ನೀಡಲು ಸಾಧ್ಯವಾಗುತ್ತಿಲ್ಲ. ಸಂಬಂಧಪಟ್ಟ ಅಧಿಕಾರಿಗಳು ಇಲಾಖೆಯ ಮುಖ್ಯಸ್ಥರೊಂದಿಗೆ ಪತ್ರ ವ್ಯವಹಾರ ನಡೆಸಿ ತಮಗೆ ಬೇಕಾದ ಕಟ್ಟಡ, ಕಚೇರಿ ಸ್ಥಳಾಂತರಕ್ಕೆ ಕ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶಿಸಿದರು. ಬೇಸಿಗೆ ಕಾಲ ಸಮೀಪಿಸುತ್ತಿರುವುದರಿಂದ ಜನರಿಗೆ ನೀರಿನ ತೊಂದರೆಯಾಗದಂತೆ ನೋಡಿಕೊಳ್ಳುವುದು ನಮ್ಮ ಪ್ರಥಮ ಆದ್ಯತೆಯಾಗಿದೆ. ಅಧಿಕಾರಿಗಳು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಬೇಕು. ವಿವಿಧ ಇಲಾಖೆಗಳಿಂದ ಅಭಿವೃದ್ಧಿ ಕಾರ್ಯಗಳಿಗೆ ಬಿಡುಗಡೆ-ಯಾದ ಅನುದಾನವನ್ನು ದುರ್ಬಳಕೆ ಮಾಡದೇ ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದರು.


ಈ ವೇಳೆ ಮಾತನಾಡಿದ ಜಿಲ್ಲಾ ಪಂಚಾಯತ್ ಸಿ ಇ ಓ ಅಕ್ರಮ್ ಷಾ ಪ್ರಸಕ್ತ ಆರ್ಥಿಕ ವರ್ಷದಲ್ಲಿ ಜಿಲ್ಲಾ ಪಂಚಾಯತ್ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ರೂ. 33777.93 ಲಕ್ಷ ಹಾಗೂ ತಾಲ್ಲೂಕು ಪಂಚಾಯತ್ ಗೆ ರೂ.82787.39 ಲಕ್ಷ ಸೇರಿ ಒಟ್ಟು ರೂ.116565.32 ಲಕ್ಷ ಹಂಚಿಕೆ ಮಾಡಲಾಗಿದೆ. ಈ ಪೈಕಿ ಲೋಕೋಪಯೋಗಿ ಇಲಾಖೆಗೆ ರುಣಟಿಜಜಜಿಟಿಜಜ.600 ಲಕ್ಷ, ಶಿಕ್ಷಣ ಇಲಾಖೆ 81450.28 ಲಕ್ಷ, ಆರೋಗ್ಯ ಇಲಾಖೆಗೆ ರೂ.1084.36 ಲಕ್ಷ, ಕುಟುಂಬ ಕಲ್ಯಾಣ ಇಲಾಖೆ 1452.33 ಲಕ್ಷ ಹೀಗೆ ಒಟ್ಟು 29 ಇಲಾಖೆಗಳಿಗೆ 116565.32 ಲಕ್ಷ ಹಂಚಿಕೆ ಮಾಡಲಾಗಿದೆ. ಹಾಗೆಯೇ ಜಿಲ್ಲೆಯ ಹರಪನಹಳ್ಳಿ ತಾಲ್ಲೂಕಿನಲ್ಲಿ ಸದ್ಯ ಹೆಚ್ಚಿನ ನೀರಿನ ಸಮಸ್ಯೆಯಾಗಿದ್ದು, ಖಾಸಗಿ ಕೊಳವೆ ಬಾವಿ ಹಾಗೂ ಟ್ಯಾಂಕರ್ ಮೂಲಕ ಸಮರ್ಪಕವಾಗಿ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಮಾದರಿ ಅಂಗನವಾಡಿ ಕಟ್ಟಡ ನಿರ್ಮಿಸಿ:

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ವತಿಯಿಂದ ಜಿಲ್ಲೆಯಲ್ಲಿ ಆಯ್ದ ಐದು ಸ್ಥಳಗಳಲ್ಲಿ ಮಕ್ಕಳಿಗೆ ಆಟೋಟಕ್ಕೆ ಪೂರಕವಾಗಿರುವಂತೆ ಕ್ರೀಡಾ ಪರಿಕರ ಅಳವಡಿಸುವ ಮೂಲಕ ಉತ್ತಮವಾದ ಮಾದರಿ ಅಂಗನವಾಡಿ ಕಟ್ಟಡ ನಿರ್ಮಿಸಲು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸೂಚನೆ ನೀಡಿದರು. ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಸಕಾರಾತ್ಮಕವಾಗಿ ಸ್ಪಂದಿಸಿದರು.

ಈ ವೇಳೆ ಜಿಲ್ಲಾ ಪಂಚಾಯತ್ ಸಿ ಇ ಓ ನೊಂಗ್ಜಾಯ್ ಮಹ್ಮದ್ ಅಲಿ ಅಕ್ರಮ್ ಷಾ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಕೆ. ತಿಮ್ಮಪ್ಪ, ಯೋಜನಾ ನಿರ್ದೇಶಕ ಅನ್ನದಾನಸ್ವಾಮಿ, ಗ್ರಾಮೀಣ ಕುಡಿಯುವ ಮತ್ತು ನೈರ್ಮಲ್ಯ ಇಲಾಖೆ ಇಂಜಿನಿಯರ್ ಎಸ್. ದೀಪಾ, ಡಿಡಿಪಿಐ ವೆಂಕಟೇಶ್ ರಾಮಚಂದ್ರಪ್ಪ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ನೇತ್ರಾವತಿ ಹುಚ್ಚಪ್ಪ ಅಧಿಕಾರ ಸ್ವೀಕಾರ



• ಮಲ್ಲಮ್ಮ ನುಡಿ, ಹಗರಿಬೊಮ್ಮನಹಳ್ಳಿ

ಪುರಸಭೆಅಧ್ಯಕ್ಷಸ್ಥಾನಕ್ಕೆಎಂ.ಮರಿರಾಮಪ್ಪ ರಾಜೀನಾಮೆ ನೀಡಿದ ಕಾರಣ ಪ್ರಸ್ತುತ ಉಪಾಧ್ಯಕ್ಷರಾದ ಸೆರೆಗಾರ್ ನೇತ್ರಾವತಿ ಹುಚ್ಚಪ್ಪ ಹಂಗಾಮಿ ಅಥವಾ ಪ್ರಭಾರಿ ಅಧ್ಯಕ್ಷರಾಗಿ ಅಧಿಕಾರವಹಿಸಿಕೊಂಡಿದ್ದಾರೆ. ಈಗ ಆಡಳಿತಾತ್ಮಕ ಕೆಲಸ ಕಾರ್ಯಗಳು ಸುಲಭವಾಗಿ ಜರುಗಲಿವೆ.

ಅಧ್ಯಕ್ಷ ಗಾದೆಗಾಗಿ ಈಗ ಆಟ ಶುರುವಾಯಿತು. ಪ್ರಸ್ತುತ ಅಧ್ಯಕ್ಷ ಗಾದೆಗಾಗಿ ನಾಲ್ಕು ಮುಸ್ಲಿಂ ಸದಸ್ಯರಲ್ಲಿ ಕುರ್ಚಿಗಾಗಿ ಮಿನಿ ಕದನ ಏರ್ಪಡಲಿದೆ. ರೇಷ್ಮಾ ಸಿಖಂದರ್, ಅಜೀಜುಲ್ಲ, ಖಾಜಾಬನ್ನಿ ಅಲ್ಲಭಕ್ಷಿ ಹಾಗೂ ನೆಲ್ಲು ಇಸ್ಮಾಯಿಲ್. ನೂತನ ಅಧ್ಯಯಕ್ಷರ ಅವಿರೋಧ ಆಯ್ಕೆ ಎಂದರೆ ಪರವಾಗಿಲ್ಲ. ಆದರೆ,

ಈ ನಾಲ್ಕು ಜನರಲ್ಲಿ ಪೈಪೋಟಿ ಬಿದ್ದರೆ, ಅಥವಾ ಚುನಾವಣೆ ಜರುಗಿದರೆ, ಪ್ರಾಯಶಃ ರೇಷ್ಮಾಸಿಖಂದರ್ ಹಾಗೂ ಅಜೀಜುಲ್ಲರ ನಡುವೆ ಪೈಪೋಟಿ ಶುರುವಾಗುವ ಲಕ್ಷಣಗಳು ಗೋಚರಿಸುತ್ತಿವೆ ಎಂದು ಸ್ಥಳೀಯ ರಾಜಕೀಯದಲ್ಲಿ ವಿಶ್ಲೇಷಿಸಲಾಗುತ್ತಿದೆ. ಒಂದುವೇಳೆ, ಅಜೀಜುಲ್ಲ ಅವರಿಗೆ ತಪ್ಪಬಹುದು. ಏಕೆಂದರೆ, ಅವರು ಈಗಾಗಲೇ ಗ್ರಾಮ ಪಂಚಾಯತಿ ಅಧ್ಯಕ್ಷರಾಗಿರುವ ದರಿಂದ ಅವರಿಗೆ ಅಧಿಕಾರವನ್ನು ನಿರಾಕರಿಸಲೂಬಹುದು ಎಂದು ರಾಜಕೀಯ ವಲಯದಲ್ಲಿ ಲೆಕ್ಕ ಹಾಕಲಾಗುತ್ತಿದೆ.. ಅದು ಬಿಟ್ಟರೆ, ಖಾಜಾಬನ್ನಿ ಅಲ್ಲಭಕ್ಷಿ ಹಾಗೂ ರೇಷ್ಮಾಸಿಖಂದರ್ ನಡುವೆ ಸ್ಪರ್ಧೆ ಏರ್ಪಡಬಹುದು. ಇನ್ನು ನೆಲ್ಲು ಇಸ್ಮಾಯಿಲ್ ನಾಲ್ಕನೇ ಆದ್ಯತೆ. ಏಕೆಂದರೆ, ಸ್ವತಃ ಅಧ್ಯಕ್ಷ ಗಾದೆ ಬಗ್ಗೆ ಅವರಿಗೇ ಆಸಕ್ತಿ ಇದ್ದಂತಿಲ್ಲ. ಅಥವಾ ವಯಸ್ಸು, ಮತ್ತಿನ್ನಿತರ ಕಾರಣಗಳು ಇರಬಹುದು. ಪರಿಸ್ಥಿತಿ ಯಾರು ಹಿತವರು ಈ ಮೂವರೊಳಗೆ..?

ಎಂಬಂತಾಗಿದೆ..? ಸ್ಪಷ್ಟವಾಗಿ ರೇಷ್ಮಾ, ಅಜೀಜುಲ್ಲ ಹಾಗೂ ಖಾಜಾಬನ್ನಿ ಅಲ್ಲಭಕ್ಷಿ ನಡುವೆ ಸ್ಪರ್ಧೆ ನಿಚ್ಚಳವಾಗಿ ಕಾಣುತ್ತಿದೆ.

ಅವಿರೋಧವಾಗಿ ಆಯ್ಕೆಯಾದರೆ ಅದು ಶಾಂತಿಯುತ ಬದಲಾವಣೆ. ಇಲ್ಲದೇ ಹೋದರೆ ಅದು ಬೇರೆ, ಬೇರೆ ರೂಪವನ್ನು ತಾಳಬಹುದು. ಯಾರೇ ಅಧ್ಯಕ್ಷರಾದರೂ ಹತ್ತು ತಿಂಗಳಿಗೆ ಒಬ್ಬರು ಮಾತ್ರ ಆಗಬಹುದು. ಈಗಾಗಲೇ ಹದಿನೇಳು ತಿಂಗಳು ಕಳೆದು ಹೋಗಿದೆ. ಹೆಚ್ಚು ಕಡಿಮೆ ಉಳಿಯುವುದು ಒಂದು ವರ್ಷ ಮಾತ್ರ. ಮಾಜಿ ಶಾಸಕರ ಮನೆ ಕಡೆಗೆ ಓಟ..! ?:ಯಾವಾಗ ತಾತ್ಕಾಲಿಕವಾಗಿ ಉಪಾಧ್ಯಕ್ಷರಾಗಿ ನೇತ್ರಾವತಿ ಹುಚ್ಚಪ್ಪ ಪ್ರಭಾರಿಯಾಗಿ ಅಧಿಕಾರವಹಿಸಿಕೊಂಡರೋ, ಅಲ್ಲಿಂದ ಕಾಂಗ್ರೆಸ್ ನಾಯಕರ

ನಡಿಗೆ ಮಾಜಿ ಶಾಸಕ ಭೀಮಾನಾಯ್ಕ ಮನೆ ಕಡೆ ಎಂಬಂತಾಗಿದೆ. ಈಗಾಗಲೇ ಭೀಮಾನಾಯ್ಕ ಪ್ರಭಾವದಿಂದ ಯಾರಾದರೂ ಒಬ್ಬರು ಅಧ್ಯಕ್ಷರಾಗಬಹುದಿತ್ತು. ಆದರೆ ನೈಜ ಚಿತ್ರಣವೇ ಬೇರೆಯಿದೆ. ಅದೇನೆಂದರೆ, ಹಿಂದಿನ ಅಧ್ಯಕ್ಷರು ಸುದೀರ್ಘ ಕಾಲದವರೆಗೆ ತಮ್ಮ ಅಧಿಕಾರ ಅನುಭವಿಸುತ್ತಿದ್ದಾಗ, ಉಳಿದ ಸದಸ್ಯರು ಭೀಮಾ ನಾಯ್ಕ ಬಗ್ಗೆ ವಾಚಾಮಗೋಚರವಾಗಿ ಬಯ್ದಿದ್ದಾರೆ ಎಂದು, ಅಂತಹವರ ಬಗ್ಗೆ ಭೀಮಾನಾಯ್ಕಗರಂ ಆಗಿದ್ದಾ-ರೆಂದು ಕಾಂಗ್ರೆಸ್ ವಲಯದಲ್ಲಿ ಮಾತಾಡಿಕೊಳ್ಳಲಾಗುತ್ತಿದೆ. ಹೀಗಾಗಿ ಭೀಮಾನಾಯ್ಕ ವಕ್ರದೃಷ್ಟಿ ಯಾರ ಮೇಲಿದೆಯೋ..? ಹಾಗೂ ಅವರ ಮಧುರ ನೋಟ ಯಾರ ಕಡೆ ಇದೆಯೋ..? ಎಂಬುದನ್ನು ಕಾದು ನೋಡಬೇಕಿದೆ. ಈ ನಾಲ್ಕು ಜನ ಮುಸ್ಲಿಂ ಸದಸ್ಯರ ನಡುವಿನ ಅಗ್ಗ ಜಗ್ಗಾಟದಿಂದ ಅನಿರ್ಧಿಷ್ಟ

ಅವಧಿಗೆ ನೇತ್ರಾವತಿ ಹುಚ್ಚಪ್ಪ ಅಧ್ಯಕ್ಷರಾಗಿ ಮುಂದುವರಿಯಬಹುದು. ಈ ಕಾರಣಕ್ಕಾಗಿ ಉಪಾಧ್ಯಕ್ಷರಿಗಿದು ಬಯಸದೇ ಬಂದ ಭಾಗ್ಯವಾಗಲೂ ಬಹುದು. ಅಂತೂ ಇಂತೂ ಮಾಜಿ ಅಧ್ಯಕ್ಷರು ಹಾಗೂ ಸದಸ್ಯರ ನಡುವೆ ಇದ್ದ ಇರಿಸು ಮುರಿಸು ಸದ್ಯಕ್ಕೆ ಉಪಶಮನವಾದಂತಿದೆ. ಅವಿರೋದವಾದರೆ ಓಕೆ.. ಚುನಾವಣೆಯಾದರೆ ಕುದುರೆ ವ್ಯಾಪಾರ ನಿಶ್ಚಿತ ಎಂದು ಜನಸಾಮಾನ್ಯರು ಮಾತಾಡಿಕೊಳ್ಳುತ್ತಿದ್ದಾರೆ.

ಈಗ್ಗೆ ಇಪ್ಪತ್ತು ದಿನಗಳಿಂದ ನಿಂತುಹೋಗಿದ್ದ ಕೆಲಸ, ಕಾಮಗಾರಿಗಳು, ಆಡಳಿತಾತ್ಮಕ ಕೆಲಸಗಳು ಪ್ರಭಾರಿ ಅಧ್ಯಕ್ಷರಿಂದ ಚಾಲನೆಗೊಳ್ಳುತ್ತಿರುವುದು ಜನರಲ್ಲಿ ಸಂತಸ ಮೂಡಿಸಿದೆ. ಏನೇಯಿರಲಿ, ನೂತನ ಅಧ್ಯಕ್ಷರ ಆಯ್ಕೆಯಲ್ಲಿ ಮಾಜಿ ಶಾಸಕ ಭೀಮಾನಾಯ್ಕ ಪಾತ್ರ ಎದ್ದು ಕಾಣುತ್ತಿದೆ.

# ಜನಗಣತಿ: ಮೂರು ದಿನದ ತರಬೇತಿ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ಪಟ್ಟಣದ ಸಿದ್ದರಾಮೇಶ್ವರ ಪದವಿ ಮಹಾ ವಿದ್ಯಾಲಯದಲ್ಲಿ ತಾಲೂಕಾಡಳಿತದ ವತಿಯಿಂದ ಭಾರತದ ಜನಗಣತಿ ಸಂಬಂಧ ಗಣತಿದಾರ ಮತ್ತು ಮೇಲ್ವಿಚಾರಕರಿಗೆ ಮೂರು ದಿನದ ತರಬೇತಿ ಕಾರ್ಯಾಗಾರ ಜರುಗಿತು.

ತಹಸೀಲ್ದಾರ ಅಮೀತಕುಮಾರ ಕಲಕರ್ಣಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕೋವಿಡ್ ಸಾಂಕ್ರಾಮಿಕ ರೋಗದಿಂದ ನಿಗದಿತ ಜನಗಣತಿ ಕಾರ್ಯ ಮುಂದೂಡಲಾಯಿತ್ತು. ಹೀಗಾಗಿ ಕೇಂದ್ರ ಸರಕಾರ 2026ರಲ್ಲಿ ಸಮಗ್ರ ಜನಗಣತಿ ಕಾರ್ಯ ನಡೆಸಲು ನಿರ್ಧರಿಸಿದೆ. ದೇಶದ ಅಭಿವೃದ್ಧಿ ಗೆ ಜನಗಣತಿ ಕಾರ್ಯಕೈಗೊಳ್ಳುವುದು ಅತ್ಯಂತ ಮುಖ್ಯವಾಗಿದೆ. ಪ್ರಜಾಪ್ರಭುತ್ವ

ರಾಷ್ಟದ ಅಭಿವೃದ್ಧಿ, ಜನತೆ ಏಳಿಗಾಗಿ ಯೋಜನೆರೂಪಿಸಲಾಗುತ್ತದೆ. ಅಭಿವೃದ್ಧಿ ಯೋಜನೆ ರೂಪಿಸುವ ಸಲುವಾಗಿ ಜನಗಣತಿ ಅತ್ಯವಶ್ಯಕವಾಗಿದೆ. ಈ ಸಲ ಸರಕಾರ ಎರಡು ಹಂತದಲ್ಲಿ ಜನಗಣತಿ


ನಡೆಸಲಾಗುತ್ತಿದೆ. ಮೊದಲಿಗೆ ಮನೆ ಗಣತಿ ಮತ್ತು ಎರಡನೇ ಹಂತದಲ್ಲಿ ಜನಗಣತಿ ಕಾರ್ಯ ಕೈಗೊಳ್ಳಲಾಗುತ್ತಿದೆ ಎಂದರು.

ವೇದಿಕೆಯಲ್ಲಿ ಎಸ್.ಎನ್. ಶಿವಣಕರ್, ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಶಶೀಕುಮಾರ ಬಿಡವೆ, ಪ್ರಾಚಾರ್ಯ ಡಾ.ರಮೇಶ ಚವ್ಹಾಣ, ಸಿಆರ್ ಪಿ ಮತ್ತು ಗಣತಿದಾರರು ಮತ್ತು ಮೇಲ್ವಿಚಾರಕರು ಇದ್ದರು. ತರಬೇತಿ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಡಾ.ರಮೇಶ ಚವ್ಹಾಣ, ಡಾ. ಶೇಕಪ್ಪ ಇದ್ದರು.



ಬಸವಕಲ್ಯಾಣ:- ತಾಲೂಕಿನ ಜೋಗೆವಾಡಿ ಗ್ರಾಮದಲ್ಲಿ ಅಖಂಡ ಹರಿನಾಮ ಸಪ್ತಾಹ ಕಾರ್ಯಕ್ರಮ ನಿಮಿತ್ಯ ಜರುಗಿದ ಕಾಲಾ ಕಾರ್ಯಕ್ರಮಕ್ಕೆ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಚಾಲನೆ ನೀಡಿದರು. ನಂತರ ಅಣ್ಣಪ್ಪ ಚಿತ್ತಂಪಲ್ಲಿ ಅವರ ನಿವಾಸದಲ್ಲಿ ಹಾರಕೂಡ ಶ್ರೀಗಳ ಪಾದಪೂಜೆ ಜರುಗಿತು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಗೋವಿಂದ ಗುರೂಜಿ, ಮೋಹನ ಪಂಚಾಳ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಗಾಂಧೀಜಿ ವಿಚಾರಧಾರೆ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣ




• ಮಲ್ಲಮ್ಮ ನುಡಿ ವಾರ್ತೆ, ಮಸ್ಕಿ

ಪಟ್ಟಣದಹೊರವಲಯದ ದೇವಾನಂಪ್ರಿಯ ಅಶೋಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಇದೇ ಏಪ್ರಿಲ್ 10ರಂದು 'ಮಹಾತ್ಮ ಗಾಂಧೀಜಿಯವರ ವಿಚಾರಗಳು, ಪ್ರಭಾವ ಮತ್ತು ಜಾಗತಿಕ ಪ್ರಸ್ತುತತೆ' ಎಂಬ ವಿಷಯದ ಕುರಿತು ಒಂದು ದಿನದ ರಾಷ್ಟ ಮಟ್ಟದ ವಿಚಾರ ಸಂಕಿರಣ ಆಯೋಜಿಸಲಾಗಿದೆ ಎಂದು ಪ್ರಾಂಶುಪಾಲರಾದ ಡಾ. ಮಹಾಂತಗೌಡ ಪಾಟೀಲ್ ತಿಳಿಸಿದ್ದಾರೆ.

ದೇವಾನಂಪ್ರಿಯ ಅಶೋಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರಿನ ಕರ್ನಾಟಕ ಗಾಂಧೀ ಸ್ಮಾರಕ ನಿಧಿ ಹಾಗೂ ಕಾಲೇಜಿನ ಆಂತರಿಕ ಗುಣಮಟ್ಟ ಭರವಸೆ ಕೋಶದ (IQAC) ಸಂಯುಕ್ತಾಶ್ರಯದಲ್ಲಿ ಈ ಕಾರ್ಯಕ್ರಮ ನಡೆಯಲಿದೆ.

ಕಲಬುರಗಿಯ ಕಡಗಂಚಿ ಕೇಂದ್ರೀಯ ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಪ್ರೊ.ಬಸವರಾಜ ಕೊಡಗುಂಟಿ ಅವರು ವಿಚಾರ ಸಂಕಿರಣವನ್ನು ಉದ್ಘಾಟಿಸಲಿದ್ದಾರೆ. ಮಹಾರಾಷ್ಟದ ಸೊಲ್ಲಾಪುರದ ಹರಿಭಾಯಿ ದೇವಕರಣ ಕಾಲೇಜಿನ ಹಿಂದಿ ವಿಭಾಗದ ಪ್ರೊ. ಧನ್ಯಕುಮಾರ ಜಿನಪಾಲ ಬಿರಾಜದಾರ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ವಿವಿಧ ವಿಷಯಗಳ ನುರಿತ ತಜ್ಞರಿಂದ ಒಟ್ಟು ಮೂರು ಗೋಷ್ಠಿಗಳು ನಡೆಯಲಿವೆ.

ವಿಚಾರ ಸಂಕಿರಣದಲ್ಲಿ ಭಾಗವಹಿಸುವ ಪ್ರಾಧ್ಯಾಪಕರು ಹಾಗೂ ಸಂಶೋಧಕರಿಗೆ ನಿಯೋಜಿತ ಕಾರ್ಯದ (ಔಔಆ) ಸೌಲಭ್ಯವಿರುತ್ತದೆ. ವಿದ್ಯಾರ್ಥಿಗಳು, ಸಂಶೋಧಕರು, ವಿಷಯ ಆಸಕ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ವಿಚಾರ ವಿನಿಮಯದ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಸಂಘಟನಾ ಸಮಿತಿಯು ಪತ್ರಿಕಾ ಪ್ರಕಟಣೆಯಲ್ಲಿ ಕೋರಿದೆ.

# ಸಿ.ಪಿ.ಐ ಶ್ರೀಕಾಂತರವರಿಗೆ ಯುಗಾದಿ ವಿಶೇಷಾಂಕ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ, ಕಮಲನಗರ

ಕಮಲನಗರ ಪೊಲೀಸ ಠಾಣೆ ಸಿ.ಪಿ.ಐ ಶ್ರೀಕಾಂತ ಅಲ್ಲಾಪುರೆ ಸರ್ ಅವರಿಗೆ ಅವರ ಕಚೇರಿಯಲ್ಲಿ ಭೇಟಿ ನೀಡಿ, ಮಲ್ಲಮ್ಮ ನುಡಿ ದಿನ ಪತ್ರಿಕೆ ಹೊರತಂದ ಯುಗಾದಿ ವಿಶೇಷಾಂಕ ವಿತರಣೆ ಮಾಡಲಾಯಿತು.

ಯುಗಾದಿ ಹಬ್ಬದ ಪ್ರಯುಕ್ತ ಹೊರತಂದ ಈ ವಿಶೇಷಾಂಕವು ಯುಗಾದಿ ಹಬ್ಬದ ಮತ್ತು ಇನ್ನಿತರ ಉಪಯುಕ್ತ ಮಾಹಿತಿ ಹೊಂದಿದೆ ಎಂದು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಪತ್ರಿಕೆಯ ಕಮಲನಗರ ತಾಲೂಕ ವರದಿಗಾರರಾದ ಪರಮೇಶ ರಾಂಪುರೆ ಉಪಸ್ಥಿತರಿದ್ದರು.

# ಚಾಲನಾ ತರಬೇತಿ, ಲಕ್ಷ್ಮಣಗೆ ದ್ವಿತೀಯ ಸ್ಥಾನ

• ಮಲ್ಲಮ್ಮ ನುಡಿ ವಾರ್ತೆ, ಮಸ್ಕಿ

ಗೃಹ ರಕ್ಷಕ ದಳ ಹಾಗೂ ಪೌರ ರಕ್ಷಣಾ ಅಕಾಡೆಮಿ ಕೇಂದ್ರ ಕಛೇರಿ ಬೆಂಗಳೂರಿನಲ್ಲಿ ನಡೆದ ನಿಸ್ತಂತು ಚಾಲನಾ ತರಬೇತಿಯಲ್ಲಿ ಎರಡನೇ ಸ್ಥಾನ ಪಡೆದ ಲಕ್ಷ್ಮಣ ಮಡಿವಾಳ ಮಸ್ಕಿ ಯವರಿಗೆ ಇಂದು ಶ್ರೀಮತಿ ಪದ್ಮಾಷಿ ಟಿ.ಎಸ್.ಉಪಾ ಸಮಾದೇಷ್ಟರು ಗೃಹ ರಕ್ಷಕದಳ ಹಾಗೂ ಪೌರ ರಕ್ಷಣಾ ಅಕಾಡೆಮಿ ಬೆಂಗಳೂರು ರವರು ಬೆಳ್ಳಿ ಪದಕ ಹಾಗೂ ಪ್ರಶಂಸಿಯ ಪತ್ರ ನೀಡಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಶ್ರೀಮತಿ ಪದ್ಮಾಷಿ ಟಿ.ಎಸ್.ಉಪಾ ಸಮಾದೇಷ್ಟರು ಗೃಹ ರಕ್ಷಕದಳ ಹಾಗೂ ಪೌರರಕ್ಷಣಾ ಅಕಾಡೆಮಿ ಬೆಂಗಳೂರು ಹಾಗೂ ಉಮಾಪತಿ ಪಿಎ[illegible] ನಿಸ್ತಂತು ಚಾಲನಾ ತರಬೇತಿ ಬೋಧಕರು ಹಾಗೂ ಗೃಹ ರಕ್ಷಕದಳ ಬೋಧಕರು, ಸೈನಿಕ ತರಬೇತಿದಾರರು ಹಾಗೂ ಕರ್ನಾಟಕ ರಾಜ್ಯದ 31 ಜಿಲ್ಲೆಯ ಗೃಹ ರಕ್ಷಕದಳದ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಜಿಲ್ಲಾದ್ಯಂತ ಸಮರ್ಪಕ ನೀರು ಪೂರೈಕೆಯಾಗಲಿ: ಜಿಲ್ಲಾಧಿಕಾರಿ

• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ



ಕೊಪ್ಪಳ ಜಿಲ್ಲೆಯ ಪಟ್ಟಣ, ನಗರ ಪ್ರದೇಶ ಮತ್ತು ಎಲ್ಲಾ ಗ್ರಾಮ ಪಂಚಾಯತ್‌ಗಳು ಸೇರಿದಂತೆ ಜಿಲ್ಲೆಯಾದ್ಯಂತ ಯಾವುದೇ ಕಡೆಗಳಲ್ಲಿ ಕಡಿಯುವ ನೀರಿನ ಸಮಸ್ಯೆಯಾಗಬಾರದು. ಬೇಸಿಗೆಯ ಈ ಅವಧಿಯಲ್ಲಿ ಕುಡಿಯುವ ನೀರು ಪೂರೈಕೆಗೆ ಮೊದಲಾದ್ಯತೆ ನೀಡಬೇಕು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಬಿ. ಇಟ್ನಾಳ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಜಿಲ್ಲಾ ಪಂಚಾಯತ್‌ನ ಜೆ.ಹೆಚ್. ಪಟೇಲ್ ಸಭಾಂಗಣದಲ್ಲಿ ಏಪ್ರೀಲ್ 8ರಂದು ಕೊಪ್ಪಳ ಸೇರಿದಂತೆ ವಿವಿಧ ತಾಲೂಕಿನ ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಮತ್ತು ವಿವಿಧ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಗ್ರಾಮ ಪಂಚಾಯತ್ ವ್ಯಾಪ್ತಿಯ ಯಾವುದೇ ಹಳ್ಳಿಗಳಲ್ಲಿ ಕುಡಿಯುವ ನೀರಿನ ಬವಣೆ ಎದುರಾಗಬಹುದು ಎಂಬುದು ಗೊತ್ತಾದ ಕೂಡಲೇ ಅಲ್ಲಿ ಕುಡಿಯುವ ನೀರು ಸರಬರಾಜಿಗೆ ನ್ಯಾಯ ವ್ಯವಸ್ಥೆ ಮಾಡಿಕೊಂಡಿರಬೇಕು. ಅಂತಹ ಕಡೆಗಳಲ್ಲಿ ಮುಂಚಿತವಾಗಿಯೇ ಖಾಸಗಿ ಬೋರವೆಲ್ ಗುರುತಿಸಬೇಕು. ಮಾಲೀಕರೊಂದಿಗೆ ಮುಂಚಿತವಾಗಿಯೇ ಒಪ್ಪಂದ ಪತ್ರ ಮಾಡಿಕೊಂಡಿರಬೇಕು. ಬೋರವೆಲ್ ಮಾಲೀಕರು ಒಪ್ಪದಿದ್ದಲ್ಲಿ ಜಿಲ್ಲಾಡಳಿತದ ಗಮನಕ್ಕೆ ತರಬೇಕು ಎಂದು ಜಿಲ್ಲಾಧಿಕಾರಿಗಳು ಆಯಾ ಪಿಡಿಓಗಳಿಗೆ ಸೂಚನೆ ನೀಡಿದರು.

ಬೇರೆ ಬೇರೆ ಪತ್ರಿಕೆಗಳಲ್ಲಿ ನೀರಿನ ಬವಣೆ ಬಗ್ಗೆ ವರದಿಯಾಗುತ್ತಿವೆ. ಇದನ್ನು ಗಮನಿಸಿದ್ದೀರಾ ಎಂದು ಅಧಿಕಾರಿಗಳಿಗೆ ಕೇಳಿದ ಜಿಲ್ಲಾಧಿಕಾರಿಗಳು, ಆಯಾ ತಾಲೂಕಿನ ತಹಸೀಲ್ದಾರರು ನಿರಂತರವಾಗಿ ಗ್ರಾಮ ಆಡಳಿತ ಅಧಿಕಾರಿಗಳಿಂದ ಮಾಹಿತಿ ಪಡೆದು-ಕೊಂಡು ಆಯಾ ಗ್ರಾಮಗಳ ಕುಡಿಯುವ ನೀರಿನ ಪರಿಸ್ಥಿತಿಯನ್ನು ಅವಲೋಕಿಸಬೇಕು ಎಂದು ಎಲ್ಲ ತಹಸೀಲ್ದಾರರಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಬೇಸಿಗೆಯ ಅವಧಿಯಲ್ಲಿ ಯಾವುದೇ ಹಳ್ಳಿಗಳಲ್ಲಿ ನೀರಿನ ಕೊರತೆಯಾಗದಂತೆ ನಿರಂತರ ನಿಗಾ ವಹಿಸಬೇಕು ಎಂದು ಎಲ್ಲ ಪಿಡಿಓಗಳಿಗೆ ಸೂಚನೆ ನೀಡಿದರು. ಎಲ್ಲ ಪಿಡಿಓಗಳ ಮೇಲೆ ಸೂಕ್ತ ಮೇಲ್ವಿಚಾರಣೆ ನಡೆಸಲು ತಾಪಂ ಇಓಗಳಿಗೆ ನಿರ್ದೇಶನ ನೀಡಿದರು.

*ಅನುದಾನ ಬೇಕಾದರೆ ತಿಳಿಸಿ:* ಪಂಚಾಯತವಾರು ಪರಿಶೀಲನೆ ವೇಳೆ, ಕುಡಿಯುವ ನೀರು ಪೂರೈಕೆಗೆ ಅನುದಾನ ಕೊರತೆ ಇದೆಯಾ? ಎಂದು ಕೇಳಿದ ಜಿಲ್ಲಾಧಿಕಾರಿಗಳು, ಪಂಚಾಯಿತಿಯ ಸ್ಥಳೀಯ ಅನುದಾನ, 15ನೇ ಹಣಕಾಸಿನ ಅನುದಾನ ಅಥವಾ ಕರ ವಸೂಲಾತಿಗೆ ಗಮನ ಹರಿಸಿ ಅನುದಾನ ಲಭ್ಯತೆಗೆ ಒತ್ತು ಕೊಡಬೇಕು. ಅನುದಾನ ಇಲ್ಲ ಎಂದು ನೆಪ ಹೇಳಿ ನಿರ್ಲಕ್ಷ್ಯ ಮಾಡಬಾರದು ಎಂದು ಎಚ್ಚರಿಕೆ ನೀಡಿದರು. ಅವಶ್ಯಕತೆ ಇದ್ದಲ್ಲಿ ಅನುದಾನ ಬೇಡಿಕೆಯ ಪತ್ರವನ್ನು ಕೂಡಲೇ ಸಲ್ಲಿಸಬೇಕು. ಪ್ರತಿಯೊಂದು ವಿಷಯವನ್ನು ಕಡ್ಡಾಯವಾಗಿ ಜಿಲ್ಲಾ ಪಂಚಾಯತ್ ಸಿಇಓ ಅವರ ಗಮನಕ್ಕೆ ತರಬೇಕು ಎಂದು ಜಿಲ್ಲಾಧಿಕಾರಿಗಳು ಪಿಡಿಓಗಳಿಗೆ ಸೂಚನೆ ನೀಡಿದರು. ಕುಡಿಯುವ ನೀರು ಪೂರೈಕೆಗೆ ಸಂಬಂಧಿಸಿದಂತೆ ಯಾವುದೇ ರೀತಿಯ ಹಣಕಾಸಿನ ಕೊರತೆಯಿಲ್ಲ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ನಿಯಮಿತವಾಗಿ ಸಭೆ ನಡೆಸಿ:* ಜಿಲ್ಲೆಯ ಎಲ್ಲ ಪಂಚಾಯತಗಳಲ್ಲಿ ಗ್ರಾಮ ನೀರು ನೈರ್ಮಲ್ಯ ಸಮಿತಿ ಸಭೆಗಳು ನಿಯಮಿತವಾಗಿ ನಡೆಯಬೇಕು. ಈ ಸಭೆಗಳಲ್ಲಿ ಕರ ವಸೂಲಾತಿ ಮತ್ತು ಕುಡಿಯುವ ನೀರಿನ ಪರಿಸ್ಥಿತಿಯ ಬಗ್ಗೆ ಗಂಭೀರವಾಗಿ ಚರ್ಚಿಸಿದಲ್ಲಿ ಯಾವುದೇ ಗ್ರಾಮಗಳಲ್ಲಿ ದಿಢೀರ್ ಎಂದು ನೀರಿನ ಸಮಸ್ಯೆ ಉದ್ಭವಿಸಲಾರದು ಎಂದು ಜಿಲ್ಲಾಧಿಕಾರಿಗಳು ಸಲಹೆ ಮಾಡಿದರು.

**ನೀರಿನ ಪರೀಕ್ಷೆ ಕಡ್ಡಾಯ**

ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್ ವ್ಯಾಪ್ತಿಯ ಮೇಲ್ಮಟ್ಟದ ಜಲಾಗಾರಗಳು ಸದಾಕಾಲ ಶುಚಿಯಾಗಿರುವಂತೆ ನೋಡಿಕೊಳ್ಳಬೇಕು. ಕಡ್ಡಾಯವಾಗಿ ಪರೀಕ್ಷಿಸಿಯೇ ಕುಡಿಯುವ ನೀರನ್ನು ಸರಬರಾಜು ಮಾಡಬೇಕು ಎಂದು ಜಿಲ್ಲಾಧಿಕಾರಿಗಳು, ಎಲ್ಲ ಪಿಡಿಓಗಳು ಮತ್ತು ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

*ನಗರ ಪ್ರದೇಶದಲ್ಲಿ ಸಮಸ್ಯೆ ಇಲ್ಲ:* ಕೊಪ್ಪಳ ಹಾಗೂ ಗಂಗಾವತಿ ನಗರಸಭೆ, ಕಾರಟಗಿ ಹಾಗೂ ಕುಷ್ಟಗಿ ಪುರಸಭೆ ಮತ್ತು ಯಲಬುರ್ಗಾ, ಕುಕನೂರ, ಕನಕಗಿರಿ, ಭಾಗ್ಯನಗರ, ತಾವರಗೇರಾ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡು ಬಂದಿಲ್ಲ ಎಂದು ಪೌರಾಯುಕ್ತರು, ಮುಖ್ಯಾಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

*ಕಾರಣ ಕೇಳಿ ನೋಟೀಸ್ ಜಾರಿ:* ತುಂಗಭದ್ರಾ ಡ್ಯಾಮನಿಂದ ಕಾಲುವೆಗೆ ನೀರು ಹರಿಸಿದ್ದು ಈ ಮೊದಲೇ ನೀಡಿದ ಸೂಚನೆಯಂತೆ ಕಾಲುವೆ ವ್ಯಾಪ್ತಿಯ ಕೆರೆಗಳ ಭರ್ತಿ ಕಾರ್ಯ ನಡೆದಿದೆಯೇ ಎಂದು ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಅಭಿಯಂತರರಿಗೆ ಪ್ರಶ್ನಿಸಿದ ಜಿಲ್ಲಾಧಿಕಾರಿಗಳು, ಕಾಲುವೆಗೆ ನೀರು ಹರಿಸಿದ್ದರು ಸಹ ಕೆರೆ ಭರ್ತಿಗೆ ನಿರ್ಲಕ್ಷ್ಯ ವಹಿಸಿದ ಆರ್‌ಡಬ್ಲ್ಯುಎಸ್‌ನ ಗಂಗಾವತಿಯ ಸಹಾಯಕ ಅಭಿಯಂತರರಿಗೆ ಕಾರಣ ಕೇಳಿ ನೋಟೀಸ್ ಜಾರಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳಾದ ಟಿ.ಕೃಷ್ಣಮೂರ್ತಿ, ಸಹಾಯಕ ಆಯುಕ್ತರಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ ಸೇರಿದಂತೆ ಕೊಪ್ಪಳ, ಗಂಗಾವತಿ, ಕಾರಟಗಿ, ಕನಕಗಿರಿ, ಕುಷ್ಟಗಿ, ಯಲಬುರ್ಗಾ, ಕುಕನೂರ ತಹಸೀಲ್ದಾರರು, ತಾಪಂ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ನಗರಾಭಿವೃದ್ಧಿ ಕೋಶ, ಸಣ್ಣ ನೀರಾವರಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಅಧಿಕಾರಿಗಳು, ಎಲ್ಲ ತಾಲೂಕಿನ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಇದ್ದರು.



ಹುಣಸೂರು ತಾಲೂಕಿನ ಕಸಬಾ ಪ್ರಾಥಮಿಕ ಕೃಷಿ ಪತಿನ ಸಹಕಾರ ಸಂಘದ ಇಬ್ಬರು ರೈತ ಸದಸ್ಯರಿಗೆ ಟ್ರಾಕ್ಟರ್ ಸಾಲ ಮತ್ತು ಐದು ರೈತ ಸದಸ್ಯರಿಗೆ ದ್ವಿಚಕ್ರ ವಾಹನವನ್ನು ಶಾಸಕ ಜಿಟಿ ಹರೀಶ್ ಗೌಡ ವಿತರಣೆ ಮಾಡಲಾಯಿತು ಈ ಸಂದರ್ಭದಲ್ಲಿ ಬ್ಯಾಂಕಿನ ಅಧ್ಯಕ್ಷರಾದ ದಿವಾಕರ್ ಎಸ್ ಉಪಾಧ್ಯಕ್ಷರಾದ ಪುಟ್ಟರಾಜು ನಿರ್ದೇಶಕರು ಜಿ ಟಿ ಹರೀಶ್ ಗೌಡ ಎಂ ಕೆ ವಾಸು ಗೌಡ ಹೆಚ್ಚ್ಸಿ ರವಿಕುಮಾರ್ ರುದ್ರಭೋವಿ ಮಹದೇವ್ ರಮೇಶ್ ಕೆಎಸ್ ಬೀರೇಶ್ ಗೀತಾ ಶಶಿಕಲಾಭಾಯಿ ಸುನಂದ ಸಂಘದ ಮುಖ್ಯ ಕಾರ್ಯನಿರ್ವಣ ಅಧಿಕಾರಿ ದೇವಪ್ಪ ಸಿಬ್ಬಂದಿ ವರ್ಗದವರು ಲಾಜರ್ ಯಸ್ ಏ ಎಸ್ ಕೃಷ್ಣ ಎಚ್ ದಿನೇಶ್ ಹೆಚ್ ಪವನ್ ಸಿ ಕಿರಣ್ ಕುಮಾರ್ ಹಾಜರಿದ್ದರು.

## 48 ದಿನಗಳ ಮಂಡಲ ಪೂಜೆ



**ಸುತ್ತೂರು:** ವರುಣಾ ಕ್ಷೇತ್ರಕ್ಕೆ ಸೇರಿರುವ ವರಕೋಡು ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ 48 ಗಡಿಗಳ ದೊರೆ ಎಂದೇ ಪ್ರಸಿದ್ದಿಯಾಗಿರುವ ಶ್ರೀ ಬೀರೇಶ್ವರ ದೇವಾ ಲಯದಲ್ಲಿ ಮೊದಲ ದಿನದಿಂದಲೂ 48 ದಿನಗಳ ಮಂಡಲ ಪೂಜಾ ಕಾರ್ಯಕ್ರಮಗಳು ಶ್ರದ್ಧಾಭಕ್ತಿಯಿಂದ ಜರುಗುತ್ತಿದೆ.

ಏಪ್ರಿಲ್ 4ರ ಗುರುವಾರವಾದ ಇಂದಿಗೆ 28 ದಿನಗಳು ಕಳೆದಿದ್ದು, ಪ್ರತಿದಿನವೂ ಸಾವಿರಾರು ಭಕ್ತಾದಿಗಳಿಗೆ ಅನ್ನದಾಸೋಹದ ಮಹತ್ಕಾರ್ಯ ನಡೆಯುತ್ತಿದೆ.

ಪ್ರತಿದಿನದ ದಾಸೋಹಕ್ಕೂ ಸುತ್ತಮುತ್ತಲಿನ ಗ್ರಾಮದ ಹಾಗೂ ಇತರೆ ಸ್ಥಳೀಯ ತಾಲೂಕಿನ ದಾನಿಗಳು, ಭಕ್ತಾದಿಗಳು ಒಂದೊಂದು ದಿನ ತಮ್ಮಿಂದಾಗುವ ಸೇವೆ ಮಾಡುವ ಮೂಲಕ ಬೀರೇಶ್ವರ ಸ್ವಾಮಿಯ ಆಶೀರ್ವಾದ ಪಡೆಯುತ್ತಿರುವುದು ಇಲ್ಲಿನ ಮತ್ತೊಂದು ವಿಶೇಷವಾಗಿದೆ.


ಇನ್ನೂ ಇಂದಿನ ದಾಸೋಹವನ್ನು ಕೆಂಪೇಗೌಡನ ಹುಂಡಿ ಗ್ರಾಮದ ದೇವರಗುಡ್ಡನ ಚಿಕ್ಕೇಗೌಡನ ಕುಟುಂಬದ ವತಿಯಿಂದ ಆಯೋಜಿಸಲಾಗಿದ್ದು, ನೆರೆದಿದ್ದ ಎಲ್ಲ ಭಕ್ತರಿಗೂ ಅನ್ನಸಂತರ್ಪಣೆ ಮಾಡಲಾಯಿತು.

ಈ ವೇಳೆ ಕೆಂಪೇಗೌಡನ ಹುಂಡಿ ಗ್ರಾಮದ ನಾಗೇಶ್ ಮತ್ತು ಸಹೋದರರಾದ ಸಿ ಕುಮಾರ ಹಾಗೂ ಮಂಜುನಾಥ್ ಅವರುಗಳು ಜಂಟಿಯಾಗಿ ಮಾಧ್ಯಮಗಳೊಂದಿಗೆ ಮಾತನಾಡಿ, 48 ಗಡಿಗಳ ದೊರೆಯಾಗಿರುವ ಶ್ರೀ ಬೀರೇಶ್ವರ ಸ್ವಾಮಿಯ ಸೇವೆ ಮಾಡಲು ನಮ್ಮೆಲ್ಲರಿಗೂ ಸಿಕ್ಕಿರುವ ಅವಕಾಶವಿದು.48 ದಿನಗಳ ಮಂಡಲ ಪೂಜೆ ಪ್ರತಿದಿನವೂ ವಿಶೇಷವಾಗಿ ಜರುಗುತ್ತಿದ್ದು, ಜೀರ್ಣೋದ್ದಾರದ ಬಳಿ ಇಂದಿಗೆ 28 ದಿನಗಳು ಕಳೆದಿವೆ. ಆದರೆ ಭಕ್ತರಲ್ಲಿ ಉತ್ಸಾಹ ಇಂದಿಗೂ ಕಳೆಗುಂದಿಲ್ಲ ಎಂದರಲ್ಲದೇ, ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಶ್ರೀ ಸ್ವಾಮಿಯ ದರ್ಶನ ಪಡೆದು ಕೃಪೆಗೆ ಪಾತ್ರರಾಗಬೇಕೆಂದು ಕೋರಿದರು.

ಮುಂದುವರೆದು ಮಾತನಾಡಿದ ಅವರು, ಇದೇ ಏಪ್ರಿಲ್ 20ರ ಸೋಮವಾರದಂದು ವಿಶೇಷ ನಾಟಕ ಪ್ರದರ್ಶನ ನಡೆಯಲಿದ್ದು, 29ರ ಬುಧವಾರದಂದು ಕುರುಕ್ಷೇತ್ರ, ಧರ್ಮರಾಜ್ಯ ಸ್ಥಾಪನೆ ನಾಟಕವನ್ನು ಕಲಾವಿದರು ಪ್ರದರ್ಶಿಸಲಿದ್ದಾರೆ.ಅಲ್ಲದೇ ಅಂದು ದೇವಾಲಯದ ಕಮಾನು ಮತ್ತು ಗೋಪುರ ಸಹ ಉದ್ಘಾಟನೆಯಾಗಲಿದ್ದು, ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಸೇರಿದಂತೆ ಇನ್ನಿತರ ಗಣ್ಯರು, ಮುಖಂಡರು, ಗ್ರಾಮಸ್ಥರು ಭಾಗಿಯಾಗಲಿದ್ದಾರೆ ಎಂದರು.

ಏಪ್ರಿಲ್ 29ರ ಕೊನೆ ದಿನದಂದು ಇನ್ನಷ್ಟು ವಿಶೇಷ ಪೂಜಾ ಕೈಂಕರ್ಯ ಜರುಗಲಿದ್ದು, ಶ್ರೀ ಸ್ವಾಮಿಯ ಉತ್ಸವ, ಮೆರವಣಿಗೆ ಸಹ ನಡೆಯಲಿದೆ. ಇದಕ್ಕೆ ವೀರಗಾಸೆ, ಡೊಳ್ಳು ವಾದ್ಯ ನಂದಿಧ್ವಜ ಸೇರಿದಂತೆ ಇನ್ನಿತರ ಸಾಂಸ್ಕೃತಿಕ ಕಲಾತಂಡಗಳು ಮೆರುಗು ನೀಡಲಿದ್ದು,ಕಾಗಿನೆಲೆ ಪೀಠದ ಶ್ರೀಗಳು ದಿವ್ಯ ಸಾನಿಧ್ಯ ವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಅರ್ಚಕ ಶಿವಪ್ಪ, ವೀರೇಶ್, ರಾಜು, ಗ್ರಾಮ ಪಂಚಾಯತಿ ಸದಸ್ಯರಾದ ಶಿವನಂಜೇಗೌಡ, ಕೃಷ್ಣ, ದೇವರಾಜ್, ಉಮೇಶ್, ಬಸವರಾಜ, ಅಡಿಗೆ ತಂಬಡಿ ಗೌಡ, ರಘು ಸೇರಿದಂತೆ ಮುಂತಾದವರು ಹಾಜರಿದ್ದರು.

## ಗ್ರಾಮದ ವಿದ್ಯಾರ್ಥಿಯ ಸಾಧನೆ



KOPPAL UNIVERSITY KOPPAL

Provisional Rank List (MJMC)

| Year of Admision | Year of Passed Out | Program Level | Program Name | College Name | Registration Number | Student Name | Gender | Total Maximum Marks | Total Marks Scored | Percentage | CGPA | Rank |
|---|---|---|---|---|---|---|---|---|---|---|---|---|
| 2023-24 | 2024-25 | PG | Master of Journalism and Mass Communication | SKNG Govt First Grade College, Gangavathi | P32JN23A339003 | Pampapathi | Male | 2400 | 1851 | 77.13 | 7.17 | 1 |
| 2023-24 | 2024-25 | PG | Master of Journalism and Mass Communication | SKNG Govt First Grade College, Gangavathi | P32JN23A339004 | Manjunath | Male | 2400 | 1786 | 74.42 | 7.04 | 2 |
| 2023-24 | 2024-25 | PG | Master of Journalism and Mass Communication | KOPPAL UNIVERSITY, MAIN CAMPUS | P32JB23A339002 | SHIVARAJAKUMAR | Male | 2400 | 1784 | 74.33 | 6.98 | 3 |

ಕುಲಸಚಿವರು (ಮೌಲ್ಯಮಾಪನ)

**ಗಂಗಾವತಿ:** ಕೊಪ್ಪಳ ಜಿಲ್ಲೆಯ ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಮುಸ್ಟೂರು ಗ್ರಾಮದ ಪತ್ರಿಕೋಧ್ಯಮ ವಿದ್ಯಾರ್ಥಿಯಾದ ಮಂಜುನಾಥ ಭೈರಿ ಇವರು ತಮ್ಮ ಪ್ರತಿಭೆಯನ್ನು ಸಾಬೀತುಪಡಿಸಿದ್ದಾರೆ.



ಕೊಪ್ಪಳ ವಿಶ್ವವಿದ್ಯಾಲಯವು ಇತ್ತೀಚೆಗೆ ಪ್ರಕಟಿಸಿದ 2024–25ನೇ ಸಾಲಿನ ಸ್ನಾತಕೋತ್ತರ ಪದವಿ ಫಲಿತಾಂಶಗಳಲ್ಲಿ ಪತ್ರಿಕೋದ್ಯಮ ವಿಭಾಗದಲ್ಲಿ ಗಂಗಾವತಿ ನಗರದ ಶ್ರೀ ಕೊಲ್ಲಿ ನಾಗೇಶ್ವರರಾವ್ ಗಂಗಯ್ಯ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ತೋರಿದ್ದಾರೆ.

ಈ ಫಲಿತಾಂಶದಲ್ಲಿ ಕಾರಟಗಿ ತಾಲೂಕು ಮುಸ್ಟೂರು ಗ್ರಾಮದ ವಕೀಲರಾದ ಮಂಜುನಾಥ ಭೈರಿ (74.42%) ಅಂಕಗಳನ್ನು ಪಡೆಯುವ ಮೂಲಕ ಕೊಪ್ಪಳ ವಿಶ್ವವಿದ್ಯಾಲಯಕ್ಕೆ ದ್ವಿತೀಯ ಸ್ಥಾನ ಪಡೆದು ಕಾಲೇಜಿಗೆ ಹೆಮ್ಮೆ ತಂದಿದ್ದಾರೆ. ಇವರು ತಮ್ಮ ಪರಿಶ್ರಮ, ಶಿಸ್ತಿನ ಅಧ್ಯಯನ, ತಂದೆ ತಾಯಿಯ ಪ್ರೋತ್ಸಾಹ ಮತ್ತು ಗುರುಗಳ ಮಾರ್ಗದರ್ಶನದಿಂದ ಈ ಸಾಧನೆ ಸಾಧ್ಯವಾಗಿದೆ ಎಂದು ತಿಳಿಸಿದ್ದಾರೆ. ಹಾಗೆಯೇ ಗಂಗಾವತಿಯ ಹಿರಿಯ ಹಾಗೂ ಕಿರಿಯ ವಕೀಲ ಬಾಂಧವರು ಸಂತಸ ವ್ಯಕ್ತಪಡಿಸಿದ್ದಾರೆ.

# ಜಿಲ್ಲೆಯಾದ್ಯಂತ ಕುಡಿಯುವ ನೀರಿನ ಸಮಸ್ಯೆ ಇಲ್ಲ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಜಿಲ್ಲೆಯಲ್ಲಿ ವಿಪತ್ತು ನಿರ್ವಹಣೆ ಹಾಗೂ ಕುಡಿಯುವ ನೀರಿಗೆ ಅನುದಾನದ ಕೊರತೆಯಿಲ್ಲ. ಅದರಂತೆ, ಜಿಲ್ಲೆಯ ಯಾವುದೇ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಇಲ್ಲ ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಹೇಳಿದರು. ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಂಬರುವ ಬೇಸಿಗೆಯಲ್ಲಿ ನೀರಿನ ಸಮಸ್ಯೆ ಉಲ್ಬಣಿಸಬಹುದಾದ 11 ತಾಲೂಕುಗಳ 38 ಗ್ರಾಮ ಪಂಚಾಯತಿ ವ್ಯಾಪ್ತಿಯ 65 ಗ್ರಾಮಗಳನ್ನು ಗುರುತಿಸಲಾಗಿದೆ. ಅವುಗಳಲ್ಲಿ ನೀರಿನ ಯಾವುದೇ ಸಮಸ್ಯೆ ಉಂಟಾಗದಂತೆ ಅವಶ್ಯಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಏ.9ರ ಇದೇ ದಿನ ಆಲಮಟ್ಟಿ ಜಲಾಶಯದಲ್ಲಿ ಕಳೆದ ವರ್ಷ 29.712 ಟಿಎಂಸಿ ನೀರಿತ್ತು, ಪ್ರಸ್ತುತ 34.895 ಟಿಎಂಸಿ ಅಂದರೆ ಅಂದಾಜು 5.183 ಟಿಎಂಸಿ ನೀರು ಹೆಚ್ಚಿನ ಪ್ರಮಾಣದಲ್ಲಿ ಲಭ್ಯವಿದೆ ತಿಳಿಸಿದರು. ನಾರಾಯಣಪುರ ಜಲಾಶಯದಲ್ಲಿ ಕಳೆದ ವರ್ಷ 19.595 ಟಿಎಂಸಿ, ಪ್ರಸ್ತುತ 21.269 ಟಿಎಂಸಿ ಅಂದರೆ ಅಂದಾಜು 1.674 ಟಿಎಂಸಿ ನೀರು ಹೆಚ್ಚಿನ ಪ್ರಮಾಣದಲ್ಲಿ ಲಭ್ಯವಿದೆ. ಜಿಲ್ಲೆಯ ಬೇಡಿಕೆಯಂತೆ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರು ಇಂಡಿ ತಾಲೂಕಿನ ಜನ–ಜಾನುವಾರುಗಳಿಗೆ



ಕುಡಿಯುವ ನೀರಿನ ಸಲುವಾಗಿ ಇಂಡಿ ಶಾಖಾ ಕಾಲುವೆಯಿಂದ 1.00 ಟಿಎಂಸಿ ನೀರನ್ನು ಏ. 11 ರಿಂದ ಏ. 23 ರವರೆಗೆ (12 ದಿನಗಳು) ನಿತ್ಯ ಒಂದು ಸಾವಿರ ಕ್ಯೂಸೆಕ್ ನಂತೆ ಹರಿಸಲು ಆದೇಶಿಸಲಾಗಿದೆ ಎಂದರು.

ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ 160 ಕೆರೆಗಳಿದ್ದು, ಅವುಗಳಲ್ಲಿ 66 ಕೆರೆಗಳು ಶೇ. 30 ರಷ್ಟು , 43 ಕೆರೆಗಳು ಶೇ. 31 ರಿಂದ 50 ರವರೆಗೆ ಹಾಗೂ 51 ಕೆರೆಗಳು ಶೇ. 51 ರಿಂದ 99 ರವರೆಗೆ ಭರ್ತಿಯಾಗಿವೆ ಎಂದರು. ಜಿಲ್ಲೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಡಿ 40 ಬಹುಹಳ್ಳಿ ಕುಡಿಯುವ ನೀರಿನ ಯೋಜನೆಗಳಿದ್ದು, ಆಲಮಟ್ಟಿ ಜಲಾಶಯದ ಮೇಲೆ 10, ನಾರಾಯಣಪುರ ಜಲಾಶಯದ ಮೇಲೆ 8, ಭೀಮಾ ನದಿ ಮೂಲಕ 5 ಹಾಗೂ ಕಾಲುವೆ ಮುಖಾಂತರ 17 ಬಹು ಹಳ್ಳಿ ಕುಡಿಯುವ ನೀರಿನ ಯೋಜನೆ (ಎಂವಿಎಸ್) ಗಳು ಅವಲಂಬಿತವಾಗಿರುತ್ತವೆ. ಈ ಯೋಜನೆಗಳಡಿ ಗ್ರಾಮೀಣ ಪ್ರದೇಶದ ವ್ಯಾಪ್ತಿಯಲ್ಲಿ ಗ್ರಾಮಗಳಿಗೆ ಕುಡಿಯುವ ನೀರು ಪೂರೈಸಲಾಗುತ್ತದೆ ಎಂದರು. ಜಿಲ್ಲೆಯ ನಗರ ಪ್ರದೇಶಗಳಿಗೆ ನರಬರಾಜು ಮಾಡುತ್ತಿರುವ ನೀರಿನ ಮೂಲಗಳಲ್ಲಿ ಪ್ರಸ್ತುತ ಸಾಕಷ್ಟು ನೀರು ಲಭ್ಯವಿರುತ್ತದೆ. ಹಾಗಾಗಿ ಎಲ್ಲಿಯೂ ನೀರಿನ ಸಮಸ್ಯೆ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಗಳನ್ನು, ತಾಲ್ಲೂಕು ಮಟ್ಟದಲ್ಲಿ ಕಾರ್ಯ ಪಡೆ(ಟಾಸ್ಕ್ ಫೋರ್ಸ್) ಸಭೆಗಳನ್ನು ಹಾಗೂ ಗ್ರಾಮ ಪಂಚಾಯತಿ ಮಟ್ಟದಲ್ಲಿ ಗ್ರಾಮ ಪಂಚಾಯತಿ ವಿಪತ್ತು ನಿರ್ವಹಣಾ ಸಮಿತಿ ಸಭೆಗಳನ್ನು ಜರುಗಿಸಿ ಕುಡಿಯುವ ನೀರಿನ ಯಾವುದೇ ಸಮಸ್ಯೆಯಾಗದಂತೆ ಮೇಲ್ವಿಚಾರಣೆ ಮಾಡಲಾಗುತ್ತಿದೆ ಎಂದು ವಿವರಿಸಿದರು.ಸಾರ್ವಜನಿಕರು ಕುಡಿಯುವ ನೀರಿನ ಯಾವುದೇ ಸಮಸ್ಯೆಗಳಿದ್ದಲ್ಲಿ ಜಿಲ್ಲಾ ಮಟ್ಟದಲ್ಲಿ ಸ್ಥಾಪಿತ ಉಚಿತ ಸಹಾಯವಾಣಿ ಸಂಖ್ಯೆ 1077 ಕ್ಕೆ ಮಾಹಿತಿ ನೀಡಬಹುದಾಗಿದೆ. ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಮಾತನಾಡಿ, ಗ್ರಾಮೀಣ ಭಾಗದಲ್ಲಿ ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಸಲಾಗುತ್ತಿಲ್ಲ. ಗ್ರಾಮೀಣ ಭಾಗದಲ್ಲಿ ಯಾವುದೇ ನೀರಿನ ಸಮಸ್ಯೆ ಇಲ್ಲ ಎಂದರು.

## ಲಕ್ಷ್ಮಣ ಗುತ್ತೇದಾರರಿಂದ ಸಂಚಿಕೆ ಬಿಡುಗಡೆ

• ಮಲ್ಲಮ್ಮ ನುಡಿ ವಾರ್ತೆ ಸುರಪುರ

1857ರ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದ ಕಿಡಿ ಹಚ್ಚಿದ ಸುರಪುರ ನಾಯಕರ ಶೌರ್ಯಗಾಥೆಯನ್ನು ತಮ್ಮ 'ದುಂದುಮೆ' ಹಾಡುಗಳ ಮೂಲಕ ಮನೆಮಾತಾಗಿಸಿರುವ ಹಿರಿಯ ಜಾನಪದ ಕಲಾವಿದ ಲಕ್ಷ್ಮಣ ಬಿ. ಗುತ್ತೇದಾರ್ ಅವರು ಇತ್ತೀಚೆಗೆ ಪ್ರಕಟವಾದ 'ಮಲ್ಲಮ್ಮ ನುಡಿ' ಪತ್ರಿಕೆಯ ವಿಶೇಷ ಸಂಚಿಕೆಯನ್ನು ಬಿಡುಗಡೆಗೊಳಿಸಿದರು.

ಹಿರಿಯರ ಸಮ್ಮುಖದಲ್ಲಿ ಸಂಚಿಕೆಯನ್ನು ಸ್ವೀಕರಿಸಿದ ಅವರು, ಪತ್ರಿಕೆಯ ಸಾಮಾಜಿಕ ಕಳಕಳಿ ಹಾಗೂ ಸಾಹಿತ್ಯಿಕ ನಡೆಯನ್ನು ಶ್ಲಾಘಿಸಿ ಶುಭ ಹಾರೈಸಿದರು.

**ಗುತ್ತೇದಾರರ ಕಲಾ ಜೀವನದ ಪರಿಚಯ:** ಈ ವಿಶೇಷ ಸಂಚಿಕೆಯಲ್ಲಿ ಸುರಪುರದ ಹಿರಿಯ ಸಾಹಿತಿ ಶ್ರೀನಿವಾಸ ಜಾಲವಾದಿ ಅವರು ಲಕ್ಷ್ಮಣ ಗುತ್ತೇದಾರ್ ಅವರ 'ದುಂದುಮೆ' ಹಾಡಿನ ಕಲಾ ಪಯಣ ಮತ್ತು ಅವರ ಸಾಧನೆಗಳನ್ನು ಪರಿಚಯಿಸುವ ವಿಶೇಷ ಲೇಖನ ಬರೆದಿದ್ದಾರೆ. ಸುರಪುರ ಸಂಸ್ಥಾನದ ವೀರ



ಪರಂಪರೆಯನ್ನು ಜನಪದ ಕಲೆಯ ಮೂಲಕ ಇಂದಿನ ಪೀಳಿಗೆಗೆ ತಲುಪಿಸುತ್ತಿರುವ ಗುತ್ತೇದಾರ್ ಅವರ ಕಾರ್ಯಕ್ಕೆ ಅಪಾರ ಮೆಚ್ಚುಗೆ ವ್ಯಕ್ತವಾಗುತ್ತಿದೆ. ಈ ಸಂದರ್ಭದಲ್ಲಿ ಮಹೇಶ ಚಾವಲ್ಕರ್, ಪಾರಪ್ಪ ಗುತ್ತೇದಾರ, ವಿನೋದ್, ರವಿ ಕುಮಾರ ಹಾಗೂ ಗುತ್ತೇದಾರ್ ಕುಟುಂಬದ ಸದಸ್ಯರು ಉಪಸ್ಥಿತರಿದ್ದು, ಕಲಾವಿದರ ಸೇವೆಯನ್ನು ಸ್ಮರಿಸಿ ಸಂತಸ ವ್ಯಕ್ತಪಡಿಸಿದರು.

## ಅಂಬೇಡ್ಕರ್ ಹಬ್ಬ – 2026ರ ತಯಾರಿ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ದಲಿತ ವಿದ್ಯಾರ್ಥಿ ಪರಿಷತ್ ಹಾಗೂ ಜಿಲ್ಲೆಯ ವಿವಿಧ ಪ್ರಗತಿಪರ ಸಂಘ ಸಂಸ್ಥೆಗಳ ಸಹಯೋಗದಲ್ಲಿ ನಾಲ್ಕು ದಿನಗಳ ಎರಡನೆ ಆವೃತ್ತಿಯ "ಅಂಬೇಡ್ಕರ್ ಹಬ್ಬ – 2026" ಯಶಸ್ವಿಯಾಗಿಸಲು ಜಿಲ್ಲೆಯ ಸರ್ವ ಸಮಾಜಗಳ ಜಾತ್ಯಾತೀತ ಮುಖಂಡರ ನೇತೃತ್ವದಲ್ಲಿ ಭರ್ಜರಿ ತಯಾರಿ ನಡೆದಿದೆ.

ಹೌದು ಇಂದು ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಅಂಬೇಡ್ಕರ್ ಹಬ್ಬ – 2026 ರ ಸಂಚಾಲನ ಸಮಿತಿ ಸದಸ್ಯರು ಮಾತಾಡಿ, ನಾಲ್ಕು ದಿನಗಳ ಕಾಲ ನಡೆಯುವ ಅಂಬೇಡ್ಕರ್ ಹಬ್ಬದ ಮಾಹಿತಿಯನ್ನು ಹಂಚಿಕೊಂಡರು.

ಗೋಷ್ಠಿಉದ್ದೇಶಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ ಸಂಚಾಲನ ಸಮಿತಿಯ ಸದಸ್ಯ ಡಾ. ಬಾಬುರಾಜೇಂದ್ರ ನಾಯಿಕ್ ರವರು, ಬುದ್ಧ, ಬಸವ, ಅಂಬೇಡ್ಕರ್, ಜ್ಯೋತಿಬಾ–ಸಾವಿತ್ರಿಬಾಯಿ ಫುಲೆ, ಫಾತಿಮಾ ಶೇಖ್ ರವರು ಯಾವುದೇ ಒಂದು ವರ್ಗದ ಪರ ಕಾರ್ಯ ಮಾಡದೇ ಸರ್ವ ಜನಾಂಗಗಳ ಸಮಾನತೆಗಾಗಿ ಮತ್ತು ಅಭಿವೃದ್ಧಿಗೆ ಶ್ರಮಿಸಿದವರು. ಎಲ್ಲ ಮಹಾಪುರುಷರ ತತ್ವ ಸಿದ್ಧಾಂತಗಳಡಿ ಬಾಬಾಸಾಹೇಬ್ ಅಂಬೇಡ್ಕರ್



ಅವರ ಸಂವಿಧಾನ ಬರೆಯುವ ಮೂಲಕ ಎಲ್ಲಾ ಜನರಿಗೆ ಹಕ್ಕುಗಳನ್ನು ನೀಡಿ, ವಿಶ್ವದ ಅತ್ಯಂತ ಶ್ರೇಷ್ಠವಾದ ಸಂವಿಧಾನವನ್ನು ದೇಶಕ್ಕೆ ಕೊಡುಗೆ–ಯಾಗಿ ನೀಡಿದರು. ಸಮಾನತೆಗಾಗಿ ಹೋರಾಡಿದ ಈ ಎಲ್ಲ ಮಹನೀಯರನ್ನು ನೆನೆಯುವು ಕಾರ್ಯ ಈ ಅಂಬೇಡ್ಕರ್ ಹಬ್ಬದಲ್ಲಿ ನಡೆಯಲಿದೆ ಎಂದರು.

ಅಂಬೇಡ್ಕರ್ ಹಬ್ಬದ ಸಂಚಾಲನ ಸಮಿತಿ ಹಿರಿಯ ಸದಸ್ಯರಾದ ಅಬ್ದುಲ್ ರಜಾಕ್ ಹೊರ್ತಿ ಮಾತಾಡಿ, ಬಾಬಾಸಾಹೇಬರ ಅಂಬೇಡ್ಕರ್ ಅವರ 135 ನೇ ಜಯಂತ್ಯೋತ್ಸವ ಅಂಗವಾಗಿ ಸಮಾನತೆಯ ಅರಿವಿನ ಹಬ್ಬ "ಅಂಬೇಡ್ಕರ್ ಹಬ್ಬ" ಆಚರಣೆ ಮಾಡಲಾಗುತ್ತಿದೆ. ಅಂಬೇಡ್ಕರ್ ಅವರ ಚಿಂತನೆಗಳು ಮತ್ತು ಸಂವಿಧಾನ ಆಶಯಗಳು ಎಲ್ಲ ವರ್ಗಗಳ ಜೊತೆಗೆ ವಿಧ್ಯಾರ್ಥಿ ಯುವಜನರಿಗೆ ಮುಖ್ಯವಾಗಿ ತಲುಪಿಸಬೇಕಿದೆ ಎಂದರು.

# ಇಲಾಖೆಯ ಅಧಿಕಾರಿಗಳೊಂದಿಗೆ ತುರ್ತು ಸಭೆ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಈಶ್ವರ ಖಂಡ್ರೆ ಅವರು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲೆಯ ಎಲ್ಲಾ ಇಲಾಖೆಯ ಅಧಿಕಾರಿಗಳೊಂದಿಗೆ ತುರ್ತು ಸಭೆ ನಡೆಸಿದರು.

ಸಭೆಯಲ್ಲಿ ಔರಾದ್(ಬಿ), ಹುಮನಾಬಾದ್, ಬಸವಕಲ್ಯಾಣ, ಭಾಲ್ಕಿ, ಬೀದರ, ಚಿಟಗುಪ್ಪ, ಕಮಲನಗರ್ ಹಾಗೂ ಹುಲಸೂರು ತಾಲೂಕಿನಾದ್ಯಂತ ಉಂಟಾಗಿರುವ ಬೇಸಿಗೆ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ವಿವರವಾದ ಮಾಹಿತಿ ಪರಿಶೀಲಿಸಲಾಯಿತು. ಕೆಲವು ಪ್ರದೇಶಗಳಲ್ಲಿ ಕುಡಿಯುವ ನೀರಿಗಾಗಿ ಮಹಿಳೆಯರು ಮತ್ತು ಬಾಲಕಿಯರು ದೂರ ದೂರದಿಂದ ನೀರು ತರುತ್ತಿರುವ ಘಟನೆಗಳು ಸಾಮಾಜಿಕ ಜಾಲತಾಣಗಳಲ್ಲಿ



ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಸಚಿವರು ಇದನ್ನು ಗಂಭೀರವಾಗಿ ಪರಿಗಣಿಸಿದರು.

ಇಂತಹ ಸಮಸ್ಯೆಗಳು ಮರುಕಳಿಸದಂತೆ ತಕ್ಷಣವೇ ಕ್ರಮ ಕೈಗೊಳ್ಳಲು ಸೂಚಿಸಿದ ಸಚಿವರು, ಟ್ಯಾಂಕರ್ ಮೂಲಕ ನೀರು ಪೂರೈಕೆ, ದೋಷಗೊಂಡಿರುವ ಬೋರ್‌ವೆಲ್‌ಗಳ ದುರಸ್ತಿ, ಹೊಸ ನೀರಿನ ಮೂಲಗಳ ಅನ್ವೇಷಣೆ ಹಾಗೂ 24ಥ7 ಕುಡಿಯುವ ನೀರಿನ ಸರಬರಾಜು ವ್ಯವಸ್ಥೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಸಂಬಂಧಿತ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಇದೇ ವೇಳೆ, ಇದೇ 11ರಂದು ಬೀದರ ಜಿಲ್ಲೆಗೆ ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ಅವರು ಆಗಮಿಸುತ್ತಿರುವ ಹಿನ್ನಲೆಯಲ್ಲಿ ಪೂರ್ವ ತಯಾರಿ ಕ್ರಮಗಳ ಕುರಿತು ಸಮಗ್ರ ಚರ್ಚೆ ನಡೆಸಿ, ಕಾರ್ಯಕ್ರಮಗಳು ಸುಸೂತ್ರವಾಗಿ ಹಾಗೂ ಯಶಸ್ವಿಯಾಗಿ ನಡೆಯುವಂತೆ ಅಗತ್ಯ ವ್ಯವಸ್ಥೆಗಳನ್ನು ಕಟ್ಟುನಿಟ್ಟಾಗಿ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ಯಾವುದೇ ಗ್ರಾಮ ಅಥವಾ ನಗರ ಪ್ರದೇಶದಲ್ಲಿ ಕುಡಿಯುವ ನೀರಿನ ಕೊರತೆ ಉಂಟಾಗದಂತೆ ನಿರಂತರ ನಿಗಾವಹಿಸಿ, ಜನರಿಗೆ ಯಾವುದೇ ತೊಂದರೆ ಆಗದಂತೆ ತ್ವರಿತ ಹಾಗೂ ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದರು.

# ಕೃತಿಗೆ ಗೌರವ ಕೊಡುವ ಬದಲು ವ್ಯಕ್ತಿಗೆ ಗೌರವ



ಕಾರ್ಯ–ಮನ್ನಣೆ

• ಶರಣಬಸಯ್ಯ ಹಿರೇಮಠ

ಕೆಂಭಾವಿ

**ಅನ್ನದಾತುರಕಿಂತ ಚಿನ್ನದಾತುರ ತೀಕ್ಷ್ಣ ||**
**ಚಿನ್ನದಾತುರಕಿಂತ ಹೆಣ್ಣುಗಂಡೊಲವು ||**
**ಮನ್ನಣೆಯ ದಾಹವೀಯೆಲ್ಲಕಂ ತೀಕ್ಷ್ಣತಮ ||**
**ತಿನ್ನುವುದಾತ್ಮವನೆ – ಮಂಕುತಿಮ್ಮ ||**

ಇದು ಡಿ.ವಿ.ಜಿ ಅವರ ಒಂದು ಕಗ್ಗ. ಅನ್ನದ ಬಯಕೆಗಿಂತ ಚಿನ್ನದ ಬಯಕೆ ತೀಕ್ಷ್ಣವಾದುದು, ಚಿನ್ನದ ಬಯಕೆಗಿಂತ ಹೆಣ್ಣು–ಗಂಡಿನ ಒಲವಿನ ಆತುರ ತೀಕ್ಷ್ಣವಾದುದು. ಆದರೆ 'ಕೀರ್ತಿದಾಹ' ಇವೆಲ್ಲಕ್ಕಿಂತಲೂ ತೀವ್ರವಾದುದು. ಈ ಕೀರ್ತಿಯ ಹಸಿವು ಎಂಬ ಕತ್ತಲೆ ಮನುಷ್ಯನ ಆತ್ಮವನ್ನೇ ತಿಂದು ಹಾಕುತ್ತದೆ ಎಂದು ಡಿ.ವಿ.ಜಿ ಇಲ್ಲಿ ಸೂಚ್ಯವಾಗಿ ತಿಳಿಸಿದ್ದಾರೆ.

ಕೀರ್ತಿ ಎಂಬ ಶನಿ ಮನುಷ್ಯನನ್ನು ಒಳಗಿನಿಂದಲೇ ಕಾಡುತ್ತದೆ, ದಹಿಸುತ್ತಾ ಹೋಗುತ್ತದೆ. ಇದರಿಂದ ಮನುಷ್ಯ ಕ್ರಮೇಣ ತನ್ನತನವನ್ನೇ ಕಳೆದುಕೊಳ್ಳುತ್ತಾನೆ. ಅವನ ನಡೆ–ನುಡಿಗಳೆಲ್ಲಾ ಬರೀ ಬೇರೆಯವರ ಪ್ರಶಂಸೆಗೋಸ್ಕರವೇ ಎಂಬಂತಾಗುತ್ತದೆ. ಸುತ್ತಲಿನವರಿಂದ ಪ್ರಶಂಸೆ ಸಿಕ್ಕರೆ ತೊಂದರೆಯಿಲ್ಲ; ಆದರೆ ಜನ ಪ್ರಾಮುಖ್ಯತೆ ಕೊಡುವುದನ್ನು ನಿಲ್ಲಿಸಿದ ತಕ್ಷಣ ಅವನಲ್ಲಿ ಚಡಪಡಿಕೆ ಶುರುವಾಗುತ್ತದೆ. ಸರಿಯೋ ತಪ್ಪೋ, ಒಟ್ಟಿನಲ್ಲಿ ಸುದ್ದಿಯಲ್ಲಿರಬೇಕು ಎಂಬ ಹಪಾಹಪಿ ಮನುಷ್ಯನನ್ನು ಯಾವ ಮಟ್ಟಕ್ಕಾದರೂ ಇಳಿಸಬಲ್ಲದು. ಅಧಿಕಾರ ಮತ್ತು ಹಣ ಇದ್ದರಂತೂ, ತನ್ನ ಸುತ್ತಲೂ ಭಟ್ಟಂಗಿಗಳ ಕೋಟೆ ಕಟ್ಟಿಕೊಂಡು ಅದರೊಳಗೆ ತಾನೇ ರಾಜನಾಗಿರುತ್ತಾನೆ. ಹೊರಜಗತ್ತಿನಲ್ಲಿ ತಾನು ತೃಣಸಮಾನ ಎಂಬುದನ್ನು ಮರೆತು, ತನ್ನ ಅಧೋಗತಿಗೆ ತಾನೇ ಪ್ರಜ್ಞಾಪೂರ್ವಕವಾಗಿ ಕಾರಣನಾಗುತ್ತಾನೆ. ನಮ್ಮನ್ನು ಜನ ಗುರುತಿಸಬೇಕು ಎಂದು ನಾವೇಕೆ ಹಪಹಪಿಸುತ್ತೇವೆ? ಅಪರಿಚಿತನಾಗಿರುವುದು ಅಪಮಾನಕರವೇ? ಸ್ಥಾನಮಾನ, ಅಂತಸ್ತು ಹಾಗೂ ಪ್ರಸಿದ್ಧಿ ಅಷ್ಟೊಂದು ಮುಖ್ಯವೇ? ಜನ ಗುರುತಿಸಬೇಕೆಂಬ ಹಂಬಲ ಹಾಗೂ ಚಪ್ಪಾಳೆಯ ಗೀಳು ಮನುಷ್ಯನಲ್ಲಿ ಎಷ್ಟೊಂದು ಬಲವಾಗಿದೆಯಲ್ಲವೇ?

**ಸಮಾಜದಲ್ಲಿ ಮುಖ್ಯವಾಗಿ ಮೂರು ವರ್ಗಗಳಿವೆ:** ಮೊದಲನೆಯ ವರ್ಗ, ಜನರು ನನ್ನನ್ನು ಗುರುತಿಸಬೇಕು ಎಂದು ಬಯಸುವವರು., ಎರಡನೆಯ ವರ್ಗ, ಇರುವ ಅಲ್ಪ ಹೆಸರನ್ನು ಉಳಿಸಿಕೊಳ್ಳಲು ಏನು ಬೇಕಾದರೂ ಮಾಡಲು ಸಿದ್ಧರಿರುವವರು. ಮೂರನೆಯ ವರ್ಗ "ನಾನು ಕಷ್ಟಪಡುತ್ತೇನೆ, ಹೆಸರು ಬರುವುದು ಬಿಡುವುದು ಭಗವಂತನಿಗೆ ಬಿಟ್ಟದ್ದು" ಎಂದು ನಂಬುವವರು. ಈ ಪೈಕಿ ಎರಡನೆಯ ವರ್ಗವೇ ಅತ್ಯಂತ ಅಪಾಯಕಾರಿ. ಇಂತವರಿಗೆ ಯಶಸ್ಸು ಸಿಗುವುದಕ್ಕಿಂತಲೂ ನಾಲ್ಕು ಜನ ಗುರುತಿಸಬೇಕು ಎನ್ನುವುದೇ ಮುಖ್ಯವಾಗಿರುತ್ತದೆ. ಇವರು ಗುರುತಿಸಿಕೊಳ್ಳಲು ಎಂತಹ ಕೆಳಮಟ್ಟಕ್ಕಾದರೂ ಇಳಿಯುತ್ತಾರೆ. ಕೊನೆಗೆ ತಾವೇ ತೋಡಿದ ಗುಂಡಿಯಲ್ಲಿ ತಾವೇ ಬೀಳುತ್ತಾರೆ.

ಇತ್ತೀಚೆಗೆ ಕವಿಗೋಷ್ಠಿಯೊಂದರಲ್ಲಿ ನನ್ನ ಮಿತ್ರರೊಬ್ಬರು ಕವಿತೆ ವಾಚನ ಮಾಡಿದ ನಂತರ, ಮತ್ತೊಬ್ಬ ಗೆಳೆಯರು "ಏನ್ ಸಖತ್ ಮಿಂಚಿಬಿಟ್ರಲ್ಲ ಸಾರ್! ನಿಮ್ಮನ್ನು ಜನ ಈಗ ಗುರುತಿಸುತ್ತಾರೆ ಸಾರ್" ಎಂದರು. ಅಂದರೇನು? ಇದರಿಂದ ಜನರಿಗೇನು ಪ್ರಯೋಜನ? ಆ ಕವಿತೆಯಿಂದ ಜನರಿಗೆ ಮನರಂಜನೆಯಾಗಲಿ, ಆನಂದವಾಗಲಿ ಅಥವಾ ಸಮಾಜಕ್ಕೆ ಒಳ್ಳೆಯ ಸಂದೇಶ ಸಿಗುವುದಾದರೆ ಮಾತ್ರ ಅದಕ್ಕೆ ಬೆಲೆ. ಕವಿಯ ಬಗ್ಗೆ ತಿಳಿಯುವುದರಿಂದ ಜನರಿಗೆ ಯಾವ ಲಾಭವೂ ಇಲ್ಲ. ಕವಿತೆಯಿಂದ ಜನರಲ್ಲಿ ವಿವೇಕ ಜಾಗೃತವಾದರೆ ಮಾತ್ರ ಅದು ಸಾರ್ಥಕ. ಹಾಗಾಗಿ, ಮಾಡುವ ಕೆಲಸ ಮತ್ತು ಕೃತಿ ಮುಖ್ಯವೇ ಹೊರತು ವ್ಯಕ್ತಿಯಲ್ಲ. ಆ ಕೃತಿಯನ್ನು ಸೃಷ್ಟಿಸಲು ವ್ಯಕ್ತಿ ಕೇವಲ ಒಂದು ಸಾಧನ ಮಾತ್ರ.

ಮನ್ನಣೆ ಎಂಬುದು ಒಂದು ರೀತಿಯ ಮಾನಸಿಕ ಕಾಯಿಲೆಯಿದ್ದಂತೆ. ಹೆಸರು ಚಾಲ್ತಿಯಲ್ಲಿರಿಸಲು ಮಾಡುವ 'ಗಿಮಿಕ್'ನ ಮತ್ತೊಂದು ರೂಪವಿದು. ಇದರ ಗಂಭೀರ ಪರಿಣಾಮದ ಅರಿವು ಸ್ವತಃ ಅವರಿಗೂ ಇರುವುದಿಲ್ಲ. ಮನುಷ್ಯನಿಗೆ ಒಮ್ಮೆ ಪ್ರಚಾರದ ಗೀಳು ಹತ್ತಿಕೊಂಡರೆ ಮುಗಿಯಿತು. ಅವನು ಏನೆಲ್ಲಾ ಹುಚ್ಚಾಟ ಮಾಡುತ್ತಾನೆಂದರೆ, ತನ್ನ ಮೆದುಳಿಗೂ ಮತ್ತು ನಾಲಿಗೆಗೂ ಇರುವ ಸಂಪರ್ಕವೇ ಕಡಿತಗೊಂಡಿರುವುದು ಅವನಿಗೆ ಗೊತ್ತಾಗುವುದಿಲ್ಲ. ಜನರೆಲ್ಲಾ ಅವನನ್ನು 'ಬಕರಾ' ಎಂದು ನೋಡುತ್ತಿದ್ದರೂ, ತಾನು ಮಹಾನುಭಾವ ಎಂಬ ಭ್ರಮೆಯಲ್ಲಿ ಅವನು ತೇಲುತ್ತಿರುತ್ತಾನೆ. ತನ್ನ ವಿಚಾರಧಾರೆಗಳನ್ನು ಜನರು ಎಂದೋ ಕಸದ ಬುಟ್ಟಿಗೆ ಹಾಕಿರುವುದು ಅವನಿಗೆ ತಿಳಿಯುವುದೇ ಇಲ್ಲ. ಇಡೀ ಭೂಮಂಡಲದ ಜನರೆಲ್ಲಾ ಮೂರ್ಖರು, ತಾನು ಮಾತ್ರ ಪಂಡಿತ ಎಂಬ ಭಾವನೆ ಅವನಲ್ಲಿ ಮನೆಮಾಡುತ್ತದೆ.

ದುರಂತವೆಂದರೆ ನಾವು ಇಂದು ಕೃತಿಗೆ ಗೌರವ ಕೊಡುವುದನ್ನು ಮರೆತು ವ್ಯಕ್ತಿಗೆ ಗೌರವ ಕೊಡುತ್ತಿದ್ದೇವೆ. ಹಾಗಾಗಿಯೇ ನಮ್ಮ ಬಹುಪಾಲು ಚರ್ಚೆಗಳಲ್ಲಿ ಸಾಹಿತ್ಯಕ್ಕಿಂತ ವ್ಯಕ್ತಿಯೇ ಮುಂಚೂಣಿಗೆ ಬರುತ್ತಾನೆ. ನಮಗೆ 'ಆದಿಪುರಾಣ'ಕ್ಕಿಂತ ಪಂಪನೇ ಮೊದಲು ನೆನಪಿಗೆ ಬರುತ್ತಾನೆ! ಸಾಹಿತ್ಯ ಚರ್ಚೆಯಲ್ಲೂ 'ಯಾವ ಬಗೆಯ ಸಾಹಿತ್ಯ' ಎನ್ನುವುದಕ್ಕಿಂತ 'ಯಾರು ಬರೆದದ್ದು' ಎಂಬುದು ಮುಖ್ಯವಾಗುತ್ತಿದೆ. "ಏನನ್ನು ಹೇಳಿದ್ದಾರೆ" ಎನ್ನುವುದಕ್ಕಿಂತ "ಯಾರು ಹೇಳಿದ್ದಾರೆ" ಎಂಬುದರ ಮೇಲೆ ವಿಚಾರದ ತೂಕ ನಿರ್ಧಾರವಾಗುತ್ತಿದೆ. ಯಾವುದಕ್ಕೆ ಬೆಲೆ ಕೊಡಬೇಕು ಎಂಬುದು 'ನಮ್ಮವರು' ಅಥವಾ 'ನಮ್ಮವರಲ್ಲ' ಎಂಬ ಪೂರ್ವಾಗ್ರಹ ಪೀಡಿತ ಭಾವನೆಯಿಂದ ನಿರ್ಧಾರವಾಗುತ್ತಿದೆ.

ಎಷ್ಟೋ ವೇಳೆ ಕೆಲವು ಸ್ಥಾನಗಳಿಗೆ ಅಥವಾ ಅಲಂಕಾರಿಕ ಪದವಿಗಳಿಗೆ ಆ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ. ಪ್ರತಿಯೊಂದು ಸ್ಥಾನಕ್ಕೂ ತನ್ನದೇ ಆದ ಘನತೆ ಮತ್ತು ನಿರೀಕ್ಷೆಗಳಿರುತ್ತವೆ. ಆ ನಿರೀಕ್ಷೆಗಳನ್ನು ನಿಭಾಯಿಸುವ ಸಾಮರ್ಥ್ಯ ವ್ಯಕ್ತಿಯಲ್ಲಿ ಇಲ್ಲದಿದ್ದಾಗ, ಆ ಸ್ಥಾನಕ್ಕೂ ಬೆಲೆಯಿರುವುದಿಲ್ಲ, ಆ ವ್ಯಕ್ತಿಗೂ ಗೌರವ ಸಿಗುವುದಿಲ್ಲ. ಇದರಿಂದ ವ್ಯಕ್ತಿಯ ಮೂಲಕ ಆ ಸ್ಥಾನಕ್ಕೇ ಅಗೌರವ ಉಂಟಾಗುತ್ತದೆ. ಏನೇ ಆಗಲಿ, ನಮಗೆ ವ್ಯಕ್ತಿಪೂಜೆಯೂ ಕೂಡದು, ಸ್ಥಾನಪೂಜೆಯೂ ಕೂಡದು. ಗೌರವ ಅಥವಾ ಅಗೌರವ ಎರಡೂ ಅವರು ಮಾಡುವ ಕಾರ್ಯಗಳಿಗೇ ಸಲ್ಲಬೇಕು, ಅಲ್ಲವೇ?

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)